ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily

SP NEWS ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:163 ಸಂಪುಟ: 05 ಸಂಚಿಕೆ: 163 Date:19-07-2026 Sunday RNI NO: KARKAN/2021/80805 L2/RNP-1285/TMR/2025-27 Page: 4 ಪುಟ : 4 Price: 1.00 ಬೆಲೆ: 1.00 ರೂ

ಬರ ಪರಿಸ್ಥಿತಿ ಎದುರಿಸಲು ಸರ್ಕಾರ ಜವಾಬ್ದಾರಿಯಿಂದ ಕೆಲಸ ಮಾಡುತ್ತಿದೆ

ಸೂರ್ಯಪ್ರಗತಿನ್ಯೂಸ್.ಕಾಂ



ಬೆಂಗಳೂರು,:– ರಾಜ್ಯದ 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತುಮಕೂರಿನಲ್ಲಿ ನಿರ್ಮಾಣವಾಗಬೇಕು ಎಂಬ ಇಚ್ಛೆಯನ್ನು ನಾನು ಮೊದಲಿನಿಂದಲೂ ಹೇಳಿದ್ದೇನೆ ಎಂದು ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಅವರು ಹೇಳಿದರು. ಸದಾಶಿವನಗರದ ಗೃಹ ಕಚೇರಿ ಬಳಿ ಸುದ್ದಿಗಾರರೊಂದಿಗೆ ಅವರು ಮಾತನಾಡಿ, 2ನೇ ವಿಮಾನನಿಲ್ದಾಣ ತುಮಕೂರಿನಲ್ಲಿ ಆಗಬೇಕೆಂದು ಬಿ.ವೈ.ವಿಜಯೇಂದ್ರ ಅವರು ತಮಗೆ ತಿಳಿದ ರೀತಿಯಲ್ಲಿ ಹೇಳಿದ್ದಾರೆ. 2ನೇ ವಿಮಾನ ನಿಲ್ದಾಣ ತುಮಕೂರಿಗೆ ಆಗಬೇಕು ಎಂಬ ಇಚ್ಛೆಯನ್ನು ನಾನು ಮೊದಲಿನಿಂದಲೂ ಹೇಳಿದ್ದೇನೆ. ತಾಂತ್ರಿಕ ಸಮಿತಿಯು ನೆಲಮಂಗಲದ ಕುಣಿಗಲ್ ರಸ್ತೆ ಹಾಗೂ ಬಿಡದಿ ಪ್ರದೇಶಗಳನ್ನು ಪರಿಶೀಲಿಸಿ ಸರ್ಕಾರಕ್ಕೆ ಶಿಫಾರಸು ಸಲ್ಲಿಸಿದ್ದು, ಡಿಜಿಸಿಎ ತಾಂತ್ರಿಕ ಪರಿಶೀಲನೆ ನಡೆಸಿದ ಬಳಿಕ ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದು ಹೇಳಿದರು. ತುಮಕೂರಿನಲ್ಲಿ ವಿಮಾನ ನಿಲ್ದಾಣವಾದರೆ ಸುಮಾರು 20 ಜಿಲ್ಲೆಗಳ ಜನರಿಗೆ ಅನುಕೂಲವಾಗಲಿದ್ದು, ತಾಂತ್ರಿಕವಾಗಿಯೂ ಸೂಕ್ತ ಸ್ಥಳವಾಗಿದೆ ಎಂದು ಅಭಿಪ್ರಾಯಪಟ್ಟರು.

ಬಿಡದಿ ಟೌನ್ ಶಿಪ್ ವಿರೋಧಿಸಿ ಪಾದಯಾತ್ರೆ ಕೈಗೊಳ್ಳುತ್ತಿರುವ ಕುರಿತು ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಸರ್ಕಾರ ಅಭಿವೃದ್ಧಿಯ ದೃಷ್ಟಿಯಿಂದ ಯೋಜನೆಯನ್ನು ಕೈಗೆತ್ತಿಕೊಂಡಿದ್ದು, ಭೂಸ್ವಾಧೀನದ ವಿಚಾರದಲ್ಲಿ ಯಾರ ಮೇಲೂ ಒತ್ತಾಯ ಮಾಡುವುದಿಲ್ಲ; ಮನವೊಲಿಸುವ ಪ್ರಯತ್ನ ನಡೆಸಲಾಗುವುದು ಎಂದು ಮುಖ್ಯಮಂತ್ರಿಯವರು ಈಗಾಗಲೇ ಸ್ಪಷ್ಟಪಡಿಸಿದ್ದಾರೆ. ಈ ವಿಷಯವನ್ನು ರಾಜಕೀಯ ದೃಷ್ಟಿಯಿಂದ ನೋಡದೆ, ರಾಜ್ಯದ ಅಭಿವೃದ್ಧಿಯ ದೃಷ್ಟಿಯಿಂದ ಪರಿಗಣಿಸಬೇಕು ಎಂದು ಹೇಳಿದರು. ಗ್ರಾಮೀಣಾಭಿವೃದ್ಧಿ ಇಲಾಖೆಯ ಇ–ಸ್ವತ್ತು ವಿತರಣೆಯನ್ನು ವೇಗಗೊಳಿಸಲು ಕಂದಾಯ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿದ್ದು, ಹಲವು ವರ್ಷಗಳಿಂದ ಬಾಕಿ ಉಳಿದಿರುವ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು. ರಾಜ್ಯದಲ್ಲಿನ ಬರ ಪರಿಸ್ಥಿತಿಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಅವರೊಂದಿಗೆ ಬೆಳಗಾವಿ ಕಂದಾಯ ವಿಭಾಗ, ಕಲಬುರ್ಗಿ ಕಂದಾಯ ವಿಭಾಗ, ತುಮಕೂರು ಹಾಗೂ ಚಿತ್ರದುರ್ಗ ಜಿಲ್ಲೆಗಳ ಪ್ರಗತಿ ಪರಿಶೀಲನೆ ನಡೆಸಲಾಗಿದೆ. ಬರ ಪರಿಸ್ಥಿತಿಯನ್ನು ಎದುರಿಸಲು ಮುಂದೆ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಸಿಇಒಗಳೊಂದಿಗೆ ನಾಳೆ ವಿಡಿಯೊ ಕಾನ್ಫರೆನ್ಸ್ ಮೂಲಕ ಮುಖ್ಯಮಂತ್ರಿಯವರು ಸಭೆ ಕರೆದಿದ್ದಾರೆ. ಪರಿಸ್ಥಿತಿಯನ್ನು ಅವಲೋಕಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಲಾಗುವುದು ಎಂದರು.

ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ 5 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದ್ದು, ಒಟ್ಟು 329 ಕೋಟಿ ಲಭ್ಯವಿದೆ. ಇದಲ್ಲದೆ ಜಿಲ್ಲಾಧಿಕಾರಿಗಳ ಪಿಡಿ ಖಾತೆಗಳಲ್ಲಿ ಸುಮಾರು 600 ಕೋಟಿ ಲಭ್ಯವಿದ್ದು, ಅಗತ್ಯ ಸಂದರ್ಭಗಳಲ್ಲಿ ಬಳಸಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ಹೇಳಿದರು.

ಸರ್ಕಾರ ಪತ್ರ ಬರೆಯಲು ಸೀಮಿತವಾಗಿದೆ ಎಂಬ ವಿಪಕ್ಷದವರ ಆರೋಪದ ಕುರಿತು ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಕುಡಿಯುವ ನೀರಿಗೆ ಯಾವುದೇ ತೊಂದರೆ ಆಗಬಾರದು ಎಂಬ ನಿಟ್ಟಿನಲ್ಲಿ ಹಣ ಬಿಡುಗಡೆ ಮಾಡಿದ್ದೇವೆ. ಇದನ್ನು ಎಲ್ಲಾ ಡಿಸಿ, ಜಿಲ್ಲಾ ಪಂಚಾಯತ್ ಸಿಇಒಗಳು ಪರಿಶೀಲನೆ ನಡೆಸುತ್ತಾರೆ.ನಾವು ಸುಮ್ಮನೆ ಕುಳಿತುಕೊಂಡು ಕಾಲಕಳೆಯುತ್ತಿಲ್ಲ. ಜವಾಬ್ದಾರಿಯಿಂದ ಕೆಲಸ ಮಾಡುತ್ತಿದ್ದೇವೆ ಎಂದು ಹೇಳಿದರು.

'ಎಲ್ಲಾ ಗ್ರಾಮಗಳಲ್ಲೂ ಸುಸಜ್ಜಿತ ರಸ್ತೆಯ ಅಭಿವೃದ್ಧಿ ಗುರಿ'

ಸಿ.ಸಿ ರಸ್ತೆ, ಚರಂಡಿ ಕಾಮಗಾರಿಗೆ ಸುರೇಶ್‌ಗೌಡ ಭೂಮಿ ಪೂಜೆ



ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ವಿವಿಧ ಯೋಜನೆಗಳ ಅನುದಾನ ವಿನಿಯೋಗಿಸಿಕೊಂಡು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಎಲ್ಲಾ ಗ್ರಾಮಗಳಲ್ಲೂ ಸುಸಜ್ಜಿತ ರಸ್ತೆ, ಚರಂಡಿ ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ. ಹಂತಹಂತವಾಗಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಶಾಸಕ ಬಿ. ಸುರೇಶ್ ಗೌಡರು ಹೇಳಿದರು.

ಶನಿವಾರ ಕ್ಷೇತ್ರದ ಹೆಬ್ಬೂರು ಹೋಬಳಿಯ ಬಳ್ಳಗೆರೆ ಗ್ರಾಮ ಪಂಚಾಯ್ತಿಯ ಮಾಯಮ್ಮನ ಪಾಳ್ಯದಿಂದ ಕರ್ಣಕುಪ್ಪೆ ವರೆಗೆ ಸಿ.ಸಿ ರಸ್ತೆ ಹಾಗೂ ಸಿ.ಸಿ ಚರಂಡಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದ ಶಾಸಕರು, ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ಸುಮಾರು 35 ಲಕ್ಷರೂಗಳ ಅನುದಾನದಲ್ಲಿ ಈ ಕಾಮಗಾರಿ ಆರಂಭಿಸಲಾಗಿದೆ. ಸಕಾಲದಲ್ಲಿ ಕಾಮಗಾರಿ ಪೂರ್ಣಗೊಳಿಸಿ ಜನರ ಬಳಕೆಗೆ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಬಳ್ಳಗೆರೆ ಗ್ರಾಮ ಪಂಚಾಯ್ತಿ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು, ಮುಖಂಡರಾದ ಬಳ್ಳಗೆರೆ ವೆಂಕಟೇಶಣ್ಣ, ಮರಿಯಣ್ಣ, ಶಾಂತಕುಮಾರ್, ಸ್ವಾಮಿ, ಬೆಸ್ತರಪಾಳ್ಯ ನವೀನ್, ಶ್ರೀಕಂಠಯ್ಯನಪಾಳ್ಯ ಗೌಡ, ಸಿದ್ದಪ್ಪ, ರಂಗರಾಮಣ್ಣ, ಬ್ಯಾಟರಾಯಪ್ಪ, ಸಿದ್ಧಲಿಂಗಪ್ಪ, ಕೆರೆಕೋಡಿ ಮೂರ್ತಿ,

ಜೀವನದ ರೀತಿಯನ್ನು ಬದಲಾಯಿಸುವ ಶಕ್ತಿ ಶಿಕ್ಷಣಕ್ಕಿದೆ ಎಂದು ಮಾಜಿ ಸಚಿವ, ಶಾಸಕ ಕೆ.ಎನ್.ರಾಜಣ್ಣ

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ; ಪಟ್ಟಣದಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಘಟಕದ ವತಿಯಿಂದ ಕನ್ನಡ ಭವನದಲ್ಲಿ ಶನಿವಾರದಂದು 2025 –26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ತಾಲೂಕಿನ ಶಾಲಾ– ಕಾಲೇಜುಗಳಲ್ಲಿ ಕನ್ನಡ ಭಾಷಾ ವಿಷಯದಲ್ಲಿ ಎಸ್ ಎಸ್ ಎಲ್ ಸಿ ಯಲ್ಲಿ 125ಕ್ಕೆ 125 ಹಾಗೂ ದ್ವಿತೀಯ ಪಿಯುಸಿಯಲ್ಲಿ 100ಕ್ಕೆ 100 ಅಂಕಗಳನ್ನು ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ತಾಲೂಕು 7ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಹಕರಿಸಿದವರಿಗೆ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರಮ್ಮಿಸುವ ಕೆಲಸ ಶಿಕ್ಷಕರಿಂದ ಆಗಬೇಕಾಗಿದೆ. ವಿದ್ಯೆ ಸಾಧಕನ ಸ್ವತ್ತೇ ಹೊರತು ಸೋಮಾರಿಯ ಸ್ವತ್ತಲ್ಲ. ಯಾವುದೇ ಕಾರಣಕ್ಕೂ ಮಕ್ಕಳು ಶಾಲೆಗೆ ಗೈರು ಹಾಜರಾಗಬಾರದು. ಅದೇ ರೀತಿ ವಿದ್ಯಾಭ್ಯಾಸದಲ್ಲಿ ಕುಂಠಿತ ಆಗದಂತೆ ಪೋಷಕರು ನೋಡಿಕೊಳ್ಳಬೇಕು. ಗುರು ಪರಂಪರೆ ಮತ್ತು ಶಿಷ್ಯ ಪರಂಪರೆ ನಿರಂತರವಾಗಿ ಇರಬೇಕು. ವಿದ್ಯೆಯ ಮಹತ್ವವನ್ನು ಮಕ್ಕಳಿಗೆ ತಿಳಿಸುವುದು ಅಗತ್ಯ ಎಂದರು.

ತಾಲೂಕಿನಲ್ಲಿ ಮಕ್ಕಳ ಶಿಕ್ಷಣಕ್ಕೆ ಅಗತ್ಯವಾದ ಎಲ್ಲಾ ರೀತಿಯ ನೆರವನ್ನು ನೀಡಲಾಗುತ್ತಿದೆ. ಉಚಿತ ನೋಟ್ ಬುಕ್, ಸಮವಸ್ತ್ರ, ಬಸ್ ವ್ಯವಸ್ಥೆ ಮಧ್ಯಾಹ್ನದ ಬಿಸಿ ಊಟ ಯೋಜನೆ, ಕಲ್ಪಿಸಲಾಗಿದ್ದು, ಇದನ್ನು ಉಪಯೋಗಿಸಿಕೊಂಡು ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆದು ವಿದ್ಯಾವಂತರಾಗಬೇಕು ಎಂದು ತಿಳಿಸಿದರು. ಏಳನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದ ಕೆ ಪಿ ನಟರಾಜು ಮಾತನಾಡಿ ಸರ್ಕಾರ ಕೆಪಿಎಸ್ ಶಾಲೆಗಳಲ್ಲಿ ಈಗಿರುವ ಶಾಲೆಗಳನ್ನು ವಿಲೀನಗೊಳಿಸಿ ಕೆಪಿಎಸ್ ಶಾಲೆಗಳನ್ನು ನಿರ್ಮಾಣ ಮಾಡುತ್ತಿರುವುದರಿಂದ ಸರ್ಕಾರಿ ಶಾಲೆಗಳು ಸಂಪೂರ್ಣವಾಗಿ ಇಂಗ್ಲೀಷ್ ಮಾಧ್ಯಮದ ಶಾಲೆಗಳಾಗಿ ಬದಲಾಯಿಸಲಾಗುತ್ತಿದೆ ಇದರಿಂದ ಕಾಲಗತಿಯಲ್ಲಿ ಕನ್ನಡ ಕಣ್ಮರೆಯಾಗುವ ಆತಂಕ ವ್ಯಕ್ತಪಡಿಸಿದ ಅವರು ಈ ಹಿಂದೆ ಕುವೆಂಪುರಂತಹ ಮಹನೀಯರು ಕಟ್ಟಿದ ಕನ್ನಡ ಮಾಧ್ಯಮದ ಶಾಲಾ ಶಿಕ್ಷಣವನ್ನು ಕೆಪಿಎಸ್ ಶಾಲೆಗಳ ಮೂಲಕ ಧ್ವಂಸಗೊಳಿಸಲಾಗುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ಪ್ರವೇಶ ಕುಂಠಿತವಾಗುತ್ತಿರುವ ನೆಪ ಹೇಳಿ ಸರ್ಕಾರ ಕೆಪಿಎಸ್ ಶಾಲೆಗಳನ್ನು ಪ್ರಾರಂಭಿಸಲಾಗುತ್ತಿದೆ. ಒಂದರಿಂದ 10ನೇ ತರಗತಿವರೆಗೂ ಕನ್ನಡ ಮಾಧ್ಯಮದಲ್ಲಿ ಓದುತ್ತಿರುವವರ ಸಂಖ್ಯೆ ಅಂದಾಜು 5 ಲಕ್ಷ ಇದ್ದು, ಇಂಗ್ಲೀಷ್ ಮಾಧ್ಯಮದಲ್ಲಿ ಓದುತ್ತಿರುವ ಸಂಖ್ಯೆ 3 ಲಕ್ಷ ಅಂದರೆ ಶೇ. 65 ರಷ್ಟು ವಿದ್ಯಾರ್ಥಿಗಳು ಕನ್ನಡ ಮಾಧ್ಯಮದಲ್ಲಿ ಶೇಕಡ 35% ವಿದ್ಯಾರ್ಥಿಗಳು ಇಂಗ್ಲಿಷ್ ಮಾಧ್ಯಮದಲ್ಲಿ ಓದುತ್ತಿದ್ದಾರೆ.



ಇದರಿಂದ ಬಹು ಸಂಖ್ಯಾತ ಕನ್ನಡ ಮಾಧ್ಯಮ ಶಿಕ್ಷಣ ಹತ್ತನೇ ತರಗತಿಗೆ ಕೊನೆಗೊಳ್ಳುತ್ತಿದೆ ಕಾರಣ ಎಸ್ ಎಸ್ ಎಲ್ ಸಿ ನಂತರ ಕನ್ನಡ ಮಾಧ್ಯಮ ಶಿಕ್ಷಣ ಇಲ್ಲದ ಕಾರಣ ಅಧಿಕ ಸಂಖ್ಯೆಯ ಮಕ್ಕಳು ಉನ್ನತ ಶಿಕ್ಷಣದ ಅವಕಾಶದಿಂದ ನಿರಾಕರಿಸಲ್ಪಡುತ್ತಿದ್ದಾರೆ. ಆದ್ದರಿಂದ ಸರ್ಕಾರ ಇನ್ನಾದರೂ ಕೆಪಿಎಸ್ ಶಾಲೆಗಳನ್ನು ಪ್ರಾರಂಭ ಮಾಡುವುದನ್ನು ನಿಲ್ಲಿಸಬೇಕು ಅಥವಾ ಹಿಂದೆ ಸರಿಯಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಸಿದ್ದಲಿಂಗಪ್ಪ ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ ಗೆ 110 ವರ್ಷಗಳ ಇತಿಹಾಸವಿದೆ. ಕನ್ನಡಿಗರಿಗೆ ಶಾಸಕ ಕೆ.ಎನ್. ರಾಜಣ್ಣರವರಂತಹ ಕೊಡುಗೈ ದಾನಿಗಳಿದ್ದಾರೆ. ಅವರಲ್ಲಿ ಸೇವಾ ಮನೋಭಾವವನ್ನು ಕಾಣಬಹುದು. ಇಂತಹ ಸೇವಾ ಮನೋಭಾವದಿಂದ ಕನ್ನಡಿಗರನ್ನು ಉಳಿಸಬಹುದು. ವಿದ್ಯಾರ್ಥಿಗಳು ಕೇವಲ ಅಂಕ ಗಳಿಕೆಗೆ ಸೀಮಿತವಾಗದೇ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳಬೇಕು ಎಂದು ತಿಳಿಸಿದರು.


ಹಿರಿಯ ಸಾಹಿತಿ ಪ್ರೊ. ಮಲನ ಮೂರ್ತಿ ಮಾತನಾಡಿ, ಅಂಕ ಗಳಿಕೆಯ ಆಧಾರದ ಮೇಲೆ ಗೌರವಿಸುವುದಕ್ಕಿಂತ ಹೆಚ್ಚಾಗಿ ಜ್ಞಾನ ಸಂಪಾದನೆ ಅರ್ಹತೆ ಮುಖ್ಯವಾಗಬೇಕು. ಸಮಾಜಮುಖಿ ಚಿಂತನೆ ಇಲ್ಲದ ಶಿಕ್ಷಣ ಸಾಧನೆ ಅಲ್ಲ, ಜನ ಮುಖಿ ಅಕ್ಷರ ದೇಶದ ಅಭಿವೃದ್ಧಿಗೆ ಸಾಧ್ಯವಾಗುತ್ತದೆ. ಸಿರಿಗನ್ನಡಂ ಗೆಲ್ಗೆ ಕಾಲ ಮುಗೀತು ! ಪ್ರಸ್ತುತ ಸರಿಗನ್ನಡಂ ಗೆಲ್ಗೆ ಆಗಬೇಕು. ಓದುವ –ಬರೆಯುವ– ಮಾತನಾಡುವ ,ಸ್ಪಷ್ಟತೆ ಶುದ್ಧತೆ ಬದ್ಧವಾಗಬೇಕೆಂದರು.

ಕಾರ್ಯಕ್ರಮದಲ್ಲಿ ಉಪ ವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಸಿಲ್ದಾರ್ ನಂದಿನಿ, ಹಿರಿಯ ಸಾಹಿತಿ ಪ್ರೊ. ಮಲನ ಮೂರ್ತಿ, ಖಾಸಗಿ ಶಾಲೆಗಳ ಒಕ್ಕೂಟದ ಅಧ್ಯಕ್ಷ ಎಂ.ಎಸ್ .ಶಂಕರ್ ನಾರಾಯಣ ,,ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ರಂಗಪ್ಪ, ಲೋಕೋಪಯೋಗಿ ಇಲಾಖೆ ಇಇ ಹನುಮಂತರಾವ್, ತಾಪಂ ಇ ಓ ಬಿ .ಕೆ .ಉತ್ತಮ್,ವಲಯ ಅರಣ್ಯಾಧಿಕಾರಿ ಸುರೇಶ್, ಪುರಸಭೆ ಮುಖ್ಯಾಧಿಕಾರಿ ಸುರೇಶ್, ತಾಲೂಕು ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಟಿ. ರಂಗಧಾಮಯ್ಯ ,ದೊಡ್ಡೇರಿ ಹೋಬಳಿ ಘಟಕದ ಕಾರ್ಯದರ್ಶಿ ಸಿ.ಎನ್. ರಮೇಶ್ ಪತ್ರಕರ್ತರ ಸಂಘದ ಅಧ್ಯಕ್ಷ ಎಂಎನ್ ರಾಜೇಂದ್ರ ಬಾಬು ಇದ್ದರು

ಮೌನ ಅಚರಣೆ:– ಕಾರ್ಯಕ್ರಮಕ್ಕೆ ಆರಂಭಕ್ಕೂ ಮುನ್ನ ಇತ್ತೀಚಿಗೆ ಮೃತ ಪಟ್ಟ ಗಾಯಕಿ ಎಸ್.ಜಾನಕಿ ಆತ್ಮಕ್ಕೆ ಶಾಂತಿ ಕೋರಿ ಒಂದು ನಿಮಿಷ ಮೌನ ಆಚರಣೆ ಮಾಡಲಾಯಿತು

ಹೆಚ್.ಡಿ.ದೇವೇಗೌಡರ ಪತ್ನಿ ಚನ್ನಮ್ಮ ನಿಧನ

ವಿ.ಸೋಮಣ್ಣ, ಡಾ.ಜಿ.ಪರಮೇಶ್ವರ್ ಸಂತಾಪ



ತುಮಕೂರು : ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರ ಧರ್ಮಪತ್ನಿ ಚನ್ನಮ್ಮ (85) ಅವರು ನಿಧನರಾಗಿದ್ದಾರೆ. ಕಳೆದ ಕೆಲವು ವರ್ಷಗಳಿಂದ ಉಸಿರಾಟದ ಸಮಸ್ಯೆಯಿಂದ ಬಳಲುತ್ತಿದ್ದ ಅವರ ಆರೋಗ್ಯದಲ್ಲಿ ದಿಢೀರ್ ಏರುಪೇರು ಕಂಡುಬಂದ ಹಿನ್ನೆಲೆಯಲ್ಲಿ, ಜುಲೈ 15ರಂದು ಅವರನ್ನು ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಅವರು ಶನಿವಾರ ಸಂಜೆ ನಿಧನ ಹೊಂದಿದರು.

ದೇವೇಗೌಡರ ದೀರ್ಘ ಹಾಗೂ ಸುದೀರ್ಘ ರಾಜಕೀಯ ಪಯಣದಲ್ಲಿ ಸದಾ ನೆರಳಾಗಿ, ಇಡೀ ಕುಟುಂಬದ ಜವಾಬ್ದಾರಿಯನ್ನು ಹೊತ್ತು ಮುನ್ನಡೆಸಿದ್ದ ಗಟ್ಟಿಗಿತ್ತಿ ಚನ್ನಮ್ಮ ಅವರ ಅಗಲಿಕೆ ಗೌಡರ ಕುಟುಂಬಕ್ಕೆ ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತರಿಗೆ ತೀವ್ರ ಆಘಾತವನ್ನುಂಟು ಮಾಡಿದೆ.

ಪತ್ರಕರ್ತ ಈಶ್ವರ್ ಮನೆಗೆ ಡಿಸಿ ಭೇಟಿ: ಕುಟುಂಬಸ್ಥರಿಗೆ ಸಾಂತ್ವಾನ; ಪತ್ರಿಕಾ ಭವನದಲ್ಲಿಂದು ನುಡಿ ನಮನ

ಸೂರ್ಯಪ್ರಗತಿನ್ಯೂಸ್.ಕಾಂ

ಆದ್ಯಶ್ರೀಯೊಂದಿಗೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಆತ್ಮೀಯ ಕ್ಷಣಗಳು

ತುಮಕೂರು: ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಸಂಜೆ ಮೃತ ಪತ್ರಕರ್ತ ಈಶ್ವರ್ ಅವರ ನಿವಾಸಕ್ಕೆ ಭೇಟಿ ನೀಡಿ, ಅವರ ಪತ್ನಿ ಅನಿತ ಆರ್. ಹಾಗೂ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು. ಕುಟುಂಬದೊಂದಿಗೆ ಕೆಲಕಾಲ ಆತ್ಮೀಯವಾಗಿ ಮಾತುಕತೆ ನಡೆಸಿ ಧೈರ್ಯ ತುಂಬಿದರು. ಈ ಸಂದರ್ಭದಲ್ಲಿ ಈಶ್ವರ್ ಅವರ ಪುತ್ರಿ ಆದ್ಯಶ್ರೀಯೊಂದಿಗೆ ವಿಶೇಷವಾಗಿ ಸಮಯ ಕಳೆದ ಜಿಲ್ಲಾಧಿಕಾರಿಗಳು, ಆಕೆಯೊಂದಿಗೆ ಆತ್ಮೀಯವಾಗಿ ಮಾತನಾಡಿ ಸಂತಸದ ಕ್ಷಣಗಳನ್ನು ಹಂಚಿಕೊಂಡರು. ಬಳಿಕ ತಮ್ಮ ಪುತ್ರಿ ಶಿವಾಂಕಿನಿಯೊಂದಿಗೆ ತುಮಕೂರಿನ ಅಮಾನಿಕೆರೆಯಲ್ಲಿ ಬೋಟಿಂಗ್ಗೆ ತೆರಳಿದ ಅವರು, ಆದ್ಯಶ್ರೀಯನ್ನೂ ಜೊತೆಯಲ್ಲಿ ಕರೆದುಕೊಂಡು ಬೋಟಿಂಗ್ ಮಾಡಿಸಿ ಖುಷಿಯ ಕ್ಷಣಗಳನ್ನು ಅನುಭವಿಸಿದರು. ಬೋಟಿಂಗ್ ವೇಳೆ ಮಕ್ಕಳೊಂದಿಗೆ ಬೆರೆತು ಮಾತನಾಡಿದ ಜಿಲ್ಲಾಧಿಕಾರಿಗಳಿಗೆ ಆದ್ಯಶ್ರೀ ತಾನು ಚೆನ್ನಾಗಿ ಓದಿ ವೈದ್ಯೆಯಾಗುವ ಕನಸು ಹೊಂದಿರುವುದಾಗಿ ತಿಳಿಸಿದಳು. ತನ್ನ ಶಾಲೆಯ ನೋಟ್ ಪುಸ್ತಕಗಳನ್ನು ತೋರಿಸಿದಾಗ ಜಿಲ್ಲಾಧಿಕಾರಿಗಳು ಆಕೆಯನ್ನು ಮೆಚ್ಚಿ ಉತ್ತಮವಾಗಿ ಓದುವಂತೆ ಪ್ರೋತ್ಸಾಹಿಸಿದರು.





ಆಡಳಿತಾತ್ಮಕ ಜವಾಬ್ದಾರಿಗಳ ನಡುವೆಯೂ ದುಃಖದಲ್ಲಿರುವ ಕುಟುಂಬಕ್ಕೆ ಸಾಂತ್ವನ ಹೇಳುವುದರ ಜೊತೆಗೆ ಪುಟ್ಟ ಬಾಲಕಿಯ ಮನದಲ್ಲಿ ಆತ್ಮವಿಶ್ವಾಸ ತುಂಬುವ ಪ್ರಯತ್ನ ಮಾಡಿದ ಜಿಲ್ಲಾಧಿಕಾರಿಯ ನಡೆ ಮೆಚ್ಚುಗೆಗೆ ಪಾತ್ರವಾಯಿತು. ಅಮಾನಿಕೆರೆಯ ಸುಂದರ ವಾತಾವರಣದಲ್ಲಿ ಕಳೆದ ಈ ಆತ್ಮೀಯ ಕ್ಷಣಗಳು ಕುಟುಂಬದ ಸದಸ್ಯರು ಹಾಗೂ ನೆರೆದವರ ಮನದಲ್ಲಿ ವಿಶೇಷ ನೆನಪಾಗಿ ಉಳಿದವು.

ಇದೇ ವೇಳೆ ಗುಬ್ಬಿಯ ಚಾಲುಕ್ಯ ಆಸ್ಪತ್ರೆಯ ವೈದ್ಯರಾದ ಡಾ.ನಾಗಭೂಷಣ್ ಅವರು ಈಶ್ವರ್ ಮಗಳ ವಿದ್ಯಾಭ್ಯಾಸಕ್ಕಾಗಿ 10 ಸಾವಿರ ರೂ ಚೆಕ್ ನೀಡಲಾಯಿತು. ಈ ವೇಳೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಎಲ್.ಯೋಗೀಶ್, ಉಪಾಧ್ಯಕ್ಷರಾದ ಪ್ರಸನ್ನ ದೊಡ್ಡಗುಣಿ, ಖಜಾಂಚಿ ಸತೀಶ್, ನಿರ್ದೇಶಕರಾದ ಜಗನ್ನಾಥ್ ಕಾಳೇನಹಳ್ಳಿ, ಸುರೇಶ್ ವತ್ಸ, ಮಧು.ಆರ್. ಎಲ್, ರಘು.ಎ.ಎನ್ ಸೇರಿದಂತೆ ಕುಟುಂಬದವರು ಇದ್ದರು.



ಸೋನಂ ವಾಂಗ್ಚುಕ್ ಅವರನ್ನು ಬಲವಂತವಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ; ಕೇಂದ್ರ ಸರ್ಕಾರದ ಕ್ರಮ ಖಂಡನೀಯ; ಸಿಪಿಐ(ಎಂ)

ಸೂರ್ಯಪ್ರಗತಿನ್ಯೂಸ್.ಕಾಂ

ಶಿಕ್ಷಣ ಕ್ಷೇತ್ರದಲ್ಲಿನ ಅಕ್ರಮಗಳು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ರಾಜೀನಾಮೆ ನೀಡಬೇಕು ಹಾಗೂ ರಾಷ್ಟ್ರೀಯ ಶಿಕ್ಷಣ ನೀತಿ (ಎನ್ಇಪಿ2020) ಹಿಂಪಡೆಯಬೇಕು ಎಂದು ಒತ್ತಾಯಿಸಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಶಿಕ್ಷಣ ಹೋರಾಟಗಾರ ಸೋನಂ ವಾಂಗ್ಚುಕ್ ಅವರನ್ನು ಬಲವಂತವಾಗಿ ಆಸ್ಪತ್ರೆಗೆ ದಾಖಲಿಸಿರುವ ದೆಹಲಿ ಪೊಲೀಸ್ ಹಾಗೂ ಕೇಂದ್ರ ಸರ್ಕಾರದ ಕ್ರಮವನ್ನು ಸಿಪಿಐ(ಎಂ) ತುಮಕೂರು ಜಿಲ್ಲಾ ಸಮಿತಿ ತೀವ್ರವಾಗಿ ಖಂಡಿಸಿದೆ.

ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದ ವ್ಯಕ್ತಿಯನ್ನು ಬಲವಂತವಾಗಿ ವಶಕ್ಕೆ ಪಡೆದು ಆಸ್ಪತ್ರೆಗೆ ದಾಖಲಿಸಿರುವುದು ಸಂವಿಧಾನ ನೀಡಿರುವ ಅಭಿವ್ಯಕ್ತಿ ಸ್ವಾತಂತ್ರ್ಯ ಹಾಗೂ ಪ್ರಜಾಪ್ರಭುತ್ವದ ಹಕ್ಕುಗಳ ಮೇಲಿನ ದಾಳಿಯಾಗಿದೆ. ಭಿನ್ನಾಭಿಪ್ರಾಯಗಳನ್ನು ಸಂವಾದದ ಮೂಲಕ ಬಗೆಹರಿಸುವ ಬದಲು ದಮನಕಾರಿ ಕ್ರಮಗಳನ್ನು ಅನುಸರಿಸುತ್ತಿರುವುದು ಕೇಂದ್ರ ಸರ್ಕಾರದ ಅಸಹಿಷ್ಣು ಧೋರಣೆಯನ್ನು ಮತ್ತೊಮ್ಮೆ ಬಹಿರಂಗಪಡಿಸಿದೆ.



ದೇಶದಲ್ಲಿ ನೀಟ್ ಸೇರಿದಂತೆ ವಿವಿಧ ರಾಷ್ಟ್ರೀಯ ಮಟ್ಟದ ಪರೀಕ್ಷೆಗಳಲ್ಲಿ ಪದೇ ಪದೇ ಪ್ರಶ್ನೆಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು ಹಾಗೂ ಶಿಕ್ಷಣ ವ್ಯವಸ್ಥೆಯ ಮೇಲಿನ ನಂಬಿಕೆಯನ್ನು ಕುಗ್ಗಿಸುವ ಘಟನೆಗಳು ನಡೆಯುತ್ತಿವೆ. ಶಿಕ್ಷಣದ ಕೇಂದ್ರೀಕರಣ, ಖಾಸಗೀಕರಣ ಮತ್ತು ವಾಣಿಜ್ಯೀಕರಣಕ್ಕೆ ಉತ್ತೇಜನ ನೀಡುತ್ತಿರುವ ರಾಷ್ಟ್ರೀಯ ಶಿಕ್ಷಣ ನೀತಿ2020 ಇಂತಹ ಸಮಸ್ಯೆಗಳನ್ನು ಮತ್ತಷ್ಟು ಉಲ್ಬಣಗೊಳಿಸಿದೆ. ಆದ್ದರಿಂದ ಎನ್ಇಪಿ2020 ಅನ್ನು ತಕ್ಷಣ ಹಿಂಪಡೆದು, ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವ ಕ್ರಮಗಳನ್ನು ಕೇಂದ್ರ ಸರ್ಕಾರ ಕೈಗೊಳ್ಳಬೇಕು ಎಂದು ಸಿಪಿಐ(ಎಂ) ಆಗ್ರಹಿಸಿದೆ. ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ಅವರು ತಕ್ಷಣ ರಾಜೀನಾಮೆ ನೀಡಬೇಕು. ಪ್ರಕರಣದ ಸಂಪೂರ್ಣ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಯಾವುದೇ ರಾಜಕೀಯ ಹಸ್ತಕ್ಷೇಪವಿಲ್ಲದೆ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಸಮಿತಿ ಒತ್ತಾಯಿಸಿದೆ.

ಸೋನಂ ವಾಂಗ್ಚುಕ್ ಹಾಗೂ ಶಿಕ್ಷಣದ ರಕ್ಷಣೆಗಾಗಿ ಹೋರಾಟ ನಡೆಸುತ್ತಿರುವ ವಿದ್ಯಾರ್ಥಿಗಳು, ಯುವಜನರು ಮತ್ತು ಪ್ರಜಾಪ್ರಭುತ್ವ ಪರ ಶಕ್ತಿಗಳೊಂದಿಗೆ ದೇಶದ ಜನತೆ ಐಕ್ಯತೆ ವ್ಯಕ್ತಪಡಿಸಬೇಕು ಎಂದು ಸಿಪಿಐ(ಎಂ) ಕರೆ ನೀಡಿದೆ.

ಈ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಹಾಗೂ ಸೋನಂ ವಾಂಗ್ಚುಕ್ ಅವರಿಗೆ ಬೆಂಬಲ ಸೂಚಿಸುವ ಉದ್ದೇಶದಿಂದ ಜುಲೈ 20, 2026 ರಂದು ನಡೆಯುವ ಪ್ರತಿಭಟನೆಯಲ್ಲಿ ಪ್ರಜಾಪ್ರಭುತ್ವವಾದಿಗಳು, ವಿದ್ಯಾರ್ಥಿಗಳು, ಯುವಜನರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಿಪಿಐ(ಎಂ) ತುಮಕೂರು ಜಿಲ್ಲಾ ಸಮಿತಿ ಮನವಿ ಮಾಡಿದೆ.

ಮಧುಗಿರಿ ಪಟ್ಟಣದ ವಿವಿಧ ಅಭಿವೃದ್ಧಿ ಕಾರ್ಯ ವಿಕ್ಷಣೆ ಮಾಡಿದ; MLC

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ ಪಟ್ಟಣದ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ವಿಧಾನ ಪರಿಷತ್ ಸದಸ್ಯ ಆರ್.ರಾಜೇಂದ್ರ ವೀಕ್ಷಿಸಿ ಕೆಲವು ಸಲಹೆ ಸೂಚನೆಗಳನ್ನು ನೀಡಿದರು.

ಪಟ್ಟಣದ ತಾಲೂಕು ಕಚೇರಿ ಪಕ್ಕದಲ್ಲಿ ಶಿಥಿಲಗೊಂಡಿರುವ ಗುರುಭವನವನ್ನು ಪುನಶ್ಚೇತನಗೊಳಿಸುವ ಸಲುವಾಗಿ ವೀಕ್ಷಣೆ. ಪಟ್ಟಣದ ಶಿರಾ ಗೇಟ್ ಇಂದ ಸಿದ್ದಾಪುರ ಸಮೀಪದ ವರೆಗೆ ನಡೆಯುತ್ತಿರುವ ರಸ್ತೆ ಅಗಲೀಕರಣದ ಕಾಮಗಾರಿ ವೀಕ್ಷಣೆ. ಪಟ್ಟಣದ ವಲಯ ಅರಣ್ಯಾಧಿಕಾರಿ ಕಛೇರಿ ಪಕ್ಕದಲ್ಲಿ ನೂತನವಾಗಿ ನಿರ್ಮಿಸಿರುವ ಪಾರ್ಕ್ ಕಾಮಗಾರಿ ವೀಕ್ಷಣೆ.

ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಮುಂಭಾಗದಲ್ಲಿ ನಡೆಯುತ್ತಿರುವ ರಸ್ತೆ ಅಗಲೀಕರಣದ ಕಾಮಗಾರಿ ವೀಕ್ಷಣೆ.

ಪಟ್ಟಣದ ಸಮೀಪದ ಸಾಲು ಮರದ ತಿಮ್ಮಕ್ಕ ಉದ್ಯಾನ ವನದ ಹತ್ತಿರ 60 ಅಡಿ ಎತ್ತರದ ರಾಷ್ಟ್ರೀಯ ಧ್ವಜ ಕಂಬ ಹಾಗೂ ಪಾರ್ಕ್ ನಿರ್ಮಾಣ ಕಾಮಗಾರಿಯನ್ನು ವೀಕ್ಷಿಸಿ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಕಾಮಗಾರಿಯು ಉತ್ತಮ ಗುಣಮಟ್ಟದಲ್ಲಿ ನಿರ್ಮಿಸುವಂತೆ ಸೂಚಿಸಿದರು..



ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ ನವರು, ಇಂಜಿನಿಯರ್ ಸಂಪತ್ ಕುಮಾರ್ ಅವರು, ಪುರಸಭಾ ಮುಖ್ಯಾಧಿಕಾರಿ ಎಸ್. ಸುರೇಶ್ ಅವರು, ವಲಯ ಅರಣ್ಯಾಧಿಕಾರಿ ಎಚ್.ಎಮ್.ಸುರೇಶ್ ಅವರು, ಪುರಸಭಾ ಮಾಜಿ ಅಧ್ಯಕ್ಷರುಗಳಾದ ಎನ್. ಗಂಗಣ್ಣ, ಎಮ್. ಕೆ. ನಂಜುಂಡ ರಾಜು, ಲಾಲಾಪೇಟೆ ಮಂಜುನಾಥ್, ಮುಖಂಡರುಗಳಾದ ಹರ್ಷ ಕುರುಬರಹಳ್ಳಿ, ಮಹಮದ್ ಅಯೂಬ್, ಸಾದಿಕ್, ಬಾಬಾ ಫಕೃದ್ದೀನ್, ನಾಗರಾಜ್ ಸೇರಿದಂತೆ ಹಲವು ಮುಖಂಡರುಗಳು, ಅಧಿಕಾರಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

ವಿದ್ಯಾರ್ಥಿಗಳು ಸಾಮರ್ಥ್ಯವನ್ನು ಅರ್ಥ ಮಾಡಿಕೊಂಡಾಗ ಯಶಸ್ಸುಗಳಿಸಲು ಸಾಧ್ಯ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಮಾನಸಿಕ ಆರೋಗ್ಯ ಉತ್ತಮವಾಗಿದ್ದಾಗ ಮಾತ್ರ ನಮ್ಮ ಗುರಿಯನ್ನು ತಲುಪಲು ಸಾಧ್ಯವಾಗುತ್ತದೆ ಎಂದು ಮುಖ್ಯ ಸಂಪನ್ಮೂಲ ವ್ಯಕ್ತಿಯಾಗಿ ಯುನೈಟೆಡ್ ಕಿಂಗ್‌ಡಮ್ ಐಲ್ ಆಫ್ ವೈಟ್ ಎನ್.ಹೆಚ್.ಎಸ್.ಫೌಂಡೇಷನ್ ಟ್ರಸ್ಟ್‌ನ ಹಿರಿಯ ಮನೋವೈದ್ಯ ಹಾಗೂ ಶ್ರೀಸಿದ್ದಗಂಗಾ ವೈದ್ಯಕೀಯ ಕಾಲೇಜಿನ ಮನೋವೈದ್ಯರಾದ ಡಾ.ಕೀರ್ತಿ ಸುಂದರ್ ಜಿ.ಎಸ್.ರವರು ತಿಳಿಸಿದರು.

ನಗರದ ವರಾನ ಗ್ಲೋಬಲ್ ಟ್ರಸ್ಟ್ ಅಂಗ ಸಂಸ್ಥೆಯಾದ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ಪ್ರಥಮ ವರ್ಷದ ಬಿ.ಸಿ.ಎ ವಿದ್ಯಾರ್ಥಿಗಳಿಗೆ 'ವ್ಯಕ್ತಿತ್ವ ವಿಕಸನ' ಕಾರ್ಯಕ್ರಮವನ್ನು ಜುಲೈ 17 ರಂದು ಶುಕ್ರವಾರ ಮಧ್ಯಾಹ 2 ಗಂಟೆಗೆ ಕಾಲೇಜಿನ ಆವರಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮನೋವೈದ್ಯರಾದ ಡಾ.ಕೀರ್ತಿಸುಂದರ್ ಜಿ.ಎಸ್.ರವರು ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ವಿದ್ಯಾರ್ಥಿಗಳಿಗೆ ವ್ಯಕ್ತಿತ್ವ ವಿಕಸನ, ಆತ್ಮವಿಶ್ವಾಸ, ಸಮಯ ನಿರ್ವಹಣೆ, ಮಾನಸಿಕ ಆರೋಗ್ಯದ ಮಹತ್ವ ಹಾಗೂ ಜೀವನದಲ್ಲಿ ಯಶಸ್ಸು ಸಾಧಿಸಲು ಅಗತ್ಯವಾದ ಮೌಲ್ಯಗಳ ಕುರಿತು ಸವಿಸ್ತಾರವಾಗಿ ಉಪನ್ಯಾಸ ನೀಡಿದರು. ನಿಮ್ಮ ಗುರಿಯನ್ನು ಸಾಧಿಸಲು ಮೊದಲು ನಿಮ್ಮನ್ನು ನೀವು ಪ್ರೇರೇಪಿಸಿಕೊಳ್ಳಿ, ದೈಹಿಕವಾಗಿ, ಮಾನಸಿಕವಾಗಿ, ಭಾವನಾತ್ಮಕವಾಗಿ, ಸಾಮಾಜಿಕವಾಗಿ ನೀವು ಉತ್ತಮ ಆರೋಗ್ಯವನ್ನು ಹೊಂದಿದ್ದಾಗ ಯಶಸ್ಸನ್ನುಗಳಿಸುವುದು ಸುಲಭ ಎಂದು ವಿದ್ಯಾರ್ಥಿಗಳಲ್ಲಿ ಸ್ಫೂರ್ತಿ ತುಂಬಿದರು. 'ನಿಮ್ಮಲ್ಲಿ ನೀವು ಎಂದಿಗೂ ಬಿಟ್ಟುಕೊಡದ ಮನೋಭಾವವನ್ನು' ಬೆಳೆಸಿಕೊಂಡಾಗ ಅರ್ಥ ದಾರಿಯನ್ನು ನಿಮ್ಮ ಗುರಿಯು ಬಳಿ ತಲುಪಿದಂತಾಗುತ್ತದೆ ಎಂದರು.

ವಿದ್ಯಾರ್ಥಿಗಳು ನಿಮ್ಮ ಗುರಿಯನ್ನು ನಿಮ್ಮ ಸುಪ್ತ ಮನಸ್ಸಿನಲ್ಲಿ ಎಚ್ಚರವಾಗಿಟ್ಟುಕೊಂಡಾಗ ಯಶಸ್ಸು ನಿಮ್ಮದೇ ಎಂದು ಪ್ರೇರೇಪಿಸಿದರು. ಧ್ಯಾನ, ವ್ಯಾಯಾಮ, ಉತ್ತಮ ಆಹಾರ ಸಂಸ್ಕೃತಿ, ದಿನಕ್ಕೆ ಕನಿಷ್ಠ ಏಳು ಗಂಟೆಯ ನಿದ್ರೆಯಂತಹ ಉತ್ತಮ ಜೀವನ ಶೈಲಿಯನ್ನು ವಿದ್ಯಾರ್ಥಿಗಳು ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು. ಏಕಾಗ್ರತೆಯನ್ನು ಬೆಳೆಸಿಕೊಳ್ಳಲು ಸಾಹಿತ್ಯದ ಕಡೆಗೆ ನಿಮ್ಮ ಒಲವನ್ನು ಹೆಚ್ಚಿಸಿಕೊಳ್ಳಬೇಕೆಂದು ಹೇಳಿದ ಡಾ.ಕೀರ್ತಿಸುಂದರ್ ಜಿ.ಎಸ್ ರವರು ಉಪನ್ಯಾಸದ ಕೊನೆಯಲ್ಲಿ ವಿದ್ಯಾರ್ಥಿಗಳೊಡನೆ ಚರ್ಚೆಯಲ್ಲಿ ಭಾಗವಹಿಸಿ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಸುಲಭ ರೀತಿಯಲ್ಲಿ ಉತ್ತರಿಸಿ ಅವರ ಗೊಂದಲಗಳನ್ನು ಪರಿಹರಿಸುವ ಮೂಲಕ ಕಾರ್ಯಕ್ರಮ ಯಶಸ್ವಿಗೊಂಡಿತು.

ಇದೇ ಸಂದರ್ಭದಲ್ಲಿ ಅನನ್ಯ ಇನ್ಸ್ಟಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ಮನೋವೈದ್ಯರಾದ ಡಾ.ಕೀರ್ತಿಸುಂದರ್ ಜಿ.ಎಸ್. ರವರಿಗೆ ಸನ್ಮಾನಿಸಿ ಗೌರವಿಸಲಾಗಿತ್ತು. ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹರೀಶ್.ಹೆಚ್‌ರವರು ಕಾರ್ಯಕ್ರಮಕ್ಕೆ ಶುಭ ಹಾರೈಸಿದ್ದರು. ಕಾಲೇಜಿನ ಪ್ರಾಂಶುಪಾಲರು, ಅಧ್ಯಾಪಕರು ಹಾಗೂ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಇಂಜಿನಿಯರಿಂಗ್ ವಿದ್ಯಾರ್ಥಿಗಳ ಆತ್ಮವಿಶ್ವಾಸ ಹೆಚ್ಚಿಸಿದ "ಅಣಕು ಸಂದರ್ಶನ"

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಇಂಜಿನಿಯರಿಂಗ್ ಶಿಕ್ಷಣ ಮುಗಿಸಿ ಹೊರಬರುವ 7ನೇ ಸೆಮಿಸ್ಟರ್‌ನ ವಿದ್ಯಾರ್ಥಿಗಳ ಆತ್ಮವಿಶ್ವಾಸ ಹೆಚ್ಚಿಸಲು ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಶನಿವಾರ ಜು.18 ರಂದು ನಡೆದ "ಅಣಕು ಸಂದರ್ಶನ" ವರದಾನವಾಗಿದೆ.

ಶ್ರೀದೇವಿ ಇಂಜಿನಿಯರಿಂಗ್ ಕಾಲೇಜು ಹಾಗೂ ಟಾಟಾ ಎಲೆಕ್ಸಿ ಕಂಪನಿಯ ಸಹಯೋಗದಲ್ಲಿ ಏರ್ಪಡಿಸಿದ್ದ ಈ ಸಂದರ್ಶನ ಕಾರ್ಯಕ್ರಮದಲ್ಲಿ 330 ವಿದ್ಯಾರ್ಥಿಗಳು ಹಾಗೂ ಕಂಪನಿಯ 40 ತಾಂತ್ರಿಕ ಪರಿಣಿತರು, ಮಾನವ ಸಂಪನ್ಮೂಲ ಸಿಬ್ಬಂದಿ ಭಾಗಿಯಾಗಿದ್ದರು. ಬೆಳಿಗ್ಗೆಯಿಂದ ಸಂಜೆಯವರೆಗೂ ತಾಂತ್ರಿಕ ತಂಡ ಪ್ರತಿಯೊಬ್ಬ ವಿದ್ಯಾರ್ಥಿಗಳೊಂದಿಗೆ ಅಣಕು ಸಂದರ್ಶನ ನಡೆಸಿತು. ತಮ್ಮ ಭವಿಷ್ಯವನ್ನು ಯಾವ ರೀತಿ ರೂಪಿಸಿಕೊಳ್ಳಬೇಕು ಎಂಬುದು ಇದರ ಪ್ರಮುಖ ಉದ್ದೇಶವಾಗಿತ್ತು. ಪ್ರತಿಷ್ಠಿತ ಟಾಟಾ ಎಲೆಕ್ಸಿ ಹಲವಾರು ಕಾಲೇಜುಗಳಲ್ಲಿ ಈ ರೀತಿಯ ಸಂದರ್ಶನ ಕಾರ್ಯಕ್ರಮ ನಡೆಸಿಕೊಂಡು ಬರುತ್ತಿದೆ.

ಕಾರ್ಪೊರೇಟ್ ವರ್ಲ್ಡ್ ನಿರೀಕ್ಷೆಗೆ ತಕ್ಕಂತೆ ಸಜ್ಜುಗೊಳ್ಳಲು ಹಾಗೂ ಕೌಶಲ್ಯ ರೂಢಿಸಿಕೊಳ್ಳಲು ವಿದ್ಯಾರ್ಥಿಗಳ ಪಾಲಿಗೆ ಇದು ಒಂದು ಸುವರ್ಣ ಅವಕಾಶವಾಗಿದೆ ಎಂದು ಕಂಪನಿಯ ಹೆಚ್.ಆರ್.ಎಕ್ಸಿಕ್ಯೂಟಿವ್ ವಂಶಿಕಶೆಟ್ಟಿ ತಿಳಿಸಿದ್ದಾರೆ. ವಿದ್ಯಾರ್ಥಿಗಳ ಸಂದರ್ಶನ ಮುಗಿದ ನಂತರ ಬೋಧನಾ ವಿಭಾಗ, ಆಡಳಿತ ಮಂಡಳಿಗೆ ಸಂದರ್ಶನದ ಫೀಡ್‌ಬ್ಯಾಕ್ ನೀಡುವುದಾಗಿಯೂ ಅವರು ತಿಳಿಸಿದ್ದಾರೆ. ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಡಾ.ಎಂ.ಆರ್. ಹುಲಿನಾಯ್ಕರ್‌ರವರು ಮಾತನಾಡಿ, ಉದ್ಯಮ ರಂಗ ಏನನ್ನು ಬಯಸುತ್ತದೆ ಕಂಪನಿಗಳು ಹೇಗೆ ನಡೆಯುತ್ತವೆ, ಉದ್ಯೋಗಕ್ಕೆ ಯಾವ ರೀತಿ ಸಜ್ಜಾಗಬೇಕು, ಸಂದರ್ಶನಕ್ಕೆ ಯಾವ ರೀತಿ ತಯಾರಾಗಬೇಕು ಎಂಬುದನ್ನು ಕಲಿಯಲು ಮತ್ತು ಭವಿಷ್ಯ ರೂಪಿಸಿಕೊಳ್ಳಲು, ಅನುಭವ ಪಡೆಯಲು ವಿದ್ಯಾರ್ಥಿಗಳ ಪಾಲಿಗೆ ಇದೊಂದು ಸುವರ್ಣ ಅವಕಾಶವಾಗಿದೆ ಎಂದು ಪ್ರತಿಕ್ರಿಯೆ ನೀಡಿದ್ದಾರೆ. ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ.ನರೇಂದ್ರ ವಿಶ್ವನಾಥ್‌ರವರು ಮಾತನಾಡಿ, ಉದ್ಯಮದ ಬೇಕು-ಬೇಡ, ಅವಶ್ಯಕತೆ ಪೂರೈಸಲು ಸಹಕಾರಿಯಾಗಿದೆ. ಈ ಅಣಕು ಸಂದರ್ಶನ ನೈಜ ಸಂದರ್ಶನದ ಪ್ರತಿರೂಪವಾಗಿದೆ.

ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ಮತ್ತು ಮಾಹಿತಿ ತಂತ್ರಜ್ಞಾನ ನಿರ್ದೇಶಕ ಎಂ.ಎಸ್.ಪಾಟೀಲ್, ಶ್ರೀದೇವಿ ಸಂಸ್ಥೆಯ ಉದ್ಯೋಗ ಮತ್ತು ತರಬೇತಿ ನಿರ್ದೇಶಕ ಡಾ.ಎಲ್.ಗಿರೀಶ್, ಉದ್ಯೋಗ ಮತ್ತು ತರಬೇತಿ ಅಧಿಕಾರಿ ಚೇತನ್.ಎನ್. ಭಾಗಿಯಾಗಿದ್ದರು.

ಮಹಿಳೆಯರು ತಮ್ಮ ಮಕ್ಕಳನ್ನು ಸಂಸ್ಕಾರವಂತರನ್ನಾಗಿ ಮಾಡಿ ಹೊಂದಾಣಿಕೆಯಿಂದ ಬಾಳುವ ಮನಸ್ಥಿತಿ ಬೆಳೆಸಿ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಹಿಂದಿನ ದಿನಗಳಿಗೆ ಹೋಲಿಸಿದರೆ ಪುರುಷರು ಮತ್ತು ಸರ್ಕಾರಗಳಿಂದ ಮಹಿಳೆಯರ ಸಬಲೀಕರಣಕ್ಕೆ ಉತ್ತೇಜನ ದೊರೆಯುತ್ತಿದೆ. ಇದರಿಂದಾಗಿ ಪ್ರತಿ ಹಳ್ಳಿಗಳಲ್ಲಿ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾಗುತ್ತಿದ್ದಾರೆ ಎಂದು ಜನಶಿಕ್ಷಣ ಸಂಸ್ಥೆಯ ನಿರ್ದೇಶಕಿ ಆರ್.ಎಚ್.ಸುಕನ್ಯಾ ಅಭಿಪ್ರಾಯಪಟ್ಟರು.

ನಗರದಲ್ಲಿ ನಡೆದ ಶ್ರೀ ಪ್ರಕೃತಿ ಮಹಿಳಾ ಸ್ವಸಹಾಯ ಸಂಘದ ಇಪ್ಪತ್ತನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಸಹಾಯ ಸಂಘಗಳು ಸರ್ಕಾರದ ವಿವಿಧ ಇಲಾಖೆಗಳಿಂದ ಮಹಿಳೆಯರ ಅಭಿವೃದ್ಧಿಗೆ ದೊರೆಯುವ ಸಹಾಯ, ಸೌಲಭ್ಯಗಳನ್ನು ಬಳಸಿಕೊಂಡು ಪ್ರಗತಿ ಸಾಧಿಸಬೇಕು. ಪ್ರಸ್ತುತ ಸಂದರ್ಭದಲ್ಲಿ ಕೌಟುಂಬಿಕ ಮತ್ತು ಮಾನವೀಯ ಮೌಲ್ಯಗಳು ಮರೆಯಾಗುತ್ತಿವೆ. ಈ ಹಿನ್ನೆಲೆಯಲ್ಲಿ ಮಹಿಳೆಯರು ತಮ್ಮ ಮಕ್ಕಳನ್ನು ಸಂಸ್ಕಾರವಂತರನ್ನಾಗಿ, ಕುಟುಂಬದಲ್ಲಿ ಪರಸ್ಪರ ಹೊಂದಾಣಿಕೆಯಿಂದ ಬಾಳುವ ಮನಸ್ಥಿತಿಯನ್ನು ಬೆಳೆಸಬೇಕೆಂದು ಕರೆ ನೀಡಿದರು.

ಕರ್ನಾಟಕ ಗ್ರಾಮೀಣ ಬ್ಯಾಂಕಿನ ಎಸ್.ಎಸ್.ಪುರಂ ಶಾಖೆಯ ಹಿರಿಯ ವ್ಯವಸ್ಥಾಪಕ ಅಭಿಷೇಕ್‌ಆರ್.ಎಂ. ಮಾತನಾಡಿ, ಸಂಘದ ಸದಸ್ಯರು ವೈಯಕ್ತಿಕವಾಗಿ ಅಷ್ಟೇ ಅಲ್ಲದೆ ಸಂಘಟನೆಯಾಗಿ ಒಗ್ಗಟ್ಟಿನಿಂದ ಮುಂದೆ ಸಾಗುತ್ತಿರುವುದು ಅಭಿನಂದನೀಯ. ಸಂಘದ ಪ್ರಗತಿಗೆ ಬ್ಯಾಂಕಿನಿಂದ ಹೆಚ್ಚಿನ ನೆರವು ಪಡೆಯುವ ಅವಕಾಶವಿದ್ದರೂ ಆಂತರಿಕ ಆರ್ಥಿಕ ನೆರವಿನಿಂದಲೇ ಪ್ರಗತಿ ಸಾಧಿಸುತ್ತಿರುವುದು ಶ್ಲಾಘನೀಯ ಎಂದರಲ್ಲದೆ, ಮುಂದಿನ ದಿನಗಳಲ್ಲಿ ಬ್ಯಾಂಕಿನಿಂದ ಹೆಚ್ಚಿನ ನೆರವು ಪಡೆದು ಮತ್ತಷ್ಟು ಸ್ವಾವಲಂಬಿಗಳಾಗಬೇಕೆಂದರು. ರೋಟರಿ ಅಸಿಸ್ಟೆಂಟ್ ಗವರ್ನರ್ ಸಿ. ನಾಗರಾಜ್ ಮಾತನಾಡಿ, ಸಮಾಜದ ಇತರ ವರ್ಗಗಳ ಮಹಿಳೆಯರಿಗೆ ವೃತ್ತಿತರಬೇತಿ ನೀಡುವುದು ಮತ್ತು ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ಮಹಿಳೆಯರಿಗೆ ದೊರೆಯುತ್ತಿರುವ ಸಬ್ಸಿಡಿ ಮತ್ತು ಸಹಾಯಧನದ ಅನುಕೂಲ ಪಡೆದುಕೊಂಡು ಸ್ವಂತ ಉದ್ದಿಮೆ ಸ್ಥಾಪಿಸಿ ಮಹಿಳೆಯರ ಬೆಳವಣಿಗೆಗೆ ಇನ್ನಷ್ಟು ಸಹಕಾರಿಯಾಗಿರಬೇಕೆಂದು ಸಲಹೆ ನೀಡಿದರು.

ಶ್ರೀ ಪ್ರಕೃತಿ ಮಹಿಳಾ ಸ್ವಸಹಾಯ ಸಂಘದ ಪ್ರಥಮ ಪ್ರತಿನಿಧಿ ಕೆ.ಆರ್.ಭಾಗ್ಯಲಕ್ಷ್ಮಿ ನಾಗರಾಜ್‌ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಘದಎಲ್ಲ ಸದಸ್ಯರೂ ತೆಗೆದುಕೊಂಡ ಸಾಲವನ್ನು ಪ್ರಾಮಾಣಿಕವಾಗಿ ಮರುಪಾವತಿ ಮಾಡುತ್ತಿರುವುದು ಸಂಘದ ಬೆಳವಣಿಗೆಗೆ ಕಾರಣವಾಗಿದೆ. ಇದೇರೀತಿಯ ಸಹಕಾರ ಮುಂದೆಯೂ ರಲೆಂದು ಆಶಿಸಿದರು. ಸಂಘದ ಸದಸ್ಯರಲ್ಲಿ ಶಿಸ್ತು ಮುಖ್ಯವಾಗಿದ್ದು ಅದನ್ನು ತಪ್ಪದೇ ಪಾಲಿಸಲಾಗುತ್ತಿದೆಎಂದು ತಿಳಿಸಿದರು.ಶೈಲಾ ಚಂದ್ರಶೇಖರ್, ಮೈತ್ರಾ, ವೀಣಾ ಮಂಜುನಾಥ್, ಹೇಮಾ ಮಲ್ಲಿಕ್, ಶಶಿ ವಿಶ್ವನಾಥ್, ನಂಜಮ್ಮಣ್ಣಿ, ಶೈಲಜಾ ಮಹದೇವಯ್ಯ, ಸುಮಿತ್ರಾ ನಾಗರಾಜ್, ಗಂಗಾ ಪರಮೇಶ್, ಶೈಲಜಾ ಸದಾನಂದ್, ಚಂದನ, ಮೋಹಿನಿ ಮೊದಲಾದವರು ಭಾಗವಹಿಸಿದ್ದರು.

ತುಂಬುಗಾನಹಳ್ಳಿಯ ಕೆ.ಎಸ್.ಆರ್.ಪಿ. ಆವರಣದಲ್ಲಿ ಆರೋಗ್ಯ ಶಿಬಿರ; ಜೀವನ ಮೌಲ್ಯಗಳ ಸ್ಫೂರ್ತಿದಾಯಕ ವಿಚಾರಧಾರೆ

ಸೂರ್ಯಪ್ರಗತಿನ್ಯೂಸ್.ಕಾಂ





ರಾಜ್ಯ ಮೀಸಲು ಪೊಲೀಸ್ 12ನೇ ಬೆಟಾಲಿಯನ್ ಸುಮಾರು 400ಕ್ಕೂ ಹೆಚ್ಚು ಜನರನ್ನು ಉದ್ದೇಶಿಸಿ ಪರಮ ಪೂಜ್ಯ ಸ್ವಾಮಿ ಜಪಾನಂದಜೀ ರವರು ಉಪನ್ಯಾಸವಿತ್ತರು. ಕಾರ್ಯಕ್ರಮವು ಅಚ್ಚುಕಟ್ಟಾಗಿ ಕೊರಟಗೆರೆ ತಾಲ್ಲೂಕಿನ ತುಂಬುಗಾನಹಳ್ಳಿಯ ಕೆ.ಎಸ್.ಆರ್.ಪಿ. ಆವರಣದಲ್ಲಿ ನಡೆಯಿತು. ಈ ಮಹತ್ತರವಾದ ಸಂಸ್ಥೆಯ ಕಮಾಂಡೆಂಟ್ ಆಗಿರುವ ಶ್ರೀ ಹಂಜಾ ಹುಸೇನ್, ರವರ ಆಹ್ವಾನದ ಮೇರೆಗೆ ಪೂಜ್ಯ ಸ್ವಾಮೀಜಿಯವರು ಸ್ಫೂರ್ತಿದಾಯಕ ಹಾಗೂ ಜೀವನ ಮೌಲ್ಯಗಳ ವಿಚಾರಧಾರೆಯನ್ನು ಅನೇಕಾನೇಕ ಉದಾಹರಣೆಗಳ ಮೂಲಕ ಅದ್ಭುತವಾಗಿ ವಿವರಿಸಿದರು. ತಮ್ಮ ಭಾಷಣದಲ್ಲಿ ಪೂಜ್ಯರು ಶ್ರೀ ಲಾಲ್ ಬಹದ್ದೂರ್ ಶಾಸ್ತ್ರಿ ಹಾಗೂ ಅನೇಕ ದೇಶಭಕ್ತರ ವಿಚಾರಗಳನ್ನು ಪರಿಚಯಿಸಿದರು. ಒಟ್ಟಿನಲ್ಲಿ ಹೃದಯವಂತರಾಗದೆ ಏನನ್ನೂ ಜೀವನದಲ್ಲಿ ಸಾಧಿಸಲು ಅಸಾಧ್ಯ ಎಂಬುದನ್ನು ಅನೇಕ ರೀತಿಯ ಉದಾಹರಣೆಗಳನ್ನು ನೀಡಿ ಎಲ್ಲ ಪೊಲೀಸ್ ಸಿಬ್ಬಂದಿಯವರು ಅತ್ಯಂತ ಸಂತೋಷದಿಂದ ಸ್ವಾಮೀಜಿಯವರ ಭಾಷಣವನ್ನು ಸ್ವಾಗತಿಸಿದರು. ಇದೇ ಸಂದರ್ಭದಲ್ಲಿ ಹಿರಿಯ ವಕೀಲರು ಹಾಗೂ ಸುಪ್ರೀಂ ಕೋರ್ಟಿನ ಅಡ್ವೊಕೇಟ್ ಆದ ಶ್ರೀ ಹೊನ್ನಪ್ಪ, ದೇಶದಲ್ಲಿಯೇ ಪ್ರಸಿದ್ಧಿ ಪಡೆದಿರುವ ಡಾ.ನದೀಮುಲ್ ಹೊಡಾ, ಪ್ರೊಫೆಸರ್ ಮತ್ತು ಹೆಚ್.ಓ.ಡಿ. ಓರಲ್ ಓಂಕಾಲಜಿ, ಕಿದ್ವಾಯಿ ಮೆಮೋರಿಯಲ್ ಇನ್ಸ್ಟಿಟ್ಯೂಟ್, ಬೆಂಗಳೂರು ಹಾಗೂ ಶ್ರೀ ನಾರಾಯಣ ಸ್ವಾಮಿ ಕೆ.ಎನ್., ಎ.ಸಿ.ಪಿ. (ನಿ) ರವರು ಉಪಸ್ಥಿತರಿದ್ದರು. ಈ ಕಾರ್ಯಕ್ರಮದ ಅಧ್ಯಕ್ಷೀಯ ನುಡಿಯನ್ನು ಶ್ರೀ ಹಂಜಾ ಹುಸೇನ್, ಕಮಾಂಡೆಂಟ್, 12ನೇ ಪಡೆ, ಕೆ.ಎಸ್.ಆರ್.ಪಿ. ತುಮಕೂರು ರವರು ನುಡಿಯುತ್ತಾ ಬಹುಶಃ ಪ್ರಪ್ರಥಮ ಬಾರಿಗೆ ಇಂತಹ ಸಂನ್ಯಾಸಿಯನ್ನು ಕಾಣುವಂತಾಗಿದೆ. ಅವರ ವಾಗ್ಝರಿ ಹಾಗೂ ವಿವಿಧ ಭಾಷೆಗಳ ಮೇಲಿರುವ ನಿಯಂತ್ರಣ ಮತ್ತೆಲ್ಲದಕ್ಕಿಂತ ಮಿಗಿಲಾಗಿ ಸಮಯೋಚಿತವಾದ ಹಾಗೂ ಸ್ಫೂರ್ತಿದಾಯಕವಾದ ಉಪನ್ಯಾಸವನ್ನು ಕೇಳಿದ್ದು ನಮ್ಮ ಭಾಗ್ಯ ಎಂದು ತಿಳಿಸಿದರು. ಅನೇಕ ಹಿರಿಯ ಅಧಿಕಾರಿಗಳಿಂದ ಪೂಜ್ಯ ಸ್ವಾಮಿ ಜಪಾನಂದಜೀ ರವರ ಬಗ್ಗೆ ನಾನಾ ರೀತಿಯ ಅದ್ಭುತ ವಿಚಾರಗಳನ್ನು ಕೇಳಿದ್ದು ನಮ್ಮ ಸಂಸ್ಥೆಗೆ ಪೂಜ್ಯರನ್ನು ಕರೆತರಬೇಕೆಂಬ ಅನೇಕ ದಿನಗಳ ಆಸೆ ಇಂದು ಈಡೇರಿತು ಎಂದು ತಿಳಿಸಿ ಪೂಜ್ಯರು ಈ ನಮ್ಮ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ 12ನೇ ಪಡೆಗೆ ಸದಾ ಭೇಟಿ ನೀಡುತ್ತಾ ಮಾರ್ಗದರ್ಶನ ನೀಡಬೇಕೆಂದು ತಿಳಿಸಿದರು.

ಕಾರ್ಯಕ್ರಮದ ಆರಂಭವನ್ನು ಜ್ಯೋತಿ ಬೆಳಗಿಸುವ ಮೂಲಕ ಆರಂಭಿಸಿ ಪೂಜ್ಯ ಸ್ವಾಮೀಜಿಯವರೊಂದಿಗೆ ಅನೇಕ ವರ್ಷಗಳಿಂದ ನಾನಾ ರೀತಿಯ ಸೇವಾ ಯೋಜನೆಗಳಲ್ಲಿ ಭಾಗಿಯಾಗಿ ಪೂಜ್ಯ ಸ್ವಾಮೀಜಿಯವರ ಅತ್ಯಂತ ನಿಕಟವರ್ತಿಯಾಗಿ ಸೇವೆ ಸಲ್ಲಿಸಿದ್ದನ್ನು ಇಲ್ಲಿ ಸ್ಮರಿಸಿದ ಶ್ರೀ ಕೆ.ಎನ್.ನಾರಾಯಣ ಸ್ವಾಮಿ, ಎ.ಸಿ.ಪಿ. (ನಿ), ರವರು ಪೂಜ್ಯ ಸ್ವಾಮಿ ಜಪಾನಂದಜೀ ರವರಿಗೆ ದೇಶ ವಿದೇಶಗಳಲ್ಲಿ ಮಹತ್ತರವಾದ ಜವಾಬ್ದಾರಿಯನ್ನು ನೀಡಲು ಶ್ರೀರಾಮಕೃಷ್ಣ ಮಠ ಅಣಿಯಾಗಿದ್ದು ಪೂಜ್ಯರನ್ನು ಸಿಂಗಪುರ, ಅಮೇರಿಕ, ಜಪಾನ್, ಮುಂತಾದ ದೇಶಗಳಲ್ಲಿ ಕಾರ್ಯಪ್ರವೃತ್ತರಾಗಲು ಸೂಚಿಸಿದ್ದಾಗ್ಯೂ ಪೂಜ್ಯರು ಸ್ವಾಮಿ ವಿವೇಕಾನಂದರ ವಿಚಾರಧಾರೆಗಳು ತಮ್ಮ ಧಮನಿ ಧಮನಿಗಳಲ್ಲಿ ಹರಿಸುತ್ತಾ ತಾವು ಭಾರತಾಂಬೆಯ ಸೇವೆಗಾಗಿ ತಮ್ಮ ಈ ಜೀವನವನ್ನು ಮುಡಿಪಾಗಿಟ್ಟಿದ್ದೇನೆ ಎಂದು ತಿಳಿಸಿದ್ದಲ್ಲದೆ ಯಾವುದೇ ಆಕರ್ಷಣೆಗೆ ಒಳಗಾಗದೆ ತಮ್ಮ ಗುರುದೇವನಾದ ಸ್ವಾಮಿ ವಿವೇಕಾನಂದರು ತಿಳಿಸಿದಂತೆ "ನವಭಾರತ ನಿರ್ಮಾಣ"ದ ಮಹತ್ಕಾರ್ಯವನ್ನು ಕಾಯಾ, ವಾಚಾ, ಮನಸ ಕೈಗೊಂಡಿರುವುದಾಗಿ ತಿಳಿಸಿದರು. ಒಟ್ಟಿನಲ್ಲಿ ಇಂದಿನ ಕಾರ್ಯಕ್ರಮ ನಿಜಕ್ಕೂ ನೆರೆದ ನೂರಾರು ಪೊಲೀಸ್ ಸಿಬ್ಬಂದಿಯವರಿಗೆ ಒಂದು ಹೊಸ ದಿಕ್ಕನ್ನು ತೋರಿಸಿದಂತೆಯೇ ಸರಿ. ತದನಂತರ ಪೂಜ್ಯರು ಮಾತನಾಡಿ ಇಂದಿನ ಸಮಾಜದ ಸ್ಥಿತಿ ಹಾಗೂ ನಾಗರಿಕರ ಬೇಜವಾಬ್ದಾರಿತನ ಮತ್ತೆಲ್ಲದಕ್ಕಿಂತ ಮಿಗಿಲಾಗಿ ದೇಶದ ಭವಿಷ್ಯದ ಬಗ್ಗೆ ಚಿಂತಿಸದೆ ಕೇವಲ ತಮ್ಮ ಸ್ವಾರ್ಥತೆಗಳಿಂದ ತುಂಬಿದಂತವರಾಗಿ ದೇಶಾಭಿಮಾನ, ಸಾಮಾಜಿಕ ಚಿಂತನೆ, ಹಿರಿಯರು, ಗುರುಗಳಿಗೆ ಕೊಡಬೇಕಾದ ಗೌರವಗಳನ್ನು ಹಾಗೂ ಮತ್ತೆಲ್ಲದಕ್ಕಿಂತ ಮಿಗಿಲಾಗಿ ತಮ್ಮ ಮಾತಾ ಪಿತೃಗಳು ಹಾಗೂ ಬಂಧುಗಳನ್ನು ಗಮನಿಸದೆ ಕೇವಲ ತಾನು ಬದುಕುವ ಹಾಗೂ ಮತ್ತೊಬ್ಬರಿಗೆ ಚಿತ್ರಹಿಂಸೆ ನೀಡುವ ಅಭ್ಯಾಸಗಳನ್ನು ಬೆಳೆಸಿಕೊಂಡಿರುತ್ತಾರೆ. ಮೊದಲು ದೇಶ, ನಂತರ ನಮ್ಮ ವೈಯುಕ್ತಿಕ ವಿಚಾರಧಾರೆಗಳು ಇತ್ಯಾದಿಗಳ ಬಗ್ಗೆ ಗಮನ ಹರಿಸದೆ ಇದ್ದಲ್ಲಿ ಭಾರತ ಕ್ರಮೇಣವಾಗಿ ತನ್ನ ಅಸ್ತಿತ್ವವನ್ನೇ ಕಳೆದುಕೊಳ್ಳುವ ಸ್ಥಿತಿ ಬರಬಹುದಾಗಿದೆ. ಈಗಲಾದರೂ ಎಚ್ಚೆತ್ತುಕೊಂಡು ನಿಜವಾದ ಅರ್ಥದಲ್ಲಿ ದೇಶದ ನಾಗರಿಕರಾಗಿ ದೇಶಾಭಿಮಾನವನ್ನು ಬೆಳೆಸಿಕೊಳ್ಳದಿದ್ದಲ್ಲಿ ನಿಜಕ್ಕೂ ಭಯಾನಕ ಸ್ಥಿತಿಯನ್ನು ತಲುಪಬಹುದಾಗಿದೆ. ಈಗಲಾದರೂ ಎಚ್ಚೆತ್ತು ಭಾರತಾಂಬೆಯ ಪಾದಕಮಲಗಳ ನೆನೆಯುತ್ತಾ ಈ ದೇಶಕ್ಕೆ ಮಹತ್ ಆಸ್ತಿಯಾಗಿ, ನಾಗರಿಕನಾಗಿ ಎಲ್ಲದಕ್ಕಿಂತ ಮಿಗಿಲಾಗಿ ಹೃದಯವಂತನಾಗಿ ಜೀವಿಸುವುದೇ ಮೂಲ ಗುರಿಯಾಗಬೇಕು ಎಂದು ಕರೆಯಿತ್ತರು. ಕಾರ್ಯಕ್ರಮವು ಅತ್ಯಂತ ಶಿಸ್ತಿನಿಂದ ಸಮಯ ಪಾಲನೆ ಮಾಡುತ್ತಾ ಒಂದು ಅದ್ಭುತವಾದ ಕಾರ್ಯಕ್ರಮವೇ ನೆರವೇರಿತು ಎನ್ನಬಹುದಾಗಿದೆ. ಇದೇ ಸಂದರ್ಭದಲ್ಲಿ ತುಮಕೂರಿನ ಶ್ರೀದೇವಿ ಆಸ್ಪತ್ರೆಯಿಂದ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿತ್ತು.

ಸಾಣ್ ಸುದ್ದಿ

ಇಂದು ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ಗ್ರಾಮೀಣ ಉಪವಿಭಾಗ-2ರ ವ್ಯಾಪ್ತಿಯಲ್ಲಿ ಲಿಂಕ್ ಲೈನ್ ಕಾಮಗಾರಿ ಕೈಗೊಂಡಿರುವುದರಿಂದ ಜುಲೈ 19ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಹೆಬ್ಬೂರು, ಸಿರಿವರ, ಬಳ್ಳಗೆರೆ, ನಿಡುವಳಲು ಮತ್ತು ಕಣಕುಪ್ಪೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

ಯುಪಿಎಸ್‌ಸಿ ನಾಗರೀಕ ಸೇವಾ ಪರೀಕ್ಷಾ ಪೂರ್ವ ತರಬೇತಿಗೆ ಆನ್‌ಲೈನ್ ಅರ್ಜಿ ಆಹ್ವಾನ

ತುಮಕೂರು: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಉಚಿತ ಊಟ ಹಾಗೂ ವಸತಿಯೊಂದಿಗೆ ಯು.ಪಿ.ಎಸ್.ಸಿ. ನಾಗರಿಕ ಸೇವಾ ಪರೀಕ್ಷಾ ಪೂರ್ವ ತರಬೇತಿ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜಿಲ್ಲೆಯ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ)ಗೆ ಸೇರಿದ ಅರ್ಹ ವಿದ್ಯಾರ್ಥಿಗಳು ಆಗಸ್ಟ್ 3ರೊಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ https://bcwd.karnataka.gov.in ಅಥವಾ sevasindhuservices.karnataka.gov.in ಅಥವಾ ಸಹಾಯವಾಣಿ: 8050770004ನ್ನು ಸಂಪರ್ಕಿಸಬೇಕೆಂದು ತುಮಕೂರು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಲೆಕ್ಟ್ರಾನಿಕ್ಸ್, ಡಿಜಿಟಲ್ ಉದ್ದಿಮೆ ಸ್ಥಾಪಿಸಲು ಧನ ಸಹಾಯ : ಅರ್ಜಿ ಆಹ್ವಾನ

ತುಮಕೂರು: ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಪತ್ರಿಕೋದ್ಯಮ ಪದವೀಧರರಿಗೆ ಎಲೆಕ್ಟ್ರಾನಿಕ್ಸ್ ಮತ್ತು ಡಿಜಿಟಲ್ ಉದ್ದಿಮೆ ಸ್ಥಾಪನೆಗಾಗಿ ಧನ ಸಹಾಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತುಮಕೂರು ಜಿಲ್ಲೆ ಇವರಿಂದ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಜುಲೈ 31ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ತುಮಕೂರು ಜಿಲ್ಲೆ, ದೂ.ವಾ.ಸಂ. 0816-2278132ನ್ನು ಸಂಪರ್ಕಿಸಬೇಕೆಂದು ಇಲಾಖೆಯ ಜಂಟಿ ನಿರ್ದೇಶಕ ಸೋನಿಯಾ ವರ್ಣೇಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ : ಆನ್‌ಲೈನ್ ಅರ್ಜಿ ಆಹ್ವಾನ

ತುಮಕೂರು: ಶಾಲಾ ಶಿಕ್ಷಣ ಇಲಾಖೆಯು 2026-27ನೇ ಸಾಲಿನ ರಾಜ್ಯ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಪ್ರಶಸ್ತಿಗಾಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಶಿಕ್ಷಕರು/ವಿಶೇಷ ಶಿಕ್ಷಕರು/ ಮುಖ್ಯೋಪಾಧ್ಯಾಯರು ಸೇರಿದಂತೆ ಅರ್ಹ ಶಿಕ್ಷಕರು ಆನ್-ಲೈನ್ ಪೋರ್ಟಲ್: https://schooleducation.karnataka.gov.in ಮೂಲಕ ಅರ್ಜಿಯನ್ನು ಜುಲೈ 31ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಘುಚಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಎಸ್‌ಓಯು : ಜುಲೈ ಆವೃತ್ತಿ ಪ್ರವೇಶಾತಿಗೆ ಅರ್ಜಿ ಆಹ್ವಾನ

ತುಮಕೂರು: ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ(ಕೆಎಸ್‌ಓಯು)ವು 2026-27ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಗೆ ಯುಜಿಸಿ ಅನುಮೋದಿತ ಶಿಕ್ಷಣ ಕ್ರಮ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ತುಮಕೂರಿನ ಕರಾಮುವಿ ಪ್ರಾದೇಶಿಕ ಕೇಂದ್ರದಲ್ಲಿ ಸ್ನಾತಕ/ಸ್ನಾತಕೋತ್ತರ ಕೋರ್ಸುಗಳಾದ ಬಿ.ಎ., ಬಿ.ಕಾಂ., ಬಿ.ಬಿ.ಎ., ಬಿ.ಸಿ.ಎ., ಬಿ.ಎಲ್.ಐ.ಎಸ್ಸಿ., ಬಿ.ಎಸ್.ಡಬ್ಲ್ಯೂ., ಬಿ.ಎಸ್ಸಿ(General & I.T.), ಎಂ.ಎ., ಎಂ.ಸಿ.ಜೆ., ಎಂ.ಕಾಂ., ಎಂ.ಸಿ.ಎ., ಎಂ.ಎಸ್.ಡಬ್ಲ್ಯೂ., ಎಂ.ಎಲ್.ಐ.ಎಸ್ಸಿ., ಎಂ.ಎಸ್ಸಿ., ಎಂ.ಬಿ.ಎ., ಪಿ.ಜಿ. ಸರ್ಟಿಫಿಕೇಟ್, ಡಿಪ್ಲೋಮಾ, ಸರ್ಟಿಫಿಕೇಟ್ ಪ್ರೋಗ್ರಾಮ್ಸ್ ಕೋರ್ಸುಗಳ ಪ್ರವೇಶಾತಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಿಂದ ಮಂಜೂರಾಗುವ ಶುಲ್ಕ ಪಾವತಿ ಸೌಲಭ್ಯದಡಿ ಸೇರ ಬಯಸುವ ಅಲ್ಪಸಂಖ್ಯಾತ ವರ್ಗದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬುದ್ದಿಸ್ಟ್ ಮತ್ತು ಪಾರ್ಸಿ ಜನಾಂಗದ ಅಭ್ಯರ್ಥಿಗಳು ಜಾಲತಾಣ https://dom.karnataka.gov.in ನಲ್ಲಿರುವ ಕರಾಮುವಿಯ ಪ್ರವೇಶಾತಿ ಪೋರ್ಟಲ್‌ನ ಲಿಂಕ್ https://minority.ksouportal.com ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ನೇರವಾಗಿ ಅಗತ್ಯ ದಾಖಲಾತಿಗಳೊಂದಿಗೆ ತುಮಕೂರಿನ ಕರಾಮುವಿ ಪ್ರಾದೇಶಿಕ ಕೇಂದ್ರದಲ್ಲಿ ಪ್ರವೇಶಾತಿ ಪಡೆಯುಬಹುದಾಗಿದೆ. ಅರ್ಹ ವಿದ್ಯಾರ್ಥಿಗಳಿಗೆ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯೇ ಪೂರ್ಣ ಪ್ರವೇಶಾತಿ ಶುಲ್ಕ ಭರಿಸಲಿದೆ.

ಹೆಚ್ಚಿನ ವಿವರಗಳಿಗಾಗಿ ದೂ.ಸಂ. 0816-2955580, 9986458055, 9886112434, 7349474339 ಸಂಪರ್ಕಿಸಬಹುದು ಎಂದು ಕರಾಮುವಿ ಪ್ರಾದೇಶಿಕ ಕೇಂದ್ರ ಪ್ರಾದೇಶಿಕ ನಿರ್ದೇಶಕ ಡಾ: ವಿಜಯ್ ಪ್ರಕಾಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಡಪದ ಅಪ್ಪಣ್ಣ ಜಯಂತಿ : ಜು.21ರಂದು ಪೂರ್ವಭಾವಿ ಸಭೆ

ತುಮಕೂರು: ಜಿಲ್ಲಾಡಳಿತದ ವತಿಯಿಂದ ಆಚರಿಸಲಾಗುವ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮ ಆಯೋಜನೆ ಕುರಿತು ಜುಲೈ 21ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಸಭೆಯು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಲಿದ್ದು, ಸಮುದಾಯದ ಎಲ್ಲಾ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ತಮ್ಮ ಅಗತ್ಯ ಸಲಹೆ ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ ಕೆ. ಮಿರ್ಜಿ ಮನವಿ ಮಾಡಿದ್ದಾರೆ.

ರಾಜ್ಯಾದ್ಯಂತ 579 ಮದ್ಯದ ಸನ್ನದುಗಳ ಹಂಚಿಕೆಗೆ ಬೃಹತ್ ಇ-ಹರಾಜು ಜುಲೈ 24 ರಿಂದ 31 ರವರೆಗೆ ನೇರ ಹರಾಜು ಪ್ರಕ್ರಿಯೆ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು, : ಕರ್ನಾಟಕ ಸರ್ಕಾರವು ರಾಜ್ಯಾದ್ಯಂತ ಒಟ್ಟು 579 ಮದ್ಯದ ಸನ್ನದುಗಳನ್ನು (Licences) ಮುಂದಿನ 5 ವರ್ಷಗಳ ಅವಧಿಗೆ (ಅಂದರೆ 2026-27 ರಿಂದ 2030-31 ರ ವರೆಗೆ) ಎಲೆಕ್ಟ್ರಾನಿಕ್ ಇ-ಹರಾಜು ಮೂಲಕ ಹಂಚಿಕೆ ಮಾಡಲು ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದೆ.

ಈ ಸಂಬಂಧ ಬಿಡ್‌ದಾರರ ನೋಂದಣಿ ಪ್ರಕ್ರಿಯೆಯು ಈಗಾಗಲೇ ಜುಲೈ 3 ರಿಂದಲೇ ಆರಂಭವಾಗಿದ್ದು, ಜುಲೈ 24 ರಿಂದ ಜುಲೈ 31 ರವರೆಗೆ ವಿವಿಧ ಹಂತಗಳಲ್ಲಿ ನೇರ ಹರಾಜು (Live Bidding) ಪ್ರಕ್ರಿಯೆ ನಡೆಯಲಿದೆ.

483 ಸಿಎಲ್(2-ಎ) ಮತ್ತು 96 ಸಿಎಲ್(9-ಎ) ಸನ್ನದುಗಳು ಲಭ್ಯ

ಈ ಬೃಹತ್ ಇ-ಹರಾಜು ಪ್ರಕ್ರಿಯೆಯಲ್ಲಿ ಒಟ್ಟು 483 ಸಿಎಲ್(2-ಎ) ಮತ್ತು 96 ಸಿಎಲ್(9-ಎ) ಸನ್ನದುಗಳು ಹರಾಜಿಗೆ ಮುಕ್ತವಾಗಿವೆ. ಇವುಗಳಲ್ಲಿ ಅತ್ಯಂತ ಪ್ರಮುಖವಾಗಿ ಬೆಂಗಳೂರು ನಗರ ಜಿಲ್ಲೆಯಲ್ಲೇ ಅತಿ ಹೆಚ್ಚು ಅಂದರೆ 119 ಸಿಎಲ್(2-ಎ) ಮತ್ತು 67 ಸಿಎಲ್(9-ಎ) ಸನ್ನದುಗಳು ಲಭ್ಯವಿರುವುದು ವಿಶೇಷವಾಗಿದೆ.

ಸಂವಿಧಾನಬದ್ಧ ಮೀಸಲಾತಿ ಕಲ್ಪನೆ

ಸಾಮಾಜಿಕ ನ್ಯಾಯದ ಹಿನ್ನೆಲೆಯಲ್ಲಿ ಈ ಹರಾಜು ಪ್ರಕ್ರಿಯೆಯಲ್ಲಿ ಮೀಸಲಾತಿಯನ್ನು ಅಳವಡಿಸಲಾಗಿದ್ದು, ಪರಿಶಿಷ್ಟ ಜಾತಿ-ಎ ವರ್ಗದವರಿಗೆ ಶೇ. 5.25 ರಷ್ಟು, ಪರಿಶಿಷ್ಟ ಜಾತಿ-ಬಿ ವರ್ಗದವರಿಗೆ ಶೇ. 5.25 ರಷ್ಟು, ಪರಿಶಿಷ್ಟ ಜಾತಿ-ಸಿ ವರ್ಗದವರಿಗೆ ಶೇ. 4.50 ರಷ್ಟು ಮತ್ತು ಪರಿಶಿಷ್ಟ ಪಂಗಡ ವರ್ಗದವರಿಗೆ ಶೇ. 3 ರಷ್ಟು ಮೀಸಲಾತಿಯನ್ನು ಸರ್ಕಾರ ಕಲ್ಪಿಸಿದೆ.

ಅರ್ಹತೆ ಮತ್ತು ಅರ್ಜಿ ಸಲ್ಲಿಸುವ ವಿಧಾನ

ಈ ಇ-ಹರಾಜಿನಲ್ಲಿ ಭಾಗವಹಿಸಲು ಯಾವುದೇ ವ್ಯಕ್ತಿ ಅಥವಾ ಏಕವ್ಯಕ್ತಿ ಮಾಲೀಕತ್ವ ಸಂಸ್ಥೆಗಳು ಅರ್ಹರಾಗಿರುತ್ತಾರೆ. ಇದರೊಂದಿಗೆ ಭಾರತದ ಕಾನೂನುಗಳ ಅಡಿಯಲ್ಲಿ ನೋಂದಾಯಿಸಲಾದ ಟ್ರಸ್ಟ್, ಸೊಸೈಟಿ, ಪಾಲುದಾರಿಕೆ ಸಂಸ್ಥೆ, ಸೀಮಿತ ಪಾಲುದಾರಿಕೆ ಒಡಂಬಡಿಕೆ (ಐಐಕ) ಅಥವಾ ಕಂಪನಿಗಳು ಕೂಡ ಅರ್ಜಿ ಸಲ್ಲಿಸಬಹುದು. ಬಿಡ್ ಮಾಡಲು ಇಚ್ಛಿಸುವವರು ರೂ. 1,000/- ನೋಂದಣಿ ಶುಲ್ಕ ಮತ್ತು ಅನ್ವಯವಾಗುವ ಜಿ.ಎಸ್.ಟಿ (ಉಖಖಿ) ಪಾವತಿಸಿ ಆನ್‌ಲೈನ್‌ನಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು. ಪ್ರತಿ ಸನ್ನದಿನ ಅರ್ಜಿಗೆ ರೂ. 50,000/- ಅರ್ಜಿ ಶುಲ್ಕ ನಿಗದಿಪಡಿಸಲಾಗಿದ್ದು, ಇದು ಯಾವುದೇ ಕಾರಣಕ್ಕೂ ಮರುಪಾವತಿಯಾಗುವುದಿಲ್ಲ (Non-Refundable).

ಬಿಡ್‌ದಾರರಿಗೆ ಒಂದಕ್ಕಿಂತ ಹೆಚ್ಚು ಸನ್ನದುಗಳಿಗೂ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಆಯಾ ಜಿಲ್ಲೆಯ ಹರಾಜಿನ ದಿನಕ್ಕೆ ಕನಿಷ್ಠ ಎರಡು ಕೆಲಸದ ದಿನಗಳ ಮೊದಲೇ ಒಖಖಿಅ ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ.

ದಿನಾಂಕವಾರು ಮತ್ತು ಜಿಲ್ಲಾವಾರು ನೇರ ಹರಾಜಿನ ಸಂಪೂರ್ಣ ವಿವರ

ಅಬಕಾರಿ ಇಲಾಖೆಯು ಇ-ಹರಾಜಿನ ಸುಗಮ ನಿರ್ವಹಣೆಗಾಗಿ ಪ್ರತಿದಿನ ಬೆಳಿಗ್ಗೆ 10:00 ರಿಂದ ಮಧ್ಯಾಹ್ನ 12:00 ರವರೆಗೆ ಮೊದಲ ಸ್ಲಾಟ್ (Slot-1) ಹಾಗೂ ಮಧ್ಯಾಹ್ನ 03:00 ರಿಂದ ಸಂಜೆ 05:00 ರವರೆಗೆ ಎರಡನೇ ಸ್ಲಾಟ್ (Slot-2) ಎಂದು ವಿಂಗಡಿಸಿ ವೇಳಾಪಟ್ಟಿಯನ್ನು ಸಿದ್ಧಪಡಿಸಿದೆ.

ಜುಲೈ 24, 2026 (ಶುಕ್ರವಾರ): ಅಂದು ಬೆಳಿಗ್ಗೆ ನಡೆಯುವ ಮೊದಲ ಸ್ಲಾಟ್‌ನಲ್ಲಿ ಃಗಲಅ-01 ವ್ಯಾಪ್ತಿಯ 21 ಸನ್ನದುಗಳು, ಬೀದರ್‌ನ 11 ಸನ್ನದುಗಳು ಮತ್ತು ಹಾವೇರಿಯ 14 ಸನ್ನದುಗಳು ಸೇರಿ ಒಟ್ಟು 46 ಸನ್ನದುಗಳಿಗೆ ಹರಾಜು ನಡೆಯಲಿದೆ. ಅದೇ ದಿನ ಮಧ್ಯಾಹ್ನದ ಎರಡನೇ ಸ್ಲಾಟ್‌ನಲ್ಲಿ ಃಗಲಅ-05 ವ್ಯಾಪ್ತಿಯ 18 ಸನ್ನದುಗಳು, ಚಿಕ್ಕಮಗಳೂರಿನ 12 ಸನ್ನದುಗಳು ಹಾಗೂ ಕಲ್ಬುರ್ಗಿಯ 15 ಸನ್ನದುಗಳು ಸೇರಿ ಒಟ್ಟು 45 ಸನ್ನದುಗಳಿಗೆ ಬಿಡ್ಡಿಂಗ್ ನಡೆಯಲಿದೆ.

ಜುಲೈ 27, 2026 (ಸೋಮವಾರ): ಮೊದಲ ಸ್ಲಾಟ್‌ನಲ್ಲಿ BUD-02 ರ 28 ಸನ್ನದುಗಳು, ಹಾಸನದ 13 ಸನ್ನದುಗಳು ಹಾಗೂ ರಾಯಚೂರಿನ 9 ಸನ್ನದುಗಳು ಸೇರಿ ಒಟ್ಟು 50 ಸನ್ನದುಗಳಿಗೆ ಹರಾಜು ನಡೆಯಲಿದೆ. ಎರಡನೇ ಸ್ಲಾಟ್‌ನಲ್ಲಿ BUD-06 ರ 26 ಸನ್ನದುಗಳು, ಶಿವಮೊಗ್ಗದ 17 ಸನ್ನದುಗಳು ಮತ್ತು ಯಾದಗಿರಿಯ 6 ಸನ್ನದುಗಳು ಸೇರಿ ಒಟ್ಟು 49 ಸನ್ನದುಗಳಿಗೆ ಬಿಡ್ಡಿಂಗ್ ನಡೆಯಲಿದೆ. ಜುಲೈ 28, 2026 (ಮಂಗಳವಾರ): ಮೊದಲ ಸ್ಲಾಟ್‌ನಲ್ಲಿ ಃಗಲಅ-3 ರ 25 ಸನ್ನದುಗಳು, ಬೆಳಗಾವಿ ಉತ್ತರದ 10 ಸನ್ನದುಗಳು ಮತ್ತು ಉತ್ತರ ಕನ್ನಡದ 14 ಸನ್ನದುಗಳು ಸೇರಿದಂತೆ ಒಟ್ಟು 49 ಸನ್ನದುಗಳಿಗೆ ಹರಾಜು ನಿಗದಿಯಾಗಿದೆ. ಎರಡನೇ ಸ್ಲಾಟ್‌ನಲ್ಲಿ ಃಗಲಅ-7 ರ 22 ಸನ್ನದುಗಳು, ಬಳ್ಳಾರಿಯ 12 ಸನ್ನದುಗಳು ಮತ್ತು ಬಾಗಲಕೋಟೆಯ 8 ಸನ್ನದುಗಳು ಸೇರಿ ಒಟ್ಟು 42 ಸನ್ನದುಗಳಿಗೆ ಬಿಡ್ಡಿಂಗ್ ಜರುಗಲಿದೆ.

ಜುಲೈ 29, 2026 (ಬುಧವಾರ): ಮೊದಲ ಸ್ಲಾಟ್‌ನಲ್ಲಿ ಃಗಲಅ-4 ರ 13 ಸನ್ನದುಗಳು, ತುಮಕೂರಿನ 26 ಸನ್ನದುಗಳು ಮತ್ತು ಕೊಪ್ಪಳದ 6 ಸನ್ನದುಗಳು ಸೇರಿ ಒಟ್ಟು 45 ಸನ್ನದುಗಳಿಗೆ ಹರಾಜು ನಡೆಯಲಿದೆ. ಎರಡನೇ ಸ್ಲಾಟ್‌ನಲ್ಲಿ ಃಗಲಅ-8 ರ 33 ಸನ್ನದುಗಳು, ಚಿಕ್ಕಬಳ್ಳಾಪುರದ 11 ಸನ್ನದುಗಳು ಮತ್ತು ಮೈಸೂರು ಗ್ರಾಮಾಂತರದ 14 ಸನ್ನದುಗಳು ಸೇರಿ ಒಟ್ಟು 58 ಸನ್ನದುಗಳಿಗೆ ಬಿಡ್ಡಿಂಗ್ ನಡೆಯಲಿದೆ. ಜುಲೈ 30, 2026 (ಗುರುವಾರ): ಮೊದಲ ಸ್ಲಾಟ್‌ನಲ್ಲಿ ದಾವಣಗೆರೆಯ 12 ಸನ್ನದುಗಳು, ವಿಜಯನಗರದ 10 ಸನ್ನದುಗಳು, ಚಿತ್ರದುರ್ಗದ 12 ಸನ್ನದುಗಳು ಹಾಗೂ ಮಂಡ್ಯದ 15 ಸನ್ನದುಗಳು ಸೇರಿ ಒಟ್ಟು 49 ಸನ್ನದುಗಳ ಹರಾಜು ನಡೆಯಲಿದೆ. ಎರಡನೇ ಸ್ಲಾಟ್‌ನಲ್ಲಿ ವಿಜಯಪುರದ 9 ಸನ್ನದುಗಳು, ಚಾಮರಾಜನಗರದ 7 ಸನ್ನದುಗಳು, ದಕ್ಷಿಣ ಕನ್ನಡದ 31 ಸನ್ನದುಗಳು ಮತ್ತು ಗದಗ ಜಿಲ್ಲೆಯ 8 ಸನ್ನದುಗಳು ಸೇರಿ ಒಟ್ಟು 55 ಸನ್ನದುಗಳಿಗೆ ಬಿಡ್ಡಿಂಗ್ ಜರುಗಲಿದೆ.

ಜುಲೈ 31, 2026 (ಶುಕ್ರವಾರ): ಕೊನೆಯ ದಿನದ ಮೊದಲ ಸ್ಲಾಟ್‌ನಲ್ಲಿ ಕೋಲಾರದ 15 ಸನ್ನದುಗಳು, ಧಾರವಾಡದ 19 ಸನ್ನದುಗಳು, ಕೊಡಗಿನ 3 ಸನ್ನದುಗಳು ಮತ್ತು ಬೆಳಗಾವಿ ದಕ್ಷಿಣದ 11 ಸನ್ನದುಗಳು ಸೇರಿ ಒಟ್ಟು 48 ಸನ್ನದುಗಳಿಗೆ ಹರಾಜು ನಡೆಯಲಿದೆ. ಎರಡನೇ ಸ್ಲಾಟ್‌ನಲ್ಲಿ ಬೆಂಗಳೂರು ಗ್ರಾಮಾಂತರದ 11 ಸನ್ನದುಗಳು, ಮೈಸೂರು ನಗರದ 13 ಸನ್ನದುಗಳು, ಬೆಂಗಳೂರು ದಕ್ಷಿಣದ 11 ಸನ್ನದುಗಳು ಮತ್ತು ಉಡುಪಿಯ 8 ಸನ್ನದುಗಳು ಸೇರಿ ಒಟ್ಟು 43 ಸನ್ನದುಗಳೊಂದಿಗೆ ಇ-ಹರಾಜು ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ.

ಹೆಚ್ಚಿನ ಮಾಹಿತಿ ಹಾಗೂ ನೆರವು

ಇ-ಹರಾಜಿನ ಅಧಿಸೂಚನೆ, ಬಿಡ್ಡಿಂಗ್‌ಗಾಗಿ ಹೆಸರು ನೋಂದಾಯಿಸಿಕೊಳ್ಳುವ ವಿಧಾನ, ಯೂಸರ್ ಮ್ಯಾನುವಲ್ (User Manual), ಸಾಮಾನ್ಯ ಪ್ರಶ್ನೋತ್ತರಗಳು (FAQs) ಮತ್ತು ಸಂಪೂರ್ಣ ಮಾಹಿತಿ ನೀಡುವ ವಿಡಿಯೋ ಟ್ಯುಟೋರಿಯಲ್‌ಗಳು ಅಬಕಾರಿ ಇಲಾಖೆಯ ಅಧಿಕೃತ ವೆಬ್‌ಸೈಟ್ https://stateexcise.karnataka.gov.in ಹಾಗೂ MSTC ಪೋರ್ಟಲ್ https://www.mstcecommerce.com ನಲ್ಲಿ ಲಭ್ಯವಿರುತ್ತವೆ ಎಂದು ರಾಜ್ಯ ಅಬಕಾರಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ನದಿ ನೀರು ಹಂಚಿಕೆ ವಿಚಾರದಲ್ಲಿ ರಿಟ್ ಅರ್ಜಿ ಸಲ್ಲಿಸುವಂತಿಲ್ಲ ; ರಿಟ್ ಅರ್ಜಿ ತಮಿಳುನಾಡಿಗೆ ವರದಾನ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ: ಮೇಕೆದಾಟು ಸಮತೋಲನ ಜಲಾಶಯ ನಿರ್ಮಾಣ ವಿಚಾರದಲ್ಲಿ ಕಾನೂನು ಹೋರಾಟದ ಎಲ್ಲಾ ಅವಕಾಶಗಳನ್ನು ಕಳೆದುಕೊಂಡಿರುವ ತಮಿಳುನಾಡಿಗೆ ಕಾವೇರಿ ನದಿ ರಕ್ಷಣಾ ಸಮಿತಿ ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಕೆ ಮಾಡಿರುವ ರಿಟ್ ಅರ್ಜಿ ಪ್ರತಿಕೂಲವಾಗಿದೆ ಎಂದು ನೀರಾವರಿ ತಜ್ಞ ಅರ್ಜುನಹಳ್ಳಿ ಪ್ರಸನ್ನಕುಮಾರ್ ತಿಳಿಸಿದರು.

ನಗರದ ರೈತ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಗಳ ನಡುವೆ ನಡುವಿನ ಯಾವುದೇ ವಿವಾದಲ್ಲಿ ಕೇಂದ್ರ ಸರ್ಕಾರ ಹೊರತುಪಡಿಸಿ ಯಾವುದೇ ಸಂಘ ಸಂಸ್ಥೆಗಳು, ವ್ಯಕ್ತಿ ಮಧ್ಯ ಪ್ರವೇಶ ಮಾಡುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಇದರ ಹೊರತಾಗಿಯೂ ಎಚ್.ಸಿ.ರಾಮು ಅಧ್ಯಕ್ಷತೆಯ ನಮ್ಮ ರಾಜ್ಯದ ಕಾವೇರಿ ನದಿ ರಕ್ಷಣಾ ಸಮಿತಿ ಸಲ್ಲಿಸಿರುವ ರಿಟ್ ಅರ್ಜಿ ತಮಿಳುನಾಡಿಗೆ ವರದಾನವಾಗಿದೆ. ಮೇ.30ರಂದು ಸುಪ್ರೀಂ ಕೋರ್ಟ್‌ಗೆ ಸಂವಿಧಾನ ಪರಿಚ್ಛೇದ 32ರ ಅಡಿಯಲ್ಲಿ ರಿಟ್ ಅರ್ಜಿಯನ್ನು ಸಲ್ಲಿಕೆ ಮಾಡಿರುವುದು ಎಷ್ಟು ಸರಿ ಎಂದು ಪ್ರಸನ್ನ ಕುಮಾರ್ ಪ್ರಶ್ನೆ ಮಾಡಿದರು.

ನದಿ ನೀರು ಹಂಚಿಕೆ ವಿಚಾರದಲ್ಲಿ ಮೊದಲನೆಯದಾಗಿ ರಿಟ್ ಅರ್ಜಿ ಸಲ್ಲಿಸುವಂತಿಲ್ಲ. ಮತ್ತೊಂದೆಡೆ ತಮಿಳುನಾಡಿನ ತಕರಾರು ಅರ್ಜಿ ಮತ್ತು ಪುನರ್ ಪರಿಶೀಲನಾ ಅರ್ಜಿ ವಜಾಗೊಂಡಿದೆ. ಇಂತಹ ಸಂದರ್ಭದಲ್ಲಿ ನಮ್ಮ ರಾಜ್ಯದಿಂದ ರಿಟ್ ಅರ್ಜಿ ಸಲ್ಲಿಕೆ ಮಾಡಲಾಗಿದೆ. ಕಾನೂನಿನಲ್ಲಿ ರಿಟ್ ಅರ್ಜಿ ಸಲ್ಲಿಕೆ ಮಾಡಲು ಅವಕಾಶವೇ ಇಲ್ಲ ಎನ್ನುವ ಮಾಹಿತಿ ಇಲ್ಲದೆ, ಅರ್ಜಿಯನ್ನು ನ್ಯಾಯಾಲಯ ಪುರಸ್ಕರಿಸಿ ವಿಚಾರಣೆಯನ್ನು ಕೈಗೆತ್ತಿಕೊಂಡಲ್ಲಿ ವ್ಯಾಜ್ಯ ಸುಮಾರು 7-8 ವರ್ಷಗಳ ಕಾಲ ನಡೆಯುತ್ತದೆ. ಇದರಿಂದ ರಾಜ್ಯಕ್ಕೆ ಅನ್ಯಾಯವಾಗುತ್ತದೆಯೇ ಹೊರತು ಲಾಭವಾಗುವುದಿಲ್ಲ ಎಂದರು.

ಈಗಾಗಲೇ ಮೇಕೆದಾಟು ವಿಚಾರದಲ್ಲಿ ಕಾನೂನಿನ ಎಲ್ಲಾ ಬಾಗಿಲುಗಳು ತಮಿಳುನಾಡಿಗೆ ಮುಚ್ಚಿರುವುದರಿಂದ ವಿಚಾರಣೆ ನಡೆಯಲಿ ಎನ್ನುವ ಕಾರಣಕ್ಕೆ ತಕರಾರು ಸಹ ಹಾಕುವುದಿಲ್ಲ. ಕಾವೇರಿ ಕೊಳ್ಳದ ಜನತೆಗೆ ಮಾಡಲಾಗುತ್ತಿರುವ ವ್ಯವಸ್ಥಿತ ವಂಚನೆಯಾಗಿದೆ. ಇದರಿಂದಾಗಿ ರಾಜ್ಯದ ಮೇಕೆದಾಟು ವಿಚಾರದಲ್ಲಿ ಯಾವುದೇ ಅನುಮತಿಗಳನ್ನು ಪಡೆದುಕೊಳ್ಳಲು ಇದೊಂದೇ ಅರ್ಜಿ ತೊಡಕಾಗಲಿದೆ. ಈ ಅರ್ಜಿ ಇತ್ಯರ್ಥವಾಗುವವರೆಗೂ ಯಾವುದೇ ಅನುಮತಿಗಳು ನಮಗೆ ದೊರೆಯುವುದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಾವೇರಿ ನದಿ ತೀರ್ಪು 2018ರಲ್ಲಿಯೇ ಬಂದಿದೆ, ಅಂದೆಯೇ ಅದನ್ನು ಪ್ರಶ್ನಿಸಬೇಕು ಎಂದು ಡಾ.ನಿರ್ಮಲಾನಂದನಾಥ ಸ್ವಾಮೀಜಿ, ದೇವೇಗೌಡರು, ಸಿದ್ದರಾಮಯ್ಯ ಗೋಪಾಲಗೌಡರು ಸೇರಿದಂತೆ ಹಲವರ ಗಮನಕ್ಕೆ ತಂದರೂ ಯಾರೂ ಸಹ ತಮ್ಮ ಮಾತನ್ನು ಪರಿಗಣಿಸಲಿಲ್ಲ. ಇದಾದ ನಂತರ 2024ರಲ್ಲಿ ಅಸ್ತಿತ್ವಕ್ಕೆ ಬಂದ ಕಾವೇರಿ ನದಿ ರಕ್ಷಣಾ ಸಮಿತಿ, ಎರಡು ವರ್ಷಗಳಿಂದ ಸುಮ್ಮನಿದ್ದು, 2026ರಲ್ಲಿ ಮೇ.30ರಂದು ತಕರಾರು ಅರ್ಜಿ ಸಲ್ಲಿಸಲಾಗಿದೆ ಎಂದು ದೂರಿದರು.

ರಿಟ್ ಅರ್ಜಿ ಸಲ್ಲಿಕೆ ಮಾಡುತ್ತಿರುವ ಮಾಹಿತಿ ತಿಳಿದು, ಮೇ.26ರಂದು ಸಮಿತಿಗೆ ಪತ್ರ ಬರೆದು ಅರ್ಜಿ ದಾಖಲಿಸದಂತೆ ಮಾಹಿತಿ ನೀಡಿದ್ದೆ. ಇದರ ಹೊರತಾಗಿಯೂ ದೋಷ ಪೂರಿತವಾದ ಅರ್ಜಿ ಎಂದು ಸುಪ್ರೀಂ ಕೋರ್ಟ್ ನಿಮ್ಮ ಅರ್ಜಿಯನ್ನು ಅಮಾನತ್ತಿನಲ್ಲಿ ಇಟ್ಟಿದೆ ಎಂದು ತಿಳಿಸಿದ ಅವರು, ಈಗಾಗಲೇ ಸಲ್ಲಿಕೆ ಮಾಡಿರುವ ರಿಟ್ ಅರ್ಜಿಯನ್ನು ವಾಪಾಸ್ ಪಡೆದುಕೊಳ್ಳಲು ಕ್ರಮವಹಿಸಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಆಣಿಗೆರೆ ಮಲ್ಲಯ್ಯ, ಹಿರಿಯ ಪತ್ರಕರ್ತ ಸು.ತ.ರಾಮೇಗೌಡ ಮುಂತಾದವರು ಇದ್ದರು.

ಉಚಿತ ಯು.ಪಿ.ಎಸ್.ಸಿ ಪರೀಕ್ಷಾ ಪೂರ್ವ ತರಬೇತಿ

ಬೆಂ.ಗ್ರಾ ಜಿಲ್ಲೆ ಜು.2026-27ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ (ಯು.ಪಿ.ಎಸ್.ಸಿ) ನಾಗರಿಕ ಸೇವಾ ಪರೀಕ್ಷಾ ಪೂರ್ವ ತರಬೇತಿಯನ್ನು ಉಚಿತ ಊಟ ಹಾಗೂ ವಸತಿಯೊಂದಿಗೆ ತರಬೇತಿ ನೀಡಲು ಅರ್ಜಿಗಳನ್ನ ಆಹ್ವಾನಿಸಲಾಗಿದೆ.

ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು ಆನ್ಲೈನ್ ಮೂಲಕ ಅರ್ಜಿಗಳನ್ನು ಆ. 3ರ ರೊಳಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ಸೈಟ್ https:// bcwd.karna t aka.gov.in CxÀªÁ sevasindhu services.karnataka.gov. in ಅನ್ನುನೋಡುವುದು ಹಾಗೂ ದೇವನಹಳ್ಳಿ ತಾಲ್ಲೂಕು, ಬೀರಸಂದ್ರಗ್ರಾಮ, , ಜಿಲ್ಲಾಡಳಿತ ಭವನ, 2ನೇ ಮಹಡಿ, ಕೊಠಡಿ ಸಂಖ್ಯೆ: 215, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ಸಹಾಯ ವಾಣಿ: 8050770004 ಯನ್ನು ಸಂಪರ್ಕಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪದ್ಮ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂ.ಗ್ರಾ ಜಿಲ್ಲೆ ಜು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದಿಂದ ಸಮಾಜದ ಮೇಲೆ ಗಮನಾರ್ಹ ಪರಿಣಾಮ ಬೀರಿದ್ದರೂ ಅವರ ಅಸಾಧಾರಣ ಕೊಡುಗೆಗಳನ್ನು ಪ್ರಶಂಸಿಸದ ಮತ್ತು ಗುರುತಿಸದೆ ಉಳಿದಿರುವ ಸಾಧಕರಿಂದ 2027ರ ಪದ್ಮ ಪ್ರಶಸ್ತಿ ಯನ್ನು ನೀಡಲು ಮಹಿಳಾ ಮತ್ತು ಮಕ್ಕಳ ಅಭಿವೃದಿ ಇಲಾಖೆಯಿಂದ ಅರ್ಜಿಗಳನ್ನ ಆಹ್ವಾನಿಸಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಪೌಷ್ಠಿಕ ಆಹಾರ, ಮಹಿಳಾ ಮತ್ತು ಮಕ್ಕಳ ದೌರ್ಜನ್ಯ ವಿರುದ್ಧ ಕಾರ್ಯನಿರ್ವಹಿಸುತ್ತಿರುವ ಸಾಮಾಜಿಕ ನ್ಯಾಯ, ದುರ್ಬಲ ವರ್ಗದ, ಸಬಲೀಕರಣ ಮತ್ತು ಸಂಬಂಧಿತ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ವ್ಯಕ್ತಿಗಳನ್ನು ಗುರುತಿಸಿ ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ ನಲ್ಲಿ ನಾಮ ನಿರ್ದೇಶನ/ಶಿಫಾರಸ್ಸು ಮಾಡಲಾಗುತ್ತದೆ.ಅರ್ಹ ವ್ಯಕ್ತಿಗಳು ಜುಲೈ 30 ರೊಳಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಛೇರಿ, 4 ತಾಲ್ಲೂಕಿನ ಶಿಶು ಅಭಿವೃದಿ ಯೋಜನಾಧಿಕಾರಿಗಳ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬೇಕುಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನ, 2ನೇ ಮಹಡಿ, ಕೊಠಡಿ ಸಂಖ್ಯೆ:206, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಗೂ ದೂರವಾಣಿ ಸಂಖ್ಯೆ: 080-29787445 ಯನ್ನು ಸಂಪರ್ಕಿಸಲು ಮಹಿಳಾ

ತುಮಕೂರಿನ ಶಿರಾದಲ್ಲೇ 2ನೇ ವಿಮಾನ ನಿಲ್ದಾಣ

ಮಧ್ಯ-ಉತ್ತರ ಕರ್ನಾಟಕ ಅಭಿವೃದ್ಧಿಗೆ ಇದು ಅಗತ್ಯ ಎಂದ ಸೋಮಣ್ಣ





ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು ಸಮೀಪ ಎರಡನೇ ವಿಮಾನ ನಿಲ್ದಾಣ ನಿರ್ಮಿಸುವ ಬದಲು ತುಮಕೂರು ಜಿಲ್ಲೆಯ ಶಿರಾದಲ್ಲಿ ಸ್ಥಾಪಿಸಬೇಕು ಎಂದು ಕೇಂದ್ರ ಸಚಿವ ವಿ. ಸೋಮಣ್ಣ ಅಭಿಪ್ರಾಯಪಟ್ಟಿದ್ದಾರೆ. ಇದರಿಂದ ಮಧ್ಯ ಹಾಗೂ ಉತ್ತರ ಕರ್ನಾಟಕದ ಕೈಗಾರಿಕಾ ಮತ್ತು ಆರ್ಥಿಕ ಅಭಿವೃದ್ಧಿಗೆ ಹೊಸ ವೇಗ ಸಿಗಲಿದೆ ಎಂದು ಅವರು ಹೇಳಿದ್ದಾರೆ.

ಬೆಂಗಳೂರು, : ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ಸ್ಥಾಪನೆ ಕುರಿತು ಚರ್ಚೆ ನಡೆಯುತ್ತಿರುವ ನಡುವೆಯೇ, ನೂತನ ಏರ್‌ಪೋರ್ಟ್‌ಗೆ ತುಮಕೂರು ಜಿಲ್ಲೆಯ ಶಿರಾ ಸೂಕ್ತ ಸ್ಥಳವೆಂದು ಕೇಂದ್ರ ಸಚಿವ ವಿ. ಸೋಮಣ್ಣ ಪ್ರತಿಪಾದಿಸಿದ್ದಾರೆ. ಈ ಕುರಿತು ಅವರು ಮಾಧ್ಯಮ ಪ್ರಕಟಣೆ ಹೊರಡಿಸಿದ್ದು, ಬೆಂಗಳೂರಿನ ಸಮೀಪ ಮತ್ತೊಂದು ವಿಮಾನ ನಿಲ್ದಾಣ ನಿರ್ಮಿಸುವುದಕ್ಕಿಂತ ಶಿರಾದಲ್ಲಿ ನಿರ್ಮಾಣ ಮಾಡಿದರೆ ರಾಜ್ಯದ ಸಮಗ್ರ ಅಭಿವೃದ್ಧಿಗೆ ಹೆಚ್ಚು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

ಶಿರಾದಲ್ಲಿ ವಿಮಾನ ನಿಲ್ದಾಣ ಯಾಕೆ? ಸೋಮಣ್ಣ ಕೊಟ್ಟ ಕಾರಣ ಏನು?

ಸೋಮಣ್ಣ ಪ್ರಕಾರ, ಶಿರಾದಲ್ಲಿ ವಿಮಾನ ನಿಲ್ದಾಣ ಸ್ಥಾಪನೆಯಾದರೆ ಮಧ್ಯ ಹಾಗೂ ಉತ್ತರ ಕರ್ನಾಟಕದ ಹಲವು ಜಿಲ್ಲೆಗಳ ಕೈಗಾರಿಕೆ, ವ್ಯಾಪಾರ, ಹೂಡಿಕೆ ಮತ್ತು ಸಾರಿಗೆ ವ್ಯವಸ್ಥೆಗೆ ದೊಡ್ಡ ಉತ್ತೇಜನ ಸಿಗಲಿದೆ. ಈಗಾಗಲೇ ಅಭಿವೃದ್ಧಿ ಬೆಂಗಳೂರು ಕೇಂದ್ರಿತವಾಗಿರುವ ಹಿನ್ನೆಲೆಯಲ್ಲಿ, ಹೊಸ ಮೂಲಸೌಕರ್ಯಗಳನ್ನು ರಾಜ್ಯದ ಇತರ ಭಾಗಗಳಿಗೆ ವಿಸ್ತರಿಸುವ ಅಗತ್ಯವಿದೆ ಎಂದು ಅವರು ಒತ್ತಿ ಹೇಳಿದ್ದಾರೆ.

ಶಿರಾಕ್ಕೆ ಇರುವ ಪ್ರಮುಖ ಅನುಕೂಲಗಳು

ಶಿರಾ ಭಾಗದಲ್ಲಿ ಈಗಾಗಲೇ ಮುಂಬೈಬೆಂಗಳೂರು ಕೈಗಾರಿಕಾ ಕಾರಿಡಾರ್, ಚೆನ್ನೈ ಬೆಂಗಳೂರು ಕೈಗಾರಿಕಾ ಕಾರಿಡಾರ್, ರಾಷ್ಟ್ರೀಯ ಹೂಡಿಕೆ ಮತ್ತು ಉತ್ಪಾದನಾ ವಲಯ) ಹಾಗೂ ಕೆಐಎಡಿಬಿ ಕೈಗಾರಿಕಾ ಪ್ರದೇಶಗಳು ಅಭಿವೃದ್ಧಿಯಾಗುತ್ತಿವೆ. ಈ ಹಿನ್ನೆಲೆಯಲ್ಲಿ ಅಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣವಾದರೆ ಕೈಗಾರಿಕೆಗಳಿಗೆ ಹೆಚ್ಚಿನ ಅನುಕೂಲ ದೊರೆಯಲಿದೆ ಎಂದು ಸೋಮಣ್ಣ ತಿಳಿಸಿದ್ದಾರೆ.

ಇದಲ್ಲದೆ, ರಸ್ತೆ ಮತ್ತು ರೈಲು ಸಂಪರ್ಕವೂ ಉತ್ತಮವಾಗಿದ್ದು, ಭೂಮಿ ಲಭ್ಯತೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳ ದೃಷ್ಟಿಯಿಂದಲೂ ಶಿರಾ ಸೂಕ್ತ ಸ್ಥಳವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಡಿಜಿಸಿಎ ನಿಯಮಕ್ಕೂ ಅನುಕೂಲ

ಡಿಜಿಸಿಎ ನಿಯಮಗಳ ಪ್ರಕಾರ, ಶಿರಾ ನಗರವು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಸುಮಾರು 150 ಕಿಲೋಮೀಟರ್ ದೂರದಲ್ಲಿದೆ. ಹೀಗಾಗಿ ಹೊಸ ವಿಮಾನ ನಿಲ್ದಾಣ ನಿರ್ಮಾಣಕ್ಕೆ ತಾಂತ್ರಿಕ ಅಡ್ಡಿಯೂ ಇರುವುದಿಲ್ಲ ಎಂದು ಸೋಮಣ್ಣ ಹೇಳಿದ್ದಾರೆ.

ಸಮಗ್ರ ಅಭಿವೃದ್ಧಿಗೆ ಒತ್ತು ನೀಡುವಂತೆ ಸಲಹೆ

ಬೆಂಗಳೂರು ಸುತ್ತಮುತ್ತ ಮತ್ತೊಂದು ವಿಮಾನ ನಿಲ್ದಾಣ ನಿರ್ಮಿಸಿದರೆ ಅಭಿವೃದ್ಧಿ ಮತ್ತೆ ಒಂದೇ ಭಾಗಕ್ಕೆ ಸೀಮಿತವಾಗುವ ಸಾಧ್ಯತೆ ಇದೆ. ಆದರೆ ಶಿರಾದಲ್ಲಿ ನಿರ್ಮಿಸಿದರೆ ಮಧ್ಯ ಮತ್ತು ಉತ್ತರ ಕರ್ನಾಟಕದ ಅಭಿವೃದ್ಧಿಗೆ ಹೊಸ ಅವಕಾಶಗಳು ಸೃಷ್ಟಿಯಾಗಲಿದ್ದು, ರಾಜ್ಯದ ಸಮತೋಲಿತ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಬೆಂಗಳೂರು ಕೇಂದ್ರಿತ ದೃಷ್ಟಿಕೋನದಿಂದ ಹೊರಬಂದು, ರಾಜ್ಯದ ಸಮಗ್ರ ಅಭಿವೃದ್ಧಿಯನ್ನು ಮಾನದಂಡವಾಗಿಟ್ಟುಕೊಂಡು ನಿರ್ಧಾರ ಕೈಗೊಳ್ಳಬೇಕು ಎಂದು ವಿ. ಸೋಮಣ್ಣ ಆಗ್ರಹಿಸಿದ್ದಾರೆ.

ಬಿಜೆಪಿ ನಾಯಕರ ಚರ್ಚೆಗೂ ಮುನ್ನವೇ ಪ್ರತ್ಯೇಕ ಪಾದಯಾತ್ರೆ ಘೋಷಿಸಿದ ಜೆಡಿಎಸ್

ಸೂರ್ಯಪ್ರಗತಿನ್ಯೂಸ್.ಕಾಂ



ಬೆಂಗಳೂರು, ಕರ್ನಾಟಕ ಬಿಜೆಪಿಯಲ್ಲಿ ಬಣ ಬಡಿದಾಟ ಮತ್ತು ನಾಯಕತ್ವದ ಗೊಂದಲದ ಏರ್ಪಟ್ಟಿದೆ. ಇದರ ಮಧ್ಯೆ ಜೆಡಿಎಸ್ ಹಾಗೂ ಬಿಜೆಪಿ ದೋಸ್ತಿ ನಡುವೆ ಸಮನ್ವಯತೆ ಕೊರತೆ ಎದುರಾಗಿದೆ. ಹೌದು ಮೈತ್ರಿ ಮಾಡಿಕೊಂಡಾಗಿನಿಂದಲೂ ಮಿತ್ರ ಪಕ್ಷಗಳ ನಾಯಕರ ನಡುವೆ ಯಾವುದೇ ಎಲ್ಲವೂ ಸರಿ ಇಲ್ಲ ಎನ್ನುವುದು ಈಗಾಗಲೇ ಅನೇಕ ಉದಾಹರಣೆಗಳು ಇವೆ. ಇದರ ನಡುವೆ ಇದೀಗ ಬಿಡದಿ ಪಾದಯಾತ್ರೆ ವಿಚಾರವಾಗಿ ದೋಸ್ತಿಗಳ ನಡುವೆಯೇ ಗೊಂದಲ ಏರ್ಪಟ್ಟಿದೆ. ಬಿಡದಿ ಟೌನ್‌ಶಿಪ್ (ಬಜಚಿಜು ಖಿ ತಿಟಿಷ್ಠಿ) ವಿರೋಧಿಸಿ ಬಿಜೆಪಿಗೂ ಮೊದಲೇ ಜೆಡಿಎಸ್ (ಎಆಖ) ಪಾದಯಾತ್ರೆ ದಿನಾಂಕ ಘೋಷಣೆ ಮಾಡಿದೆ. ಜುಲೈ 30, 31 ಮತ್ತು ಆಗಸ್ಟ್ 1ರಂದು ಸುಮಾರು 38 ಕಿಲೋಮೀಟರ್‌ಗಳ 3 ದಿನಗಳ ಪಾದಯಾತ್ರೆಯನ್ನ ಜೆಡಿಎಸ್ ಘೋಷಣೆ ಮಾಡಿದೆ. ಇದರೊಂದಿಗೆ ಬಿಜೆಪಿ ಮತ್ತು ಜೆಡಿಎಸ್ ಮಧ್ಯೆ ಮತ್ತೆ ಸಮನ್ವಯದ ಕೊರತೆ ಇದೆ ಎಂಬುವುದು ಸಾಬೀತಾದಂತಾಗಿದೆ.

ಪ್ರತ್ಯೇಕ ಪಾದಯಾತ್ರೆ ಘೋಷಿಸಿದ ಜೆಡಿಎಸ್

ಬಿಡದಿ ಟೌನ್ ಶಿಪ್ ಪಾದಯಾತ್ರೆ ಮಾಡುವ ಬಗ್ಗೆ ಬಿಜೆಪಿ ಘೋಷಣೆ ಮಾಡಿತ್ತು. ಜೆಡಿಎಸ್ ನಾಯಕರ ಜೊತೆ ಚರ್ಚಿಸಿ ಪಾದಯಾತ್ರೆ ದಿನಾಂಕವನ್ನು ಫಿಕ್ಸ್ ಮಾಡುವುದಾಗಿ ಖುದ್ದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದರು. ಈ ಬಗ್ಗೆ ಚರ್ಚಿಸಲು ಜೆಡಿಎಸ್ ನಾಯಕರನ್ನು ಸಂಪರ್ಕಿಸಲು ಬಿಜೆಪಿ ನಾಯಕರು ಯತ್ನಿಸಿದ್ದರು. ಆದ್ರೆ, ಸಾಧ್ಯವಾಗಿಲ್ಲ. ಇದರ ನಡುವೆಯೇ ಇಂದು ಜೆಡಿಎಸ್ ಪ್ರತ್ಯೇಕ ಪಾದಯಾತ್ರೆ ಘೋಷಿಸಿದೆ. ಬಿಜೆಪಿ ನಾಯಕರ ಚರ್ಚೆಗೂ ಮುನ್ನವೇ ಜೆಡಿಎಸ್ ಪ್ರತ್ಯೇಕ ಪಾದಯಾತ್ರೆ ಘೋಷಣೆ ಮಾಡುವ ಮೂಲಕ ಮಿತ್ರ ಪಕ್ಷಗಳ ನಾಯಕರ ನಡುವೆ ಎಲ್ಲವೂ ಸರಿ ಇಲ್ಲ ಎನ್ನುವುದು ಮತ್ತೊಮ್ಮೆ ಬಹಿರಂಗವಾಗಿದೆ.

ಬಿಜೆಪಿ ಎಂಎಲ್‌ಸಿ ಹೇಳಿದ್ದೇನು?

ಇನ್ನು ಈ ಬಗ್ಗೆ ಬಿಜೆಪಿ ಎಂಎಲ್ ಸಿ ಎನ್.ರವಿಕುಮಾರ್ ಪ್ರತಿಕ್ರಿಯಿಸಿದ್ದು, ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಪಾದಯಾತ್ರೆ ಮಾಡುವುದಾಗಿ ಹೇಳಿದ್ದೆವು. ಈಗ ಜೆಡಿಎಸ್ ನಾಯಕರು ಪಾದಯಾತ್ರೆ ದಿನಾಂಕ ಘೋಷಿಸಿದ್ದಾರೆ. ಪಾದಯಾತ್ರೆ ವಿಚಾರವಾಗಿ ನಮ್ಮಲ್ಲಿ ಯಾವುದೇ ಗೊಂದಲ ಇಲ್ಲ.ಟೌನ್‌ಶಿಪ್ ಯೋಜನೆ ವಿಚಾರದಲ್ಲಿ ಇಬ್ಬರದ್ದೂ ಒಂದೇ ನಿಲುವು. ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ಹೋರಾಟ ಮಾಡುತ್ತೇವೆ. ಹೋರಾಟದ ಬಗ್ಗೆ ಉಭಯ ಪಕ್ಷಗಳ ನಾಯಕರು ಚರ್ಚೆ ಮಾಡ್ತಾರೆ. ಒಂದೇ ಪಾದಯಾತ್ರೆ ಬಗ್ಗೆ ಚರ್ಚಿಸಿ ತೀರ್ಮಾನ ಮಾಡುತ್ತಾರೆ. ಉಭಯ ನಾಯಕರು ಚರ್ಚಿಸಿ ಶೀಘ್ರ ದಿನಾಂಕ ಘೋಷಣೆ ಮಾಡ್ತೇವೆ ಎಂದು ತಿಳಿಸಿದರು.

ರಾಜ್ಯ ಬಿಜೆಪಿಯಲ್ಲಿ ಮುಂದುವರಿದಿರುವ ಆಂತರಿಕ ಭಿನ್ನಾಭಿಪ್ರಾಯ, ಬಣ ರಾಜಕೀಯ ಹಾಗೂ ನಾಯಕತ್ವದ ಗೊಂದಲದ ನಡುವೆ ಇತ್ತ ಜೆಡಿಎಸ್, ಕುಮಾರಸ್ವಾಮಿಯವರನ್ನು ಮೈತ್ರಿಕೂಟದ ಪ್ರಮುಖ ಮುಖವಾಗಿ ಬಿಂಬಿಸಲು ಪ್ರಯತ್ನಿಸುತ್ತಿದೆ. ಇದರ ಮಧ್ಯೆ ಜೆಡಿಎಸ್ , ಬಿಡದಿ ಟೌನ್ ಶಿಪ್ ವಿಚಾರದಲ್ಲಿ ಮಿತ್ರ ಪಕ್ಷ ಬಿಜೆಪಿ ನಾಯಕ ಅಭಿಪ್ರಾಯ ಕೇಳದೇ ಏಕಾಂಗಿಯಾ ಪಾದಯಾತ್ರೆ ಘೋಷಣೆ ಮಾಡಿರುವುದು ಉಭಯ ನಾಯಕರು ಹಾಗೂ ಕಾರ್ಯಕರ್ತರಲ್ಲಿ ಗೊಂದಲ ಏರ್ಪಟ್ಟಿದೆ. ಇದು ಮುಂದೆ ಯಾವ ಹಂತಕ್ಕೆ ಹೋಗಿ ನಿಲ್ಲುತ್ತೆ ಎನ್ನುವುದನ್ನು ಕಾದುನೋಡಬೇಕಿದೆ.

"ರೈತರು ಮತ್ತು ಜಾನುವಾರುಗಳ ಉಳಿವಿಗಾಗಿ" ಕೆರೆ ಪುನಶ್ಚೇತನ ಕಾರ್ಯಕ್ರಮ

ಸೂರ್ಯಪ್ರಗತಿನ್ಯೂಸ್.ಕಾಂ



ಕೊಳ್ಳೇಗಾಲ ;ಭಾರತೀಯ ಜನತಾ ಪಾರ್ಟಿ ಹಿಂದುಳಿದ ವರ್ಗಗಳ ಮೋರ್ಚಾ ಹಾಗೂ ರೈತ ಮೋರ್ಚಾದ ವತಿಯಿಂದ "ರೈತರು ಮತ್ತು ಜಾನುವಾರುಗಳ ಉಳಿವಿಗಾಗಿ" ಕೆರೆ ಪುನಶ್ಚೇತನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ತಾಲ್ಲೂಕಿನ ಹನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮೊಳಗನಕಟ್ಟೆ ಗ್ರಾಮದ ರಾಚಶೆಟ್ಟಿದೊಡ್ಡಿಯಲ್ಲಿ ಬಿಜೆಪಿ ಒಬಿಸಿ ಮೋರ್ಚಾ ವತಿಯಿಂದ ಕೈಗೊಂಡಿರುವ ದೊಡ್ಡಿಂದುವಾಡಿ ಸಿದ್ದಶೆಟ್ಟಿ ಕೆರೆ ಪುನಶ್ಚೇತನ ಕಾರ್ಯಕ್ರಮವನ್ನು ಚಾಮರಾಜನಗರ ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್ ನಿರಂಜನ್ ಕುಮಾರ್ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು ಈ ಬಾರಿ ಮಳೆ ಕೊರತೆಯಾಗಿರುವುದರಿಂದ ರೈತರು ಮತ್ತು ಜಾನುವಾರುಗಳಿಗೆ ಸಂಕಷ್ಟ ಎದುರಾಗಲಿ ಆ ಹಿನ್ನೆಲೆಯಲ್ಲಿ ಒಬಿಸಿ ಮೋರ್ಚಾದ ಜಿಲ್ಲಾಧ್ಯಕ್ಷ ವೆಂಕಟೇಶ್ ರವರು ಈ ಕೆರೆಯನ್ನು ಅಭಿವೃದ್ಧಿ ಪಡಿಸಿ ಪುನಶ್ಚೇತನಗೊಳಿಸಿದ್ದಾರೆ. ಗ್ರಾಮಸ್ಥರು ಇದರ ಸದುಪಯೋಗ ಪಡಿಸಿಕೊಳ್ಳಿ ಎಂದು ಕರೆ ನೀಡಿದರು.

ಬಿಡದಿಯ ರೈತರ ಜಮೀನನ್ನು ಕಿತ್ತುಕೊಳ್ಳಲು ಮುಂದಾಗುವ ಮೂಲಕ ಸರ್ಕಾರ ಜನ ವಿರೋಧಿ ಪರವಾಗಿದೆ ಎಂಬುದನ್ನು ಈಗಾಗಲೇ ನಿರೂಪಿಸಿದೆ. ಹಿಂದೆ ರಾಜ್ಯದಲ್ಲಿ ಬರ ಉಂಟಾಗಿದ್ದಾಗ ಬಿಜೆಪಿ ಸರ್ಕಾರವಿತ್ತು ಈ ವೇಳೆ ಬರಪಿಡಿತ ರೈತರಿಗೆ 20,000 ರೂ.ಗಳ ನೀಡಿದ್ದೆವು. ಈಗಿನ ಸರ್ಕಾರ 50,000 ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಮಾಜಿ ಸಚಿವ ಎನ್. ಮಹೇಶ್ ಮಾತನಾಡಿ ಈ ಬಾರಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು ಜೂನ್ ತಿಂಗಳಲ್ಲಿ ಶೇಕಡ 33% ರಷ್ಟು ಮಳೆಯಾಗಿದೆ ಇನ್ನು 12 ದಿನಗಳನ್ನು ಕಾಯುತ್ತಿದ್ದೇವೆ ಅಷ್ಟರಲ್ಲಿ ಮಳೆಯಾಗಬೇಕು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ರೈತರು ಬೆಳೆದ ಬೆಳೆಗಳಿಗೆ ನೀರಿಲ್ಲದೆ ಒಣಗುತ್ತಿವೆ ರಾಜ್ಯ ಸರ್ಕಾರ ಬರಪೀಡಿತ ಪ್ರದೇಶ ಎಂದು ಘೋಷಣೆ ಮಾಡಬೇಕು ಆದರೆ ಕೇಂದ್ರಕ್ಕೆ ಪತ್ರ ಬರೆದಿದೆ. ಮೊದಲು ಬರಪಿಡಿತ ಪ್ರದೇಶ ಎಂದು ಘೋಷಣೆ ಮಾಡಿ ನಂತರ ಕೇಂದ್ರಕ್ಕೆ ಪತ್ರ ಬರೆಯಲಿ. ಯಡಿಯೂರಪ್ಪ ಸರ್ಕಾರವಿದ್ದಾಗ ರಾಜ್ಯದಲ್ಲಿ ಬರ ಮತ್ತು ನೆರೆ ಎರಡು ಆಗಿತ್ತು ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸಿ ರಿಯಲ್ ಎಸ್ಟೇಟ್ ದಂಧೆಯಲ್ಲಿ ನಿರತವಾಗಿದೆ ಎಂದು ಗಂಭೀರ ಆರೋಪ ಮಾಡಿದರು

ಒಬಿಸಿ ಮೋರ್ಚಾದ ಜಿಲ್ಲಾಧ್ಯಕ್ಷ ವೆಂಕಟೇಶ್ ಮಾತನಾಡಿ ಓಬಿಸಿ ಮೋರ್ಚಾದ ವತಿಯಿಂದ ರೈತಪರ ಕಾರ್ಯಕ್ರಮ ನಡೆಸಿಕೊಂಡು ಬರಲಾಗುತ್ತಿದೆ ಇದು ಹನೂರು ವಿಧಾನಸಭಾ ಕ್ಷೇತ್ರದಲ್ಲಿ ನಾಲ್ಕನೆಯ ಕೆರೆಯಾಗಿದೆ. ಹನೂರು ಭಾಗದಲ್ಲಿ ಬರ ತಾಂಡವಾಡುತ್ತಿದೆ ರಾಜ್ಯ ಸರ್ಕಾರ ಇತ್ತ ಗಮನಹರಿಸುತ್ತಿಲ್ಲ. ರಾಜ್ಯ ಸರ್ಕಾರ ಈ ಭಾಗದ ರೈತರ ನೋವಿಗೆ ಸ್ಪಂದಿಸದಿದ್ದರೆ ಜಿಲ್ಲೆಯಾದ್ಯಂತ ಸ್ವಾಭಿಮಾನಿ ಕಾರ್ಯಕರ್ತರೆಲ್ಲರೂ ಒಗ್ಗಟ್ಟಾಗಿ ಸೇರಿ ಸ್ವತಃ ಕೆರೆಗಳನ್ನು ಹೂಳೆತ್ತಿ ಅಭಿವೃದ್ಧಿ ಪಡಿಸಿಕೊಳ್ಳ ಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಬರಪರಿಹಾರ ಸಮಿತಿಯ ಮಾಜಿ ಅಧ್ಯಕ್ಷ ರಾಮಚಂದ್ರ, ಸುಂದರ್, ನೂರೊಂದುಶೆಟ್ಟಿ, ಪಿಎಸ್‌ಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ್ ಸೇರಿದಂತೆ ಇನ್ನಿತರ ಮುಖಂಡರು ಕಾರ್ಯಕರ್ತರು ಹಾಜರಿದ್ದರು.

ಕೀಟನಾಶಕ ಸಿಂಪರಣೆ : ಎಚ್ಚರಿಕೆ ಫಲಕ ಅಳವಡಿಸಲು ಮನವಿ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಕೃಷಿ ಬೆಳೆಗಳಿಗೆ ಕೀಟ ನಾಶಕಗಳನ್ನು ಸಿಂಪಡಿಸಿದ ನಂತರ ಜಮೀನಿನಲ್ಲಿ ಮೇಯಲು ಬರುವ ಕುರಿ, ಮೇಕೆ, ದನ ಹಾಗೂ ಇತರೆ ಜಾನುವಾರುಗಳು ವಿಷಪೂರಿತ ಹುಲ್ಲು ಮತ್ತು ಎಲೆಗಳನ್ನು ಸೇವಿಸುವುದರಿಂದ ಅವುಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗಿ ಸಾವು ಸಂಭವಿಸುತ್ತಿರುವ ಘಟನೆಗಳು ವರದಿಯಾಗುತ್ತಿರುವ ಹಿನ್ನೆಲೆಯಲ್ಲಿ ಕೀಟನಾಶಕ ಸಿಂಪಡಣೆ ಮಾಡಿದ ತಕ್ಷಣ, ಸಂಬಂಧಿಸಿದ ಜಮೀನಿನ ಪ್ರವೇಶದ್ವಾರ ಹಾಗೂ ಗೋಚರಿಸುವ ಸ್ಥಳಗಳಲ್ಲಿ "ಈ ಜಮೀನಿಗೆ ಕೀಟನಾಶಕ ಸಿಂಪಡಿಸಲಾಗಿದೆ. ದಯವಿಟ್ಟು ಕುರಿ, ಮೇಕೆ, ದನ ಹಾಗೂ ಇತರೆ ಜಾನುವಾರುಗಳನ್ನು ಮೇಯಲು ಬಿಡಬೇಡಿ" ಎಂಬ ಎಚ್ಚರಿಕೆ ಫಲಕವನ್ನು ಕಡ್ಡಾಯವಾಗಿ ಅಳವಡಿಸಬೇಕು. ಕೀಟನಾಶಕದ ಲೇಬಲ್‌ನಲ್ಲಿ ಸೂಚಿಸಿರುವ ಸುರಕ್ಷಿತ ಅವಧಿ ಮುಗಿಯುವವರೆಗೆ ಕೀಟನಾಶಕ ಸಿಂಪಡಿಸಿದ ಜಮೀನಿಗೆ ಜಾನುವಾರುಗಳನ್ನು ಮೇಯಲು ಬಿಡಬಾರದು ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಆಯುಕ್ತಾಲಯ ರೈತರಲ್ಲಿ ಮನವಿ ಮಾಡಿದೆ.

ಕೃಷಿ ಇಲಾಖೆ / ತೋಟಗಾರಿಕಾ / ಪಶುಸಂಗೋಪನೆ ಇಲಾಖೆ ಅಧಿಕಾರಿಗಳು ರೈತರಿಗೆ ಈ ಕುರಿತು ಅರಿವು ಮೂಡಿಸಿ ಎಚ್ಚರಿಕೆ ಫಲಕಗಳನ್ನು ಅಳವಡಿಸಿರುವುದನ್ನು ಖಚಿತಪಡಿಸಬೇಕು. ಸ್ಥಳೀಯ ಗ್ರಾಮ ಪಂಚಾಯಿತಿ, ರೈತ ಸಂಪರ್ಕ ಕೇಂದ್ರ ಹಾಗೂ ಸಂಬಂಧಿಸಿದ ಇಲಾಖೆಗಳು ಎಚ್ಚರಿಕೆ ಫಲಕ ಅಳವಡಿಸಿಕೊಳ್ಳುವ ಬಗ್ಗೆ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು.

ಇತ್ತೀಚೆಗೆ ಜಿಲ್ಲೆಯ ಶಿರಾ ಹಾಗೂ ಕೊರಟಗೆರೆ ತಾಲ್ಲೂಕಿನಲ್ಲಿ ಕೀಟನಾಶಕ ಸಿಂಪಡಿಸಿದ ಜಮೀನಿನಲ್ಲಿ ಮೇವು ತಿಂದು ಕುರಿ/ಮೇಕೆಗಳು ಮರಣ ಹೊಂದಿರುವ ಪ್ರಕರಣ ವರದಿಯಾಗಿದ್ದು, ಇಂತಹ ಘಟನೆಗಳು ಮರುಕಳಿಸದಂತೆ ಜಾನುವಾರು ಮಾಲೀಕರಿಗೆ ನಷ್ಟ ಉಂಟಾಗದಂತೆ ಕೃಷಿ/ತೋಟಗಾರಿಕೆ/ ಪಶುಸಂಗೋಪನ ಇಲಾಖೆಯ ಅಧಿಕಾರಿಗಳು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಆಯುಕ್ತಾಲಯದ ಸೂಚನೆಗಳನ್ನು ಪಾಲಿಸಬೇಕೆಂದು ತಿಳಿಸಲಾಗಿದೆ.

ಸೂರ್ಯ ಪ್ರಗತಿ

ಉಚಿತ ಯು.ಪಿ.ಎಸ್.ಸಿ ಪರೀಕ್ಷಾ ಪೂರ್ವ ತರಬೇತಿ

ಬೆಂ.ಗ್ರಾ ಜಿಲ್ಲೆ ; 2026-27ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ (ಯು.ಪಿ.ಎಸ್.ಸಿ) ನಾಗರಿಕ ಸೇವಾ ಪರೀಕ್ಷಾ ಪೂರ್ವ ತರಬೇತಿಯನ್ನು ಉಚಿತ ಊಟ ಹಾಗೂ ವಸತಿಯೊಂದಿಗೆ ತರಬೇತಿ ನೀಡಲು ಅರ್ಜಿಗಳನ್ನ ಆಹ್ವಾನಿಸಲಾಗಿದೆ. ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಗಳಿಗೆ ಸೇರಿದ ಅರ್ಹ ಅಭ್ಯರ್ಥಿಗಳು ಆನ್ಲೈನ್ ಮೂಲಕ ಅರ್ಜಿಗಳನ್ನು ಆ. 3ರ ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್ಸೈಟ್ https://bcwd.karnataka.gov.in CxÀªÁ sevasindhuservices.karnataka.gov.in ಅನ್ನು ನೋಡುವುದು ಹಾಗೂ ದೇವನಹಳ್ಳಿ ತಾಲ್ಲೂಕು, ಬೀರಸಂದ್ರ ಗ್ರಾಮ, , ಜಿಲ್ಲಾಡಳಿತ ಭವನ, 2ನೇ ಮಹಡಿ, ಕೊಠಡಿ ಸಂಖ್ಯೆ: 215, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ, ಸಹಾಯ ವಾಣಿ: 8050770004 ಯನ್ನು ಸಂಪರ್ಕಿಸಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಓವರ್ ಹೆಡ್ ಟ್ಯಾಂಕ್ ಮೂಲಕ ಕಲುಷಿತ ನೀರು ಸರಬರಾಜು

ಜಿಲ್ಲಾಧಿಕಾರಿ ಡಾ.ಕೆ.ಎನ್ಅನುರಾಧ ಭೇಟಿ ನೀಡಿ ಪರಿಶೀಲನೆ



ಬೆಂ.ಗ್ರಾ ಜಿಲ್ಲೆ ಜು.ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಪಟ್ಟಣದ ಚಿಕ್ಕಬಳ್ಳಾಪುರ ರಸ್ತೆಯಲ್ಲಿರುವ ಓವರ್ ಹೆಡ್ ಟ್ಯಾಂಕ್ ಮೂಲಕ ಕಲುಷಿತ ನೀರು ಸರಬರಾಜು ಆಗಿರುವ ಬಗ್ಗೆ ಮಾಧ್ಯಮಗಳಲ್ಲಿ ವರದಿ ಬಂದ ಹಿನ್ನೆಲೆಯಲ್ಲಿ ಶನಿವಾರ ಜಿಲ್ಲಾಧಿಕಾರಿ ಡಾ. ಕೆ.ಎನ್ ಅನುರಾಧ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಲೋಕೋಪಯೋಗಿ ಇಲಾಖೆಯ ವತಿಯಿಂದ ಚಿಕ್ಕಬಳ್ಳಾಪುರ ರಸ್ತೆಯ ಅಗಲೀಕರಣ ಕಾಮಗಾರಿ ನಡೆಯುತ್ತಿದ್ದು ಕಾಮಗಾರಿ ಮಾಡುವ ಸಂದರ್ಭದಲ್ಲಿ ನೀರು ಸರಬರಾಜು ಪೈಪ್ ಗೆ ಹಾನಿಯಾಗಿರುವುದರಿಂದ ಮಣ್ಣು ಮಿಶ್ರಿತ ನೀರು ಸಂಗ್ರಹವಾಗಿರುವುದು ಪರಿಶೀಲನೆ ಸಂದರ್ಭದಲ್ಲಿ ಕಂಡು ಬಂದಿದೆ. ಆದ್ದರಿಂದ ಕೂಡಲೇ ಮಣ್ಣು ಮಿಶ್ರಿತ ನೀರು ಹೊರ ತೆಗೆದು ಟ್ಯಾಂಕ್ ಸ್ವಚ್ಛಗೊಳಿಸಿ ಶುದ್ಧ ನೀರು ಸರಬರಾಜು ಮಾಡಲು ಪುರಸಭೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸ್ಥಳದಲ್ಲೇ ಸೂಚಿಸಿದರು. ನಂತರ ವಿಜಯಪುರ ಪಟ್ಟಣದಲ್ಲಿ ನೀರು ಸರಬರಾಜು ವ್ಯವಸ್ಥೆ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು ಸಾರ್ವಜನಿಕರಿಗೆ ಕುಡಿಯುವ ನೀರು ಸಮಸ್ಯೆ ಆಗದಂತೆ ಸಮರ್ಪಕ ಹಾಗೂ ಶುದ್ಧ ನೀರು ಸರಬರಾಜು ಮಾಡಲು ಎಲ್ಲಾ ಅಗತ್ಯ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂಧರ್ಭದಲ್ಲಿ ವಿಜಯಪುರ ಪುರಸಭೆ ಮುಖ್ಯಾಧಿಕಾರಿ ಸತ್ಯನಾರಾಯಣ, ಪುರಸಭೆ ಅಧ್ಯಕ್ಷೆ ಭವ್ಯ ಮಹೇಶ್, ಪುರಸಭೆ ಅಧಿಕಾರಿಗಳು ಉಪಸ್ಥಿತರಿದ್ದರು.

ಶೌರ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂ.ಗ್ರಾ ಜಿಲ್ಲೆ "ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ" ನೀಡಲು ನಾಮ ನಿರ್ದೇಶನಗಳನ್ನು ಸಲ್ಲಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಮಕ್ಕಳ ದಿನಾಚರಣೆ-2026ರ ಪ್ರಯುಕ್ತ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷದೊಳಗಿನ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ 'ಕೆಳದಿ ಚೆನ್ನಮ್ಮ' ಶೌರ್ಯ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತದೆ. ರಾಜ್ಯ ಪ್ರಶಸ್ತಿಗೆ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 05 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ, ಸಂಸ್ಥೆಗಳಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಲಾಗುತ್ತದೆ.

ಆಸಕ್ತರು ತಮ್ಮ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಂದ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಪಟ್ಟ ಜಿಲ್ಲೆಯ ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಆ. 20 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ:206, ಉಪನಿರ್ದೇಶಕರ ಕಛೇರಿ, ದೂ. ಸಂಖ್ಯೆ: 080-29787445 ಅಥವಾ ತಾಲ್ಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕಚೇರಿ ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಸಿದ್ದಾರೆ

ಕರಿ ಬಸವೇಶ್ವರಸ್ವಾಮಿ ಮಠದ ಚನ್ನಬಸವರಾಜೇಂದ್ರ ಸ್ವಾಮೀಜಿ ಶಿವೈಕ್ಯ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ನಗರದ ಹೊರಪೇಟೆಯ ಕರಿಬಸವೇಶ್ವರ ಸ್ವಾಮಿ ಮಠದ ಚನ್ನ ಬಸವರಾಜೇಂದ್ರ ಸ್ವಾಮೀಜಿ ಶನಿವಾರ ಮುಂಜಾನೆ ಶಿವೈಕ್ಯರಾದರು. ಇವರಿಗೆ 98 ವರ್ಷ ವಯಸ್ಸಾಗಿತ್ತು. ಕೆಲವು ದಿನಗಳಿಂದ ಸ್ವಾಮೀಜಿಗಳು ಆಂಧ್ರಪ್ರದೇಶದ ಅನಂತಪುರ ಜಿಲ್ಲೆಯ ಉರುವಕೊಂಡ ಮಠದಲ್ಲಿ ವಾಸ್ತವ್ಯ ಹೂಡಿದ್ದು ವಯೋ ಸಹಜ ಕಾಯಿಲೆಗಳಿಗೆ ಚಿಕಿತ್ಸೆ ಪಡೆಯುತ್ತಿದ್ದರು, ಮುಂಜಾನೆ ಕೊನೆಯುಸಿರೆಳೆದರು.

ಚನ್ನ ಬಸವ ರಾಜೇಂದ್ರ ಸ್ವಾಮೀಜಿಗಳು ಶಿವೈಕ್ಯರಾದ ಹಿನ್ನೆಲೆಯಲ್ಲಿ ನಗರದ ಕರಿ ಬಸವೇಶ್ವರಸ್ವಾಮಿ ಮಠದಲ್ಲಿ ಭಕ್ತರು ಸ್ವಾಮೀಜಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಭಕ್ತನಮನ ಸಲ್ಲಿಸಿದರು. ಶಾಸಕ ಜಿ.ಬಿ. ಜ್ಯೋತಿಗಣೇಶ್, ನಗರ ವೀರಶೈವ ಸಮಾಜ ಸೇವಾ ಸಮಿತಿ ಅಧ್ಯಕ್ಷ ಕೋರಿ ಮಂಜುನಾಥ್, ಉಪಾಧ್ಯಕ್ಷ ಟಿ.ಬಿ. ಹರೀಶ್ ಮತ್ತಿತರರು ಆಗಮಿಸಿ ಸ್ವಾಮೀಜಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿಗೌರವ ಸಮರ್ಪಿಸಿದರು.

ಜಗದ್ಗುರು ಪಂಚಾಚಾರ್ಯ ಸೇವಾ ಟ್ರಸ್ಟ್‌ಅಧ್ಯಕ್ಷ ಟಿ.ಆರ್. ಸದಾಶಿವಯ್ಯ, ಮುಖಂಡರಾದ ಮನೋಜ್ ಹರಳೂರು, ದಯಾನಂದ್, ಟಿ.ಜಿ. ಬಸವರಾಜು, ಪ್ರತಾಪ್, ರವಿ ಮಲ್ಲಣ್ಣ, ಬಂಬೂ ಮೋಹನ್, ವಿಕಾಸ್‌ಆರಾಧ್ಯ, ಪರಿಣಿತ್, ಪ್ರಜ್ವಲ್, ವಿಜಯಕುಮಾರ್, ಹೇಮಂತ್ ಮತ್ತಿತರರು ಭಾಗವಹಿಸಿ ಭಕ್ತಿ ನಮನ ಸಲ್ಲಿಸಿದರು.

ಶಿಕ್ಷಕರ ಸಮಸ್ಯೆ ಬಗೆಹರಿಸಲು ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ. ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಪಾವಗಡ ತಾಲ್ಲೂಕು ಶಾಖೆ ವತಿಯಿಂದ ಶಿಕ್ಷಕರ ಸಮಸ್ಯೆಗಳನ್ನು ಬಗೆಹರಿಸಲು ಒತ್ತಾಯಿಸಿ ಮೌನ ಪ್ರತಿಭಟನೆ ನಡೆಸಿ. ಮಾನ್ಯ ಗ್ರೇಡ್ –2

ತಹಸಿಲ್ದಾರ್ ಪಿ.ಎಸ್.ಆರ್. ಪ್ರಸಾದ್ ಅವರಿಗೆ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳಿಗೆ, ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕರಿಗೆ ಶಿಕ್ಷಕರ ವಿವಿಧ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಘದ ವತಿಯಿಂದ ಮನವಿ ಸಲ್ಲಿಸಿದರು

ಶಿಕ್ಷಕರ ಪ್ರತಿಭಟನೆಯನ್ನು ಉದ್ದೇಶಿಸಿ ಪಾವಗಡ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಲಿಂಗಣ್ಣ ರವರು ಮಾತನಾಡಿ ಶಾಲಾ ಶಿಕ್ಷಕರನ್ನು ವಿವಿಧ ಸರ್ಕಾರದ ಕಾರ್ಯಕ್ರಮಗಳಿಗೆ ನಿಯೋಜನೆಗೊಳಿಸಿ ಮಕ್ಕಳಿಗೆ ಪಾಠ ಪ್ರವಚನ ಮಾಡಲು ತೊಂದರೆಯಾಗುತ್ತಿದೆ ಶಿಕ್ಷಕರಿಗೆ ಬಿಸಿ ಊಟದ ಜವಾಬ್ದಾರಿ



ನೀಡಿದ್ದು ಅದು ದೊಡ್ಡ ಸವಾಲಾಗಿದೆ. ಮಕ್ಕಳಿಗೆ ಪಾಠ ಮಾಡಲು ತೊಂದರೆಯಾಗುತ್ತಿದೆ ಸರ್ಕಾರ ನೀಡುತ್ತಿರುವ ಮೊಟ್ಟೆಯ ಹಣಕ್ಕೂ ಮಾರುಕಟ್ಟೆಯಲ್ಲಿ ಸಿಗುತ್ತಿರುವ ಮೊಟ್ಟೆ ದರವು ಬಹಳ ವ್ಯತ್ಯಾಸವಾಗಿದ್ದು ಶಿಕ್ಷಕರ ಜೇಬಿಗೆ ಕತ್ತರಿ ಬೀಳುತ್ತಿದೆ ಶಿಕ್ಷಕರ ಮೇಲೆ ಎಸ್.ಐ.ಆರ್. ಹಾಗೂ ಬಿ.ಎಲ್.ಓ . ಮತ್ತು ನಿರಂತರ(ಏಂಂಬಖ) ತಂತ್ರಾಂಶ ಸುಧಾರಣೆ ಮಾಡಿ ತಾಂತ್ರಿಕ ತೊಂದರೆಗಳನ್ನು ಸರಿಪಡಿಸಿ ಶಿಕ್ಷಕರ ಮತ್ತು ಮಕ್ಕಳ ಸ್ನೇಹಿ ವ್ಯವಸ್ಥೆಯನ್ನು ರೂಪಿಸಬೇಕು. ಶಿಕ್ಷಕರಿಗೆ ವಿವಿಧ ಕೆಲಸದ ಒತ್ತಡ ನೀಡುತ್ತಿರುವುದರಿಂದ ಶಿಕ್ಷಕರು ಮಾನಸಿಕ ಒತ್ತಡಕ್ಕೆ ಒಳಗಾಗಿ ವಿವಿಧ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಆದ್ದರಿಂದ ಸರ್ಕಾರ ಶಿಕ್ಷಕರಿಗೆ ಹೆಚ್ಚುವರಿಯಾಗಿ ನೀಡುವ ಜವಾಬ್ದಾರಿಯನ್ನು ನೀಡದೆ ಶಿಕ್ಷಕರನ್ನು ಮಕ್ಕಳ ಜೊತೆ ಪಾಠ ಪ್ರವಚನ ಮಾಡಲು ಮಾತ್ರ ನಿಯೋಜಿಸಿ ಇತರೆ ಕಾರ್ಯಕ್ರಮಗಳನ್ನು ಬೇರೆಯ ಏಜೆನ್ಸಿಗಳ ಮೂಲಕ ಅನುಷ್ಠಾನಗೊಳಿಸಬೇಕೆಂದು ಒತ್ತಾಯಿಸಿದರು

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳಾದ ಪ್ರಧಾನ ಕಾರ್ಯದರ್ಶಿ ವಸಂತ್ ಕುಮಾರ್ . ಖಜಾಂಚಿ ಸೋಮಶೇಖರ್ ಟಿ. ಉಪಾಧ್ಯಕ್ಷೆ. ಸರೋಜಾದೇವಿ. ಮಹಿಳಾ ಉಪಾಧ್ಯಕ್ಷೆ ಸುಧಾಮಣಿ. ಸಂಘಟನಾ ಕಾರ್ಯದರ್ಶಿ. ಹನುಮಂತರಾಯ. ನಿರ್ದೇಶಕರಾದ. ನಾಗೇಂದ್ರ, ರಿಜ್ವಾನ್ ಭಾಷಾ .ಸರ್ಕಾರಿ ನೌಕರ ಸಂಘದ ಕಾರ್ಯದರ್ಶಿ ಮಾರುತೇಶ್. ವಿವಿಧ ಶಿಕ್ಷಕರ ಸಂಘದ ಪದಾಧಿಕಾರಿಗಳು ನೂರಾರು ಶಿಕ್ಷಕರು ಭಾಗವಹಿಸಿದ್ದರು.

ಸವಿತಾ ಸಮಾಜ ಯುವಪಡೆ ವತಿಯಿಂದ ಪ್ರತಿಭಾ ಪುರಸ್ಕಾರ

ತುಮಕೂರು ಜಿಲ್ಲಾ ಸವಿತಾ ಸಮಾಜ ಯುವಪಡೆ ವತಿಯಿಂದ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ. ವಿದ್ಯಾರ್ಥಿಗಳಿಗೆ 2025–26ನೇ ಸಾಲಿನಲ್ಲಿ ಶೇ. 80% ಕ್ಕಿಂತ ಅಧಿಕ ಶ್ರೇಣಿಯಲ್ಲಿ ಉತ್ತೀರ್ಣರಾದ ಸವಿತಾ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಮ್ಮಿಕೊಳ್ಳಲಾಗಿದೆ. ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿ, ಫೋಟೋ ಮತ್ತು ಆಧಾರ್ ಕಾರ್ಡ್‌ನೊಂದಿಗೆ ಜಿಲ್ಲೆಯ ಆಯಾ ತಾಲ್ಲೂಕಿನವರುಗಳಾದ ತುಮಕೂರು ನಗರ ಶ್ರೀಧರ್ ಮೊ. 8660933076, ತುಮಕೂರು ತಾ॥ ಹರೀಶ್ ಹೆಚ್.ಜಿ. ಮೊ. 9964089979, ಗುಬ್ಬಿ ಕಾರ್ತಿಕ್ ಜಿ.ಡಿ. ಮೊ. 9986355045, ತಿಪಟೂರು ವರದರಾಜು(ಡೈನಾಮಿಕ್) ಮೊ. 9743061676, ಚಿ.ನಾ.ಹಳ್ಳಿ ಪ್ರವೀಣ್ ಸಿ ಮೊ. 8951293964, ಪಾವಗಡ ನೀಲಕಂಠ ಮೊ. 9743942255, ತುರುವೇಕೆರೆ ಲೋಕೇಶ್ ಆರ್ ಮೊ. 9113288994, ಕೊರಟಗೆರೆ ಉಮೇಶ್ ಬಿ ಮೊ. 9663660050, ಕುಣಿಗಲ್ ಹೇಮಂತ್ ಯು ಮೊ. 7090318733, ಮಧುಗಿರಿ ಪ್ರದೀಪ್ ಮೊ. 9902849448 ಇವರುಗಳನ್ನು ಸಂಪರ್ಕಿಸಿ ಅರ್ಜಿಗಳನ್ನು ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : 11–08–2026 ಮಂಗಳವಾರ ಆಗಿರುತ್ತದೆ ಎಂದು ತುಮಕೂರು ಜಿಲ್ಲಾ ಸವಿತಾ ಸಮಾಜ ಯುವಪಡೆಯ ಅಧ್ಯಕ್ಷರಾದ ಕಟ್‌ವೆಲ್ ರಂಗನಾಥ್ ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

‘ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಗೆ ತುಮಕೂರು ಜಿಲ್ಲೆ ಸೂಕ್ತ’

ಜಿಲ್ಲೆಯಲ್ಲಿ ವಿಮಾನ ನಿಲ್ದಾಣ ಸ್ಥಾಪನೆಗೆ ಸರ್ಕಾರಕ್ಕೆ ವಿವಿಧ ವಾಣಿಜ್ಯ ಸಂಸ್ಥೆಗಳ ಒತ್ತಾಯ


ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ರಾಜ್ಯದ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಗೆ ಬೆಂಗಳೂರಿಗೆ ಸಮೀಪವಿರುವ ತುಮಕೂರು ಜಿಲ್ಲೆ ಅತ್ಯಂತ ಸೂಕ್ತ ಸ್ಥಳವಾಗಿದ್ದು ಆದ್ಯತೆಯಾಗಿ ಪರಿಗಣಿಸಬೇಕು ಎಂದು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಮಂಡಳಿ ಹಾಗೂ ಅದರ ಅಂಗ ಸಂಸ್ಥೆಗಳ ಮುಖಂಡರು ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ಮನವಿ ಮಾಡಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಪಾಂಡುರಂಗ ಕುರಂದವಾಡ ಅವರು ಶನಿವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ. ರಾಜ್ಯದಲ್ಲಿ ವೇಗವಾಗಿ ಬೆಳೆಯುತ್ತಿರುವ ವಿಮಾನಯಾನ, ಕೈಗಾರಿಕಾ, ವಾಣಿಜ್ಯ ಹಾಗೂ ಪ್ರಯಾಣಿಕರ ಅವಶ್ಯಕತೆಗಳನ್ನು ಪೂರೈಸಲು ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪಿಸುವ ಸರ್ಕಾರದ ದೂರದೃಷ್ಟಿಯ ನಿರ್ಧಾರ ಸ್ವಾಗತಾರ್ಹ. ಈ ಮಹತ್ವಾಕಾಂಕ್ಷೆಯ ಮೂಲ ಸೌಕರ್ಯ ಯೋಜನೆಗೆ ಆಯ್ಕೆಯಾಗುವ ಸ್ಥಳವು ಮುಂದಿನ ಹಲವು ದಶಕಗಳ ಕಾಲ ಕರ್ನಾಟಕದ ಆರ್ಥಿಕ ಬೆಳವಣಿಗೆ, ಕೈಗಾರಿಕಾ ಅಭಿವೃದ್ಧಿ ಮತ್ತು ಸಂಪರ್ಕ ವ್ಯವಸ್ಥೆಯನ್ನು ನಿರ್ಧರಿಸಲಿದೆ. ದೀರ್ಘಾವಧಿಯ ರಾಜ್ಯಾಭಿವೃದ್ಧಿಗೆ ಮಹತ್ವದ ಈ ಯೋಜನೆಗೆ ತುಮಕೂರುಜಿಲ್ಲೆ ವಿಶಿಷ್ಟವಾದ ಕಾರ್ಯತಂತ್ರದ ಅನುಕೂಲಗಳನ್ನು ಹೊಂದಿದೆ ಎಂದು ಹೇಳಿದರು.

ತುಮಕೂರೇ ಏಕೆ?

ಭಾರತದ ಪ್ರಮುಖ ಕೈಗಾರಿಕಾ ಕಾರಿಡಾರ್ ಯೋಜನೆಯಾದ ಚೆನ್ನೈ–ಬೆಂಗಳೂರು ಕೈಗಾರಿಕ ಕಾರಿಡಾರ್‌ನ ಪ್ರಮುಖ ಬೆಳವಣಿಗೆ ಕೇಂದ್ರಗಳಲ್ಲಿ ತುಮಕೂರು ಒಂದಾಗಿದೆ. ಇಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪನೆಯಾದರೆ ಈ ಕೈಗಾರಿಕಾ ಕಾರಿಡಾರ್ ಇನ್ನಷ್ಟು ಬಲಿಷ್ಠವಾಗುವುದರ ಜೊತೆಗೆ ಕರ್ನಾಟಕ ಉತ್ಪಾದನೆ, ಲಾಜಿಸ್ಟಿಕ್ಸ್ ಹಾಗೂ ರಫ್ತು ವ್ಯವಸ್ಥೆಗೆ ಹೊಸ ವೇಗ ದೊರೆಯಲಿದೆ. ಕರ್ನಾಟಕದ ಅತಿದೊಡ್ಡ ಕೈಗಾರಿಕಾ ಅಭಿವೃದ್ಧಿ



ಯೋಜನೆಗಳಲ್ಲಿ ಒಂದಾದ ರಾಷ್ಟ್ರೀಯ ಹೂಡಿಕೆ ಮತ್ತು ಉತ್ಪಾದನಾ ವಲಯ ತುಮಕೂರಿನಲ್ಲಿ ಸ್ಥಾಪನೆಯಾಗುತ್ತಿದೆ. ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು ದೇಶೀಯ ಹಾಗೂ ವಿದೇಶಿ ಹೂಡಿಕೆದಾರರಿಗೆ ವಿಶ್ವ ಮಟ್ಟದ ಸಂಪರ್ಕವನ್ನು ಒದಗಿಸಿ, ಈ ವಲಯದ ಸ್ಪರ್ಧಾತ್ಮಕತೆಯನ್ನು ಗಣನೀಯವಾಗಿ ಹೆಚ್ಚಿಸಲಿದೆ ಎಂದು ಪಾಂಡುರಂಗ ಕುರಂದವಾಡ ಅಭಿಪ್ರಾಯ ವ್ಯಕ್ತಪಡಿಸಿದರು.

2,000 ಎಕರೆಗೂ ಅಧಿಕ ಸರ್ಕಾರ ಭೂಮಿ ಲಭ್ಯ

ಟಿಡಿಸಿಸಿಐ ಮಾಜಿಅಧ್ಯಕ್ಷ ಸುಜ್ಞಾನ ಹಿರೇಮಠ್ ಮಾತನಾಡಿ,



ರಾಷ್ಟ್ರೀಯ ಹೂಡಿಕೆ ಮತು ಉತ್ಪಾದನಾ (ನಿಮ್ಜ್) ಪ್ರದೇಶದಲ್ಲಿ ಈಗಾಗಲೇ 2,000 ಎಕರೆಗೂಅಧಿಕ ನಿರಂತರ ಸರ್ಕಾರ ಭೂಮಿ ಲಭ್ಯವಿದೆ.ಇದರಿಂದ ಭೂಸ್ವಾಧೀನದ ಅಗತ್ಯವು ಬಹುತೇಕ ಇಲ್ಲದಂತಾಗುತ್ತದೆ. ಪುನರ್ವಸತಿ ಸಮಸ್ಯೆಗಳು, ನ್ಯಾಯಾಂಗ ವ್ಯಾಜ್ಯಗಳ ಹಾಗೂ ಯೋಜನಾ ವಿಳಂಬಗಳು ಕಡಿಮೆಯಾಗುವುದರ ಜೊತೆಗೆ ಸಾರ್ವಜನಿಕ ಹಣದ ಉಳಿತಾಯದೊಂದಿಗೆ ಯೋಜನೆಯನ್ನು ಶೀಘ್ರವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುತ್ತದೆ ಎಂದರು.

ಕರ್ನಾಟಕದ ಮಧ್ಯ,ಉತ್ತರ ಹಾಗೂ ಪಶ್ಚಿಮ ಭಾಗಗಳ 17 ಜಿಲ್ಲೆಗಳಿಗೆ ತುಮಕೂರು ಪ್ರವೇಶ ದ್ವಾರವಾಗಿದೆ. ಆದ್ದರಿಂದ ಈ ವಿಮಾನ ನಿಲ್ದಾಣವು ಬೆಂಗಳೂರು ಮಾತ್ರವಲ್ಲದೆ ರಾಜ್ಯದ ವಿಶಾಲ ಪ್ರದೇಶದ ಜನತೆಗೆ ಹಾಗೂ ಕೈಗಾರಿಕೆಗಳಿಗೆ ಸೇವೆ ಸಲ್ಲಿಸಲಿದೆ. ರಾಷ್ಟ್ರೀಯ ಹೆದ್ದಾರಿ–48, ರಾಷ್ಟ್ರೀಯ ಹೆದ್ದಾರಿ–206, ಇತರೆ ಪ್ರಮುಖ ಹೆದ್ದಾರಿಗಳು, ವ್ಯಾಪಕರಾಜ್ಯ ಹೆದ್ದಾರಿ ಜಾಲ ಹಾಗೂ ಬೆಂಗಳೂರು–ಉತ್ತರ ಕರ್ನಾಟಕ–ಮಹಾರಾಷ್ಟ–ಗೋವಾ ಸೇರಿದಂತೆ ದೇಶದ ವಿವಿಧ ಭಾಗಗಳನ್ನು ಸಂಪರ್ಕಿಸುವ ರೈಲು ಮಾರ್ಗಗಳು ತುಮಕೂರಿಗೆ ಅತ್ಯುತ್ತಮ ಸಂಪರ್ಕವನ್ನು ಒದಗಿಸಿವೆ. ಇದು ಸಮಗ್ರ ಸಾರಿಗೆ ಮತ್ತು ಲಾಜಿಸ್ಟಿಕ್ಸ್ ಕೇಂದ್ರವಾಗಿ ಬೆಳೆಯಲು ಅತ್ಯಂತ ಅನುಕೂಲಕರವಾಗಿದೆ ಎಂದು ಹೇಳಿದರು.

ಕೈಗಾರಿಕಾ ಹಾಗೂ ಲಾಜಿಸ್ಟಿಕ್ಸ್ ಕೇಂದ್ರ

ಟಿಡಿಸಿಸಿಐ ಮಾಜಿ ಅಧ್ಯಕ್ಷ ಟಿ.ಆರ್.ಲೋಕೇಶ್ ಮಾತನಾಡಿ, ತುಮಕೂರು ಕರ್ನಾಟಕದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಕೈಗಾರಿಕಾ ಜಿಲ್ಲೆಗಳಲ್ಲಿ ಒಂದಾಗಿದೆ.ವಿಮಾನ ನಿಲ್ದಾಣದಿಂದ ಉತ್ಪಾದನೆ, ಎಂಜಿನಿಯರಿಂಗ್, ಏರೋಸ್ಪೇಸ್, ಆಹಾರ ಸಂಸ್ಕರಣೆ, ಔಷಧೋದ್ಯಮ, ಎಲೆಕ್ಟ್ರಾನಿಕ್ಸ್, ಗೋದಾಮು, ಲಾಜಿಸ್ಟಿಕ್ಸ್ ಹಾಗೂ ರಫ್ತುಆಧಾರಿತ ಕೈಗಾರಿಕೆಗಳಿಗೆ ಹೊಸ ಉತ್ತೇಜನದೊರೆತು, ಉದ್ಯೋಗಾವಕಾಶಗಳು ಸೃಷ್ಟಿಯಾಗಲಿದೆ.

ಮತ್ತೊಬ್ಬ ಮಾಜಿ ಅಧ್ಯಕ್ಷರಾದ ಸುರೇಂದ್ರ ಎ. ಷಾ ಮಾತನಾಡಿ, ತುಮಕೂರು ಬಳಿಯ ವಿಮಾನ ನಿಲ್ದಾಣವನ್ನು ಕೇವಲ ಬೆಂಗಳೂರಿನ ಎರಡನೇ ವಿಮಾನ ನಿಲ್ದಾಣವೆಂದು ಪರಿಗಣಿಸದೆ, ಕರ್ನಾಟಕದ ಮುಂದಿನ ಅಂತರರಾಷ್ಟ್ರೀಯ ವಿಮಾನಯಾನ ದ್ವಾರವಾಗಿರೂಪಿಸಬೇಕು.ಇದು ಮುಂದಿನ ಹಲವು ದಶಕಗಳ ಕಾಲ ರಾಜ್ಯದ ಕೈಗಾರಿಕೆ, ಲಾಜಿಸ್ಟಿಕ್ ಹಾಗೂ ರಫ್ತು ಆಧಾರಿತ ತಂತ್ರಜ್ಞಾನ ಹಾಗೂ ಸಮಗ್ರ ಆರ್ಥಿಕ ಅಭಿವೃದ್ಧಿಗೆ ಪ್ರಮುಖ ಚಾಲಕವಾಗಲಿದೆ ಎಂದು ತಿಳಿಸಿದರು.

ಕರ್ನಾಟಕದ ಎರಡನೇ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸ್ಥಳವನ್ನು ಅಂತಿಮಗೊಳಿಸುವ ಸಂದರ್ಭದಲ್ಲಿ, ತುಮಕೂರಿನ ಬಗ್ಗೆ ತಾಂತ್ರಿಕ, ಆರ್ಥಿಕ ಹಾಗೂ ಪರಿಸರದಎಲ್ಲ ಆಯಾಮಗಳನ್ನು ಒಳಗೊಂಡ ಸಮಗ್ರ ಮತ್ತು ವಸ್ತುನಿಷ್ಠ ಮೌಲ್ಯ ಮಾಪನ ನಡೆಸುವಂತೆ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ವಿವಿಧ ಮುಖಂಡರು ಸರ್ಕಾರವನ್ನು ಒತ್ತಾಯಿಸಿದರು.

ಇಂತಹ ನಿಷ್ಪಕ್ಷಪಾತ ಮೌಲ್ಯ ಮಾಪನವು ಸಂಪರ್ಕ ವ್ಯವಸ್ಥೆ, ಮೂಲಸೌಕರ್ಯ, ಭವಿಷ್ಯದ ವಿಸ್ತರಣೆ, ಕೈಗಾರಿಕಾ ಬೆಳವಣಿಗೆ, ಲಾಜಿಸ್ಟಿಕ್ಸ್ ದಕ್ಷತೆ ಹಾಗೂ ಕರ್ನಾಟಕದ ವಿಶಾಲ ಭೌಗೋಳಿಕ ಪ್ರದೇಶಕ್ಕೆ ಸೇವೆ ಸಲ್ಲಿಸುವ ಸಾಮರ್ಥ್ಯಯದ ದೃಷ್ಟಿಯಿಂದ ತುಮಕೂರಿನ ಅತ್ಯುತ್ತಮ ಅರ್ಹತೆಯನ್ನು ಸ್ಪಷ್ಟವಾಗಿ ತೋರಿಸಲಿದೆ ಎಂದು ಹೇಳಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಮೂಲಸೌಕರ್ಯ ಸಮಿತಿ ಅಧ್ಯಕ್ಷ ಜಿ.ಆರ್. ಸುರೇಶ್, ಮಾಜಿ ಅಧ್ಯಕ್ಷ ಸಾಗರನಹಳ್ಳಿ ಪ್ರಭು, ತುಮಕೂರು ಟ್ಯಾಕ್ಸ್ ಪ್ರಾಕ್ಟೀಶಿಯನ್ಸ್ ಅಸೋಸಿಯೇಷನ್ ಅಧ್ಯಕ್ಷ ಸುರೇಶ್‌ರಾವ್, ವಸಂತನರಸಾಪುರ ಕೈಗಾರಿಕಾ ಪ್ರದೇಶದ ಮಾಜಿ ಅಧ್ಯಕ್ಷ ರಾಮಮೂರ್ತಿ, ಟಿಡಿಸಿಸಿಐ ನಿರ್ದೇಶಕರಾದ ಮಲ್ಲೇಶಯ್ಯ, ಆನಂದಕುಮಾರ್, ರವಿಕುಮಾರ್, ಬಸವರಾಜ ಹಿರೇಮಠ್, ತುಮಕೂರು ರೈಸ್ ಮಿಲ್ ಅಸೋಸಿಯೇಷನ್ ಸದಸ್ಯರು ಭಾಗವಹಿಸಿದ್ದರು.

ವಿಚ್ಛೇದನಕ್ಕಾಗಿ ಕೋರ್ಟ್ ಮೆಟ್ಟಿಲೇರಿದ್ದ ದಂಪತಿಗಳು ನ್ಯಾಯಾಧೀಶರ ಮುಂದೆ ಒಂದಾದ 2 ಜೋಡಿ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ: ಕೋರ್ಟ್ ಮೆಟ್ಟಿಲೇರಿದ್ದ 2 ದಂಪತಿಗಳು ನ್ಯಾಯಾಧೀಶರ ಸಮ್ಮುಖದಲ್ಲೇ ಮತ್ತೆ ಒಂದಾದರು

ಪಾವಗಡ: ಸಣ್ಣಪುಟ್ಟ ಭಿನ್ನಾಭಿಪ್ರಾಯದಿಂದ ವಿಚ್ಛೇದನದ ವರೆಗೂ ಹೋಗಿದ್ದ ಎರಡು ದಂಪತಿಗಳು, ನ್ಯಾಯಾಲಯದ ಸಂಧಾನದ ಮೂಲಕ ಮತ್ತೆ ಒಂದಾಗುವ ಮೂಲಕ ಮಾನವೀಯತೆಗೆ ಸಾಕ್ಷಿಯಾದ ಘಟನೆ ಪಾವಗಡ ನ್ಯಾಯಾಲಯದಲ್ಲಿ ನಡೆಯಿತು.

ಕೌಟುಂಬಿಕ ಕಲಹದಿಂದ ಬೇಸತ್ತು ವಿಚ್ಛೇದನ ಕೋರಿ ನ್ಯಾಯಾಲಯದ ಮೊರೆ ಹೋಗಿದ್ದ ಚಂದ್ರಕಲಾ ರಮೇಶ್ ಮತ್ತು ಅರುಣಮಂಜುನಾಥ್ ಎಂಬ ಎರಡು ಜೋಡಿಗಳ ಪ್ರಕರಣಗಳು ಪಾವಗಡ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿದ್ದವು. ವಿಚಾರಣೆ ವೇಳೆ ಗೌರವಾನ್ವಿತ ನ್ಯಾಯಾಧೀಶರು ಹಾಗೂ ಹಿರಿಯ ವಕೀಲರು ದಂಪತಿಗಳಿಗೆ ಪ್ರತ್ಯೇಕವಾಗಿ ಕೂರಿಸಿ ಸಮಾಲೋಚನೆ ನಡೆಸಿದರು. ಸಂಧಾನ ಪ್ರಕ್ರಿಯೆಯಲ್ಲಿನ್ಯಾಯಾಧೀಶರು ದಾಂಪತ್ಯದ ಮಹತ್ವ, ಪರಸ್ಪರ ಹೊಂದಾಣಿಕೆ, ಪ್ರೀತಿ–ವಿಶ್ವಾಸ





ಮತ್ತು ಕೌಟುಂಬಿಕ ಜವಾಬ್ದಾರಿಗಳ ಬಗ್ಗೆ ಆಪ್ತವಾಗಿ ಮನವರಿಕೆ ಮಾಡಿಕೊಟ್ಟರು. ಹಿರಿಯರ ಸಲಹೆಯೂ ದಂಪತಿಗಳಿಗೆ ದಾರಿದೀಪವಾಯಿತು.

ತಮ್ಮ ತಪ್ಪುಗಳನ್ನು ಅರಿತುಕೊಂಡ ಎರಡೂ ಜೋಡಿಗಳು ಹಳೆಯ ಕಹಿ ಘಟನೆಗಳನ್ನು ಮರೆತು ಹೊಸ ಜೀವನ ಆರಂಭಿಸಲು ನಿರ್ಧರಿಸಿದರು. ನ್ಯಾಯಾಲಯದ ಆವರಣದಲ್ಲೇ ಪರಸ್ಪರ ಹಾರ ಬದಲಾಯಿಸಿಕೊಂಡು ಒಟ್ಟಿಗೆ ಹೆಜ್ಜೆ ಇಟ್ಟ ದೃಶ್ಯ ನೆರೆದಿದ್ದವರ ಕಣ್ಣು ತುಂಬಿಸಿತು.

ಈ ಕುರಿತು ಮಾತನಾಡಿದ ನ್ಯಾಯಾಲಯದ ಮೂಲಗಳು, ಸಂಸಾರದಲ್ಲಿ ಸಣ್ಣಪುಟ್ಟ ಜಗಳಗಳು ಸಹಜ. ಆದರೆ ವಿಚ್ಛೇದನವೇ ಅಂತಿಮ ಪರಿಹಾರವಲ್ಲ. ಮುಕ್ತ ಮಾತುಕತೆ ಮತ್ತು ರಾಜಿ ಸಂಧಾನದ ಮೂಲಕ ಯಾವುದೇ ದೊಡ್ಡ ಕೌಟುಂಬಿಕ ಸಮಸ್ಯೆಯನ್ನು ಬಗೆಹರಿಸಬಹುದು ಎಂಬುದಕ್ಕೆ ಈ ಘಟನೆ ಉದಾಹರಣೆ ಎಂದು ಹೇಳಿದರು. ವಿಚ್ಛೇದನದ ಅಂಚಿಗೆ ತಲುಪಿದ್ದ ಎರಡು ಕುಟುಂಬಗಳನ್ನು ಮತ್ತೆ ಒಗ್ಗೂಡಿಸಿದ ಪಾವಗಡ ನ್ಯಾಯಾಲಯದ ನ್ಯಾಯಾಧೀಶರು, ವಕೀಲರು ಮತ್ತು ಸಂಧಾನಕಾರರ ಪ್ರಯತ್ನಕ್ಕೆ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

ಈ ಘಟನೆ ಸಮಾಜಕ್ಕೆ ಮಾದರಿಯಾಗಿದ್ದು, ಕೌಟುಂಬಿಕ ಸಮಸ್ಯೆಗಳಿಗೆ ಕಾನೂನಿಗಿಂತಲೂ ಸಂವಾದವೇ ದೊಡ್ಡ ಪರಿಹಾರ ಎಂಬ ಸಂದೇಶ ನೀಡಿದೆ.

ಕಾಮಾಕ್ಷಿ ಕೈಮಗ್ಗ ಮೇಳ ಉದ್ಘಾಟಿಸಿದ ಜ್ಯೋತಿಗಣೇಶ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ನಗರದ ಹೊರಪೇಟೆ ರಸ್ತೆಯ ನೀಲಕಂಠೇಶ್ವರ ದೇವಸ್ಥಾನ ಸಮುದಾಯ ಭವನದಲ್ಲಿ ಕೈಮಗ್ಗ ನೇಕಾರರ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಶನಿವಾರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಉದ್ಘಾಟಿಸಿದರು.



ನಂತರ ಮಾತನಾಡಿದ ಶಾಸಕರು, ನೇಕಾರರ ಕುಲಕಸುಬನ್ನು ಉತ್ತೇಜಿಸಬೇಕು, ಇವರು ನೇಯ್ಗೆ ಮಾಡಿದ ಕೈಮಗ್ಗದ ಬಟ್ಟೆಗಳನ್ನು ಖರೀದಿಸಿ ಪ್ರೋತ್ಸಾಹಿಸಬೇಕು. ಮೇಳದಲ್ಲಿ ಗುಣಮಟ್ಟದ ಸೀರೆ, ಮತ್ತಿತರ ಬಟ್ಟೆಗಳು ರಿಯಾಯಿತಿ ದರದಲ್ಲಿ ಮಾರಾಟ ವ್ಯವಸ್ಥೆ ಮಾಡಲಾಗಿದೆ. ಮಹಿಳೆಯರು ಬಂದು ಖರೀದಿಸಬೇಕು ಎಂದು ಮನವಿ ಮಾಡಿದರು.

ನೇಕಾರ ಸಂಘಗಳು ನೇಯ್ದ ಬಟ್ಟೆಗಳಿಗೆ ಮಾರುಕಟ್ಟೆ ಒದಗಿಸುವ ಸಲುವಾಗಿ ನೇಕಾರರ ಕುಟುಂಬದವರ ಕೈಮಗ್ಗದ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟದ ಕಾಮಾಕ್ಷಿ ಕೈಮಗ್ಗ ಮೇಳ ಹಮ್ಮಿಕೊಳ್ಳಲಾಗಿದೆ. ನೇಕಾರರಿಂದ ನೇರ ಗ್ರಾಹಕರಿಗೆ ಕೈಮಗ್ಗದ ತಲುಪಿಸುವ ಆಶಯದ ಈ ಮೇಳದಲ್ಲಿ ಆಕರ್ಷಕ ರಿಯಾಯಿತಿ ವ್ಯವಸ್ಥೆ ಇದೆ. ಕೈಮಗ್ಗ ನೇಕಾರರಿಂದ ತಯಾರಿಸಲ್ಪಟ್ಟ ಅಪ್ಪಟ ರೇಷ್ಮೆ ಸೀರೆಗಳು, ಮೈಸೂರು ಸಿಲ್ಕ್, ಮೊಳಕಾಲ್ಮೂರು ಸೀರೆ, ಕಂಚಿ ಸೀರೆಗಳು, ರೇಷ್ಮೆ ಶರ್ಟ್ ಪೀಸ್, ಕುರ್ತಿಸ್ ಟಾಪ್, ಧರ್ಮಾವರಂ ಸೀರೆಗಳು, ಜೈಪುರ್ ಸೀರೆಗಳು, ಕೊಲ್ಕತ್ತ ಸೀರೆಗಳು, ದೆಹಲಿ ಸೀರೆಗಳು, ಬಾಗಲ್‌ಕೂರ್ ಸೀರೆಗಳು ಕಾಟನ್ ಸೀರೆಗಳು, ಕಾಶ್ಮೀರ್ ಶಾಲುಗಳ ಪ್ರದರ್ಶನ ಮಾರಾಟ ವ್ಯವಸ್ಥೆ ಮಾಡಲಾಗಿದೆ ಎಂದು ಆಯೋಜನರಾದ ನೇಕಾರಿಕೆಯಲ್ಲಿ ರಾಜ್ಯ ಪ್ರಶಸ್ತಿ ಪಡೆದಿರುವ ಆರ್. ಮಂಜುನಾಥ್ ಹೇಳಿದರು.

ಕುರುಹಿನಶೆಟ್ಟಿ ಕೇಂದ್ರ ಸಂಘದ ಬೆಂಗಳೂರು ವಿಭಾಗದ ಉಪಾಧ್ಯಕ್ಷ ಎನ್. ವೆಂಕಟೇಶ್, ಜಿಲ್ಲಾ ಕುರುಹಿನಶೆಟ್ಟಿ ಸಂಘದ ಅಧ್ಯಕ್ಷ ಯೋಗಾನಂದ್, ನೀಲಕಂಠೇಶ್ವರ ದೇವಸ್ಥಾನ ಟ್ರಸ್ಟ್ ಕಾರ್ಯದರ್ಶಿ ಟಿ.ಹೆಚ್. ರಾಮಚಂದ್ರ, ಜಿಲ್ಲಾ ಬಿಜೆಪಿ ಹಿಂದುಳಿದ ವರ್ಗಗಳ ಕಾರ್ಯದರ್ಶಿ ಅನಿಲ್‌ಕುಮಾರ್ ಮೊದಲಾದವರು ಭಾಗವಹಿಸಿದ್ದರು.

ಮಹಮದ್ ಪೈಗಂಬರ್‌ಬಗ್ಗೆ ಅವಹೇಳನಕಾರಿ ಮಾತು ಖಂಡಿಸಿ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದ ಮಹಿಳೆಯೊಬ್ಬರು ಪ್ರವಾದಿ ಮಹಮದ್ ಪೈಗಂಬರ್ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವುದನ್ನು ಖಂಡಿಸಿ, ಆಕೆಯ ವಿರುದ್ಧಕಠಿಣ ಕಾನೂನು ಕ್ರಮಜರುಗಿಸಬೇಕೆಂದು ಒತ್ತಾಯಿಸಿ ಮಜೀದ್ ಇ ಅಲ್ಲಾ ನೇತೃತ್ವದಲ್ಲಿ ನೂರಾರು ಮುಸ್ಲಿಂ ಭಾಂಧವರು ಜಿಲ್ಲಾಧಿಕಾರಿಗಳ ಕಚೇರಿ ಬಳಿ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ನಗರದ ಗುಂಚಿ ಸರ್ಕಲ್‌ನಲ್ಲಿ ಮಸೀದಿಯಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಮೆರವಣಿಗೆಯಲ್ಲಿ ಆಗಮಿಸಿದ ನೂರಾರು ಮುಸ್ಲಿಂ ಭಾಂಧವರು ಪ್ರವಾದಿ ಮಹಮದ್ ಪೈಗಂಬರ್ ಅವರ ಬಗ್ಗೆ ಸಂದರ್ಶನವೊಂದರಲ್ಲಿ ಅವಹೇಳನಕಾರಿಯಾಗಿ ಮಾತನಾಡಿರುವ ನಾಜಿಯಾ ಇಲಾಹಿ ಖಾನ್ ಎಂಬ ಮಹಿಳೆಯನ್ನು ಬಂಧಿಸಿ, ಆಕೆಗೆ ಕಠಿಣ ಶಿಕ್ಷೆ ವಿಧಿಸಬೇಕುಎಂದು ಒತ್ತಾಯಿಸಿ, ಆಕೆಯ ಭಾವ ಚಿತ್ರಕ್ಕೆ ಬೆಂಕಿ ಹಚ್ಚಿಆಕ್ರೋಶ ವ್ಯಕ್ತಪಡಿಸಿದರು.

ಮಹಮದ್ ಪೈಗಂಬರ್ ಮತ್ತುಅವರ ಪತ್ನಿಯ ಬಗ್ಗೆ ಆಧಾರವಿಲ್ಲದ ಆರೋಪ ಮಾಡುತ್ತಾ, ತೀರ ತುಚ್ಛವಾಗಿ ಮಾತನಾಡಿರುವ ನಾಜಿಯಾ ಇಲಾಹಿ ಖಾನ್ ಉದ್ದೇಶ ಪೂರ್ವಕವಾಗಿಯೇ ಈ ಹೇಳಿಕೆ ನೀಡಿ,ನಮ್ಮ ಮನಸ್ಸಿಗೆ ನೋವುಂಟು ಮಾಡಿದ್ದಾರೆ. ಹಾಗಾಗಿ ಅವರ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು.ಅವರಿಗೆ ಗಲ್ಲು ಶಿಕ್ಷೆ ವಿಧಿಸಬೇಕು ಎಂದು ಮನವಿಯ ಮೂಲಕ ಸರಕಾರವನ್ನು ಒತ್ತಾಯಿಸಿದರು.

ಕರ್ನಾಟಕ ಮುಸ್ಲಿಂ ಜಮಾಅತೆಯ ತುಮಕೂರು ಉಸ್ತುವಾರಿ ಅಬ್ದುರ್ ರೆಹಮಾನ ಮೊಗರ್ ಪಾಣೆ ಮಾತನಾಡಿ, ದೇವದೂತರಾದ ಪ್ರವಾದಿ ಮಹಮದ್‌ರ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡುತ್ತಿರುವ ನಾಜಿಯಾ ಇಲಾಹಿ ಖಾನ್ ಹೇಳಿಕೆಯನ್ನು ಖಂಡಿಸಿ, ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸುತ್ತಿದ್ದೇವೆ. ಆಕೆಯ ವಿರುದ್ಧ ಸರಕಾರ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ತಿಳಿಸಿದರು.

ಮಜೀದ್ ಇ ಅಲ್ಲಾ ನ ಕಾರ್ಯದರ್ಶಿ ಫಯಾಜ್‌ಖಾನ್ ಮಾತನಾಡಿ, ನಾಜಿಯಾ ಇಲಾಹಿ ಖಾನ್ ಎಂಬ ಮಹಿಳೆ, ಹೋದ ಬಂದಲ್ಲಿ ನಮ್ಮ ಪ್ರವಾದಿ ಮತ್ತುಅವರ ಪತ್ನಿ ವಿರುದ್ಧ ಅವಹೇಳನಕಾರಿಯಾಗಿ ಮಾತನಾಡುವ ಮೂಲಕ ನಮ್ಮಗಳ ಮನಸ್ಸಿಗೆ ನೋವುಂಟು ಮಾಡುತ್ತಿದ್ದಾರೆ.ಆಕೆಯ ಹೇಳಿಕೆ ನಿಜಕ್ಕೂ ನಮಗೆಲ್ಲರಿಗೂ ನೋವುಂಟು ಮಾಡಿದೆ. ಹಾಗಾಗಿ ಸರಕಾರಈಕೆಯ ವಿರುದ್ಧ ಕಠಿಣ ಕ್ರಮ ಜರುಗಿಸಬೇಕೆಂದರು.

ಪ್ರತಿಭಟನೆಯಲ್ಲಿ ವಕ್ಫ್ ಸಮಿತಿ ಮಾಜಿ ಉಪಾಧ್ಯಕ್ಷರಾದ ಮೌಲಾನಾ ಆರೀಫ್‌ರಜಾ, ರಿಜ್ವಾನ್ ಪಾಷ ಜುನೇದಿ, ಅಭ್ರಹಾರ್ ಖಾದ್ರಿ, ಸನ್ನತ್ ಸ್ಟೂಡೆಂಟ್ ಆರ್ಗನೈಜೇಷನ್‌ನ ಅಧ್ಯಕ್ಷರು, ಪದಾಧಿಕಾರಿಗಳು, ಸುನ್ನತ್ ಜಮಾಅತೆ ಮೌಲ್ವಿಗಳು, ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ನೌಕರರ ಡಿಜಿಟಲ್ ಹಾಜರಾತಿ ವ್ಯವಸ್ಥೆ ಎಲ್ಲಾ ಗ್ರಾಪಂಗಳಲ್ಲಿಯೂ ಕಲ್ಪಿಸಬೇಕು

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು ; ಗ್ರಾಮ ಪಂಚಾಯತಿ ನೌಕರರಿಗೆ 2026ರ ಮೇ 22ರಿಂದ ಜಾರಿಯಾಗಿರುವ ಕನಿಷ್ಠ ವೇತನವನ್ನು ಅದೇ ದಿನಾಂಕದಿಂದಲೇ ಅನ್ವಯವಾಗುವಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ತಕ್ಷಣ ಜಾರಿಗೊಳಿಸಬೇಕು ಎಂದು ಸರ್ಕಾರ ಹಾಗೂ ಜಿಲ್ಲಾಡಳಿತವನ್ನು ಒತ್ತಾಯಿಸಲಾಯಿತು.

ಗ್ರಾಮ ಪಂಚಾಯಿತಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಾಟರ್‌ಮನ್ ಸಿಬ್ಬಂದಿಗೆ ತಮ್ಮ ಕೇಂದ್ರಸ್ಥಾನದಲ್ಲಿಯೇ ಮೊಬೈಲ್ ಮೂಲಕ ಹಾಜರಾತಿ ದೃಢೀಕರಣ (Attendance Authentica t ion) ಮಾಡುವ ವ್ಯವಸ್ಥೆಯನ್ನು ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲೂ ಕಲ್ಪಿಸಬೇಕು. ಈ ಕುರಿತು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ (PDO) ಸ್ಪಷ್ಟನಿರ್ದೇಶನನೀಡಬೇಕು ಎಂದು ಸಭೆ ಆಗ್ರಹಿಸಿತು. ರಾಜ್ಯ ಉಪಾಧ್ಯಕ್ಷ ಗೋಪಾಲಕೃಷ್ಣ ಅವರು ರಾಜ್ಯ ಮಟ್ಟದಲ್ಲಿ ನಡೆದ ಸಭೆಯ ತೀರ್ಮಾನಗಳನ್ನು ಸಭೆಗೆ ವಿವರಿಸಿದರು. ಪ್ರಮುಖವಾಗಿ ಸ್ವಚವಾಹಿನಿಯಲ್ಲಿ ದುಡಿಯುತ್ತಿರುವ ಮಹಿಳಾ ನೌಕರರನ್ನು ಗ್ರಾಮ ಪಂಚಾಯತಿ ನೌಕರರೆಂದು ಪರಿಗಣಿಸಿ ಅವರಿಗೆ ಕನಿಷ್ಠ ವೇತನ ನಿಗದಿ ಮಾಡಬೇಕೆಂದರು. ಸಂಘದ



ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಡಿ. ನಾಗೇಶ್ ಮಾತನಾಡಿ, ಜಿಲ್ಲೆಯಲ್ಲಿ ಸಂಘಟನೆಯನ್ನು ಇನ್ನಷ್ಟು ಬಲಿಷ್ಠಗೊಳಿಸಲು ಎಲ್ಲಾ ಗ್ರಾಮ ಪಂಚಾಯತಿ ನೌಕರರು ಸದಸ್ಯತ್ವ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಅಧ್ಯಕ್ಷ ಎನ್.ಕೆ. ಸುಬ್ರಹ್ಮಣ್ಯ ಮಾತನಾಡಿ, ಗ್ರಾಮ ಪಂಚಾಯತಿ ನೌಕರರು ಹಲವಾರು ಕಾನೂನುಬದ್ಧ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು. ವಿಶೇಷವಾಗಿ ಗ್ರಾಮ ಪಂಚಾಯಿತಿಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಸಿಬ್ಬಂದಿಗೆ ಕಾನೂನುಬದ್ಧವಾಗಿ ನೀಡಬೇಕಾದ ಉಪಧನ (Gratuity) ಅನ್ನು ವಿಳಂಬವಿಲ್ಲದೆ ಮಂಜೂರು ಮಾಡುವಂತೆ ಹಾಗೂ ಇತ್ತೀಚೆಗೆ ತುಮಕೂರು ಜಿಲ್ಲಾ ಪಂಚಾಯಿತಿಯಿಂದ ಗ್ರಾಮ ಪಂಚಾಯತಿಗಳಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಗೊಂಡ ಸಿಬ್ಬಂದಿ ಹಾಗೂ ವಿವಿಧ ಕಾರಣಗಳಿಂದ ಅನುಮೋದನೆ ಬಾಕಿ ಉಳಿದಿದ್ದ ಸಿಬ್ಬಂದಿಯ ನೇಮಕಾತಿಗಳಿಗೆ ಅನುಮೋದನೆ ನೀಡಲಾಗಿದೆ. ಆದರೆ, ಈ ಪ್ರಕ್ರಿಯೆಯಲ್ಲಿ ಜಿಲ್ಲಾ ಪಂಚಾಯಿತಿಯೊಳಗೆ ವ್ಯಾಪಕ ಭ್ರಷ್ಟಾಚಾರ ನಡೆಯುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿದ್ದು, ಹಣ ನೀಡಿದವರಿಗೆ ಮಾತ್ರ ಅನುಮೋದನೆ ಆದೇಶ (Approval Copy) ನೀಡಲಾಗುತ್ತಿದೆ ಎಂಬ ದೂರುಗಳು ಸಂಘದ ಗಮನಕ್ಕೆ ಬಂದಿವೆ.

ಈ ಸಂಬಂಧ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ, ಕೇಳಿಬರುತ್ತಿರುವ ಭ್ರಷ್ಟಾಚಾರದ ಆರೋಪಗಳ ಬಗ್ಗೆ ಸಮಗ್ರ ತನಿಖೆ ನಡೆಸಬೇಕು. ಅರ್ಹತೆ ಹೊಂದಿರುವ ಎಲ್ಲಸಿಬ್ಬಂದಿಗೂ ಯಾವುದೇ ಭೇದಭಾವ ಅಥವಾ ಭ್ರಷ್ಟಾಚಾರಕ್ಕೆ ಅವಕಾಶ ನೀಡದೆ, ನಿಯಮಾನುಸಾರ ಅನುಮೋದನೆ ಆದೇಶಗಳನ್ನು ನೀಡುವಂತೆ ಸಭೆಯು ಸರ್ಕಾರ ಹಾಗೂ ಜಿಲ್ಲಾಡಳಿತವನ್ನು ಒತ್ತಾಯಿಸಿದರು.

ಸಭೆಯಲ್ಲಿ ಜಿಲ್ಲಾ ಖಜಾಂಚಿ ಶಂಕ್ರಪ್ಪ, ದೇವರಾಜು, ತಾಲೂಕು ಉಪಾಧ್ಯಕ್ಷರಾದ ರಮೇಶ್, ಉಮೇಶ್ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಪದಾಧಿಕಾರಿಗಳು ಮತ್ತು ಸದಸ್ಯರು ಭಾಗವಹಿಸಿದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.